24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 23 | ನವದೆಹಲಿ | ಬೆಲೆ ₹ 10 | ಜುಲೈ 19, 2026, ಭಾನುವಾರ

## ಭಾವಪೂರ್ಣ ಶ್ರದ್ಧಾಂಜಲಿ



# ಶ್ರೀಮತಿ ಚೆನ್ನಮ್ಮ

(ಸನ್ಮಾನ್ಯ ಮಾಜಿ ಪ್ರಧಾನಿಗಳಾದ ದೇವೇಗೌಡರ ಧರ್ಮಪತ್ನಿ)

**1941- 2026**

ನಿಮ್ಮ ಅಗಲಿಕೆ ನಮ್ಮೆಲ್ಲರ ಹೃದಯವನ್ನು ಭಾರವಾಗಿಸಿದೆ.
ನಿಮ್ಮ ಸೌಮ್ಯ ಸ್ವಭಾವ, ಪ್ರೀತಿ ಮತ್ತು ಮಮತೆ ಸದಾ ನಮ್ಮ
ನೆನಪಿನಲ್ಲಿ ಜೀವಂತವಾಗಿರುತ್ತದೆ.

**ಇಂತಿ ದುಃಖತಪ್ತರು:**

**ಹೆಚ್.ಡಿ.ಕುಮಾರಸ್ವಾಮಿ** ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವರು,
ಪುತ್ರರು, ಪುತ್ರಿಯರು ಹಾಗೂ ಅಳಿಯಂದಿರು, ಸೊಸೆಯಂದಿರು,
ಮೊಮ್ಮಕ್ಕಳು ಮತ್ತು ಕುಟುಂಬಸ್ಥರು

## ನಿತ್ಯ ಪಂಚಾಂಗ 19.07.2026 ಭಾನುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ ಋತು, ಚಾಂದ್ರಮಾನ, ಚೈತ್ರ-ವೈಶಾಖ ಮಾಸ

ಕದಳೀಗೌರೀ ವ್ರತ, ರಂಭಾ ತೃತೀಯಾ, ಕೈವಾರ ಮಹಾರಾಜ ಆರಾಧನೆ, ಮೊಹರಂ ತಿಂಗಳ ಆರಂಭ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಬರ ಪರಿಸ್ಥಿತಿ ಪರಿಶೀಲನೆಗೆ ಇಂದು ಡಿಸಿ, ಸಿಇಓಗಳ ಜೊತೆ ವಿಡಿಯೋ ಸಂವಾದ: ಸಿಎಂ ಡಿಕೆಶಿ

**ಬೆಂಗಳೂರು, ಜು.18:** ರಾಜ್ಯದಲ್ಲಿ ಬರ ಪರಿಸ್ಥಿತಿ, ಮಳೆಗಾಲ, ಕುಡಿಯುವ ನೀರು ಸೇರಿದಂತೆ ಹಲವು ಪ್ರಮುಖ ವಿಷಯಗಳ ಬಗ್ಗೆ ಭಾನುವಾರ ವಿಡಿಯೋ ಸಂವಾದ ಮೂಲಕ ಸಭೆ ನಡೆಸಲಿದ್ದೇನೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಳೆ ತುರ್ತು ಸಚಿವ ಸಂಪುಟ ಸಭೆ ಕರೆಯಲಾಗಿದೆ. ಅದಕ್ಕೂ ಮುನ್ನ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಸಿಇಒ ಗಳೊಂದಿಗೆ ವಿಡಿಯೋ ಸಂವಾದ ನಡೆಸಿ ಬರ ಪರಿಸ್ಥಿತಿ ಬಗ್ಗೆ ಚರ್ಚಿಸಲಾಗುವುದು ಎಂದರು. ಮಳೆಗಾಲದಲ್ಲಿ ಕೈಗೊಳ್ಳಬಹುದಾದ ಪೂರಕ ಕ್ರಮಗಳು ಹಾಗೂ ಬರಗಾಲ ತಲೆದೋರಿದಾಗ ಜನರು ಹೆಚ್ಚಿನ ಸಂಖ್ಯೆಯಲ್ಲಿ ಗುಳೆ ಹೋಗುತ್ತಿರುವ ಮಾಹಿತಿ ಸರ್ಕಾರಕ್ಕೆ ಬಂದಿದ್ದು, ಇದನ್ನು ತಪ್ಪಿಸಲು ತೆಗೆದುಕೊಳ್ಳಬಹುದಾದ ಅಗತ್ಯ ಕ್ರಮಗಳ ಬಗ್ಗೆಯೂ ಚರ್ಚಿಸಲಾಗುವುದು. ಈ ಬಗ್ಗೆ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದ್ದು, ಮಳೆಯ ಪ್ರಮಾಣ ಸೇರಿದಂತೆ ಹಲವು ಮಾಹಿತಿ ಹಾಗೂ ಅಂಕಿಅಂಶಗಳನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ತಿಳಿಸಿದರು. "ರಾಜ್ಯದ ವಿವಿಧ ಜಿಲ್ಲೆಗಳಿಗೆ ಪರಿಸ್ಥಿತಿಗೆ ತಕ್ಕಂತೆ ಕುಡಿಯುವ ನೀರನ್ನು ನೀಡಲಾಗಿದೆ. ಮಂಡ್ಯ ಹಾಗೂ ಯಾವುದೇ ಜಿಲ್ಲೆಗಳು ಈ ನೀರನ್ನು ಕೃಷಿ ಚಟುವಟಿಕೆಗಳಿಗೆ ಬಳಸುವಂತಿಲ್ಲ. ಜಲಾಶಯಗಳ ನೀರಿನ ಸಂಗ್ರಹ ಪರಿಶೀಲಿಸಿ ರೈತರ ಕೃಷಿ ಚಟುವಟಿಕೆಗಳಿಗೆ ನೀರಿನ ವ್ಯವಸ್ಥೆ ಪೂರೈಸಲಾಗುವುದು. ಆದರೆ ಕುಡಿಯುವ ನೀರನ್ನು ಕೃಷಿಗೆ ಬಳಸಿ, ನಂತರ ಬಿತ್ತನೆ, ನಾಟಿ



ಮುಂತಾದ ಕೆಲಸಗಳಿಗೆ ನೀರು ಸರಬರಾಜು ಮಾಡಲು ಸರ್ಕಾರದ ಮೇಲೆ ಒತ್ತಡ ಹೇರಬಾರದು" ಎಂದು ತಿಳಿಸಿದ ಮುಖ್ಯಮಂತ್ರಿಗಳು ಕಾವೇರಿ ಹಾಗೂ ತುಂಗಾಭದ್ರಾ ನೀರಿನ ಹಂಚಿಕೆ ವಿಚಾರದಲ್ಲಿ ನೆರೆ ರಾಜ್ಯಗಳಿಂದ ಬಹಳ ಒತ್ತಡವಿದ್ದು, ಜಲಾಶಯಗಳು ಭರ್ತಿಯಾದ ನಂತರ ರೈತರ ಕೃಷಿ ಚಟುವಟಿಕೆಗಳಿಗೂ ನೀರು ಪೂರೈಸಲಾಗುವುದು ಎಂದರು.

**ಕಾವೇರಿ ಹಂಚಿಕೆ:** ಈ ಬಾರಿಯ ಸಂಸತ್ತು ಮುಂಗಾರು ಅಧಿವೇಶನದಲ್ಲಿ ಕಾವೇರಿ ನೀರು ಹಂಚಿಕೆಯ ವಿಚಾರ ಚರ್ಚೆಗೆ ಬರುತ್ತಿರುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿ, ಕಾವೇರಿ ನೀರಿನ ಹಂಚಿಕೆಯ ಬಗ್ಗೆ ರಾಜ್ಯವೂ ಸೂಕ್ತ ಮಾಹಿತಿಗಳನ್ನು ನೀಡುವುದಲ್ಲದೆ, ಈ ಬಗ್ಗೆ ಚರ್ಚಿಸಲು ನಾನೇ ಖುದ್ದು ನವದೆಹಲಿಗೆ ಭೇಟಿ ನೀಡುತ್ತೇನೆ. ಕಾವೇರಿ ನೀರು ಕರ್ನಾಟಕದ ಹಕ್ಕು ಎಂಬುದರಲ್ಲಿ ಯಾವುದೇ ಅನುಮಾನವಿಲ್ಲ. ಇದಕ್ಕೆ ಸಂಬಂಧಿಸಿದ ವಾಸ್ತವಾಂಶಗಳನ್ನು ಸಂಸದರಿಗೆ ನೀಡಲಾಗುವುದು. ಕಾವೇರಿ ನೀರು ಹಂಚಿಕೆಯ ಬಗ್ಗೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಹಾಗೂ ಕಾವೇರಿ ನೀರು ನಿಯಂತ್ರಣ ಸಮಿತಿ ನಿರ್ಧಾರ ಕೈಗೊಳ್ಳಬೇಕೆಂದು ಸುಪ್ರೀಂ ಕೋರ್ಟ್ ಸ್ಪಷ್ಟಪಡಿಸಿದ್ದು ಸರ್ಕಾರ ಈ ಬಗ್ಗೆ ಕಾರ್ಯತತ್ಪರವಾಗಿದೆ. ಮೇಕೆದಾಟು ಅಣೆಕಟ್ಟು ಯೋಜನೆ ಕರ್ನಾಟಕ ರಾಜ್ಯಕ್ಕಿಂತ ತಮಿಳುನಾಡು ರಾಜ್ಯಕ್ಕೆ ಲಾಭದಾಯಕವಾಗಿದೆ ಎಂಬುದನ್ನು ಪುನರುಚ್ಚರಿಸಿದರು.

**ಕಾವೇರಿ ನೀರು ಕೇವಲ ಕುಡಿಯಲು ಮಾತ್ರ**

ಪ್ರಸ್ತುತ ಡ್ಯಾಂಗಳಲ್ಲಿ ನೀರಿನ ಸಂಗ್ರಹ ಕಡಿಮೆ ಇರುವುದರಿಂದ, ಕಾವೇರಿ ಮತ್ತು ತುಂಗಭದ್ರಾ ಜಲಾನಯನ ಪ್ರದೇಶಗಳಲ್ಲಿ ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಮಂಡ್ಯ ಸೇರಿ ಇತರ ಭಾಗಗಳ ರೈತರು ಕೃಷಿ ಚಟುವಟಿಕೆಗಳಿಗೆ ತಕ್ಷಣಕ್ಕೆ ನೀರನ್ನು ನಿರೀಕ್ಷಿಸಬಾರದು ಮತ್ತು ಯಾವುದೇ ಒತ್ತಡ ಹೇರಬಾರದು ಎಂದು ಮನವಿ ಮಾಡಿದರು. ತಮಿಳುನಾಡು ಸರ್ಕಾರದಿಂದ ನೀರಿನ ಬಿಡುಗಡೆಗಾಗಿ ತೀವ್ರ ಒತ್ತಡವಿದ್ದರೂ, ಸುಪ್ರೀಂ ಕೋರ್ಟ್ ಹಾಗೂ ಸೆಂಟ್ರಲ್ ವಾಟರ್ ಕಮಿಷನ್ ನಿರ್ದೇಶನಗಳ ಅನ್ವಯವೇ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

**ಮೇಕೆದಾಟು ಯೋಜನೆ ತಮಿಳುನಾಡಿಗೆ ಹೆಚ್ಚು ಅನುಕೂಲ:** ಮೇಕೆದಾಟು ಯೋಜನೆಯ ಅನುಷ್ಠಾನದಿಂದ ಕರ್ನಾಟಕಕ್ಕಿಂತ ತಮಿಳುನಾಡಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂಬ ಪ್ರಮುಖ ಅಂಶವನ್ನು ಡಿ.ಕೆ. ಶಿವಕುಮಾರ್ ಪುನರುಚ್ಚರಿಸಿದ್ದಾರೆ. ಕಾವೇರಿ ನೀರಿನ ವಿವಾದದ ಕುರಿತು ಸಂಸತ್ತಿನಲ್ಲಿ ಚರ್ಚೆ ನಡೆಸಲು ವಿರೋಧ ಪಕ್ಷಗಳಿಗೆ ಸಂಪೂರ್ಣ ಹಕ್ಕಿದೆ. ನಾವು ಸಹ ದೆಹಲಿಗೆ ಭೇಟಿ ನೀಡಿ ನಮ್ಮ ರಾಜ್ಯದ ಸಂಸದರಿಗೆ ವಾಸ್ತವಾಂಶಗಳನ್ನು ಮನವರಿಕೆ ಮಾಡಿಕೊಡಲಿದ್ದೇವೆ. ವಿರೋಧ ಪಕ್ಷದ ನಾಯಕರು ಕೇವಲ ರಾಜಕೀಯ ಲಾಭಕ್ಕಾಗಿ ಆರೋಪಗಳನ್ನು ಮಾಡುತ್ತಿದ್ದು, ಸರ್ಕಾರ ಕಾನೂನು ಚೌಕಟ್ಟಿನಲ್ಲಿಯೇ ರಾಜ್ಯದ ಹಿತರಕ್ಷಣೆ ಮಾಡಲಿದೆ ಎಂದು ಭರವಸೆ ನೀಡಿದ್ದಾರೆ.

**ಕುಮಾರಸ್ವಾಮಿ ಆರೋಪ ರಾಜಕೀಯಪ್ರೇರಿತ**

ಎಚ್‌ಎಂಟಿ ಭೂಮಿ ಕುರಿತು ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಮಾಡಿರುವ ಆರೋಪದ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿ, "ಅವರು ಏನಾದರೂ ಆರೋಪ ಮಾಡಿಕೊಳ್ಳಲಿ, ರಾಜಕಾರಣದ ಉದ್ದೇಶದಿಂದ ಈ ರೀತಿ ಮಾಡುತ್ತಿದ್ದು, ಅವರು ಮಾಡಿದ ಯೋಜನೆ ವಿಚಾರಗಳನ್ನು ನನ್ನ ಮೇಲೆ ಆರೋಪಿಸುತ್ತಿದ್ದಾರೆ. ಈ ಬಗ್ಗೆ ಅವರು ಪಾದಯಾತ್ರೆ ಚರ್ಚೆ ಮಾಡಲಿ ಅದು ಅವರಿಗೆ ಬಿಟ್ಟ ವಿಚಾರ" ಎಂದರು.

## ಇಂದು ಸಂಪುಟ ಸಭೆ

ಬರ ಪರಿಸ್ಥಿತಿ ಕುರಿತು ಚರ್ಚಿಸುವ ಸಲುವಾಗಿ ಭಾನುವಾರ ರಜಾ ಇದ್ದರೂ ತುರ್ತು ಸಂಪುಟ ಸಭೆ ಕರೆದಿರುವುದಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾಹಿತಿ ನೀಡಿದ್ದಾರೆ. ಗುರುವಾರವೇ ಸಚಿವ ಸಂಪುಟ ಸಭೆ ಮಾಡಬೇಕಿತ್ತು. ದೆಹಲಿಗೆ ಹೋಗಿದ್ದರಿಂದ ಸಾಧ್ಯವಾಗಲಿಲ್ಲ. ತುರ್ತು ಸಚಿವ ಸಂಪುಟ ಸಭೆ ಕರೆದಿದ್ದೇನೆ ಎಂದರು.

# 2ನೇ ವಿಮಾನ ನಿಲ್ದಾಣ ತುಮಕೂರಿನಲ್ಲಿ ಆಗಬೇಕೆಂಬುದು ನನ್ನ ಆಶಯ: ಜಿ.ಪರಮೇಶ್ವರ್

**ಬೆಂಗಳೂರು, ಜು.18:** ಮೊದಲಿನಿಂದಲೂ ರಾಜ್ಯದ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ತುಮಕೂರಿನಲ್ಲಿ ನಿರ್ಮಾಣವಾಗಬೇಕು ಎಂಬುದು ನನ್ನ ಆಶಯ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದರು. ಸದಾಶಿವನಗರದ ಗೃಹ ಕಚೇರಿ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾಂತ್ರಿಕ ಸಮಿತಿಯು ನೆಲಮಂಗಲದ ಕುಣಿಗಲ್ ರಸ್ತೆ ಹಾಗೂ ಬಿಡದಿ ಪ್ರದೇಶಗಳನ್ನು ಪರಿಶೀಲಿಸಿ ಸರ್ಕಾರಕ್ಕೆ ಶಿಫಾರಸು ಸಲ್ಲಿಸಿದ್ದು, ಡಿಜಿಸಿಎ ತಾಂತ್ರಿಕ ಪರಿಶೀಲನೆ ಬಳಿಕ ಸರ್ಕಾರ ಅಂತಿಮ ತೀರ್ಮಾನ ಕೈಗೊಳ್ಳಲಿದೆ. ತುಮಕೂರಿನಲ್ಲಿ ವಿಮಾನ ನಿಲ್ದಾಣ ನಿರ್ಮಾಣವಾದರೆ 20 ಜಿಲ್ಲೆಗಳ ಜನರಿಗೆ ಅನುಕೂಲವಾಗಲಿದ್ದು, ತಾಂತ್ರಿಕವಾಗಿಯೂ ಅದು ಸೂಕ್ತ ಸ್ಥಳವಾಗಿದೆ ಎಂದು ಹೇಳಿದರು. ಬಿಡದಿ ಟೌನ್‌ಶಿಪ್ ವಿರುದ್ಧದ ಪಾದಯಾತ್ರೆ ಕುರಿತು ಪ್ರತಿಕ್ರಿಯಿಸಿದ ಅವರು, ಸರ್ಕಾರ ಅಭಿವೃದ್ಧಿಯ ದೃಷ್ಟಿಯಿಂದ ಯೋಜನೆ ಕೈಗೊಂಡಿದ್ದು, ಭೂಸ್ವಾಧೀನ ವಿಚಾರದಲ್ಲಿ ಯಾರ ಮೇಲೂ ಒತ್ತಾಯ ಮಾಡುವುದಿಲ್ಲ. ಮನವೊಲಿಸುವ ಮೂಲಕವೇ ಮುಂದುವರಿಯಲಾಗುವುದು ಎಂದು ತಿಳಿಸಿದರು.



**ನೀರಿನ ಅಭಾವ ಎದುರಿಸಲು ಹಣದ ಕೊರತೆಯಿಲ್ಲ**

ರಾಜ್ಯದ ಬರ ಪರಿಸ್ಥಿತಿ ಕುರಿತು ಮುಖ್ಯಮಂತ್ರಿ ನೇತೃತ್ವದಲ್ಲಿ ವಿವಿಧ ಕಂದಾಯ ವಿಭಾಗಗಳ ಪ್ರಗತಿ ಪರಿಶೀಲನೆ ನಡೆಸಲಾಗಿದ್ದು, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯಿತಿ ಸಿಇಒಗಳೊಂದಿಗೆ ವಿಡಿಯೊ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿ ಅಗತ್ಯ ಕ್ರಮಗಳ ಕುರಿತು ಸೂಚನೆ ನೀಡಲಾಗುವುದು. ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಪ್ರತಿ ಜಿಲ್ಲಾಧಿಕಾರಿಗೆ 5 ಕೋಟಿ ರೂ. ಅನುದಾನ ಬಿಡುಗಡೆ ಮಾಡಲಾಗಿದ್ದು, ಒಟ್ಟು 329 ಕೋಟಿ ರೂ. ಲಭ್ಯವಿದೆ. ಜೊತೆಗೆ ಜಿಲ್ಲಾಧಿಕಾರಿಗಳ ಪಿಡಿ ಖಾತೆಗಳಲ್ಲಿ ಸುಮಾರು 600 ಕೋಟಿ ರೂ. ಇದ್ದು, ಅಗತ್ಯ ಸಂದರ್ಭಗಳಲ್ಲಿ ಬಳಸಿಕೊಳ್ಳುವಂತೆ ಸೂಚಿಸಲಾಗಿದೆ ಎಂದು ಪರಮೇಶ್ವರ್ ತಿಳಿಸಿದರು. ಬರ ಪರಿಸ್ಥಿತಿಯಲ್ಲಿ ಕೇಂದ್ರ ಸರ್ಕಾರದ ನಿಯಮಗಳನ್ನು ಸಡಿಲಿಸುವಂತೆ ಹಾಗೂ ದೇಶವನ್ನೇ ರಾಷ್ಟ್ರೀಯ ವಿಪತ್ತು ಪೀಡಿತ ಪ್ರದೇಶವೆಂದು ಘೋಷಿಸುವಂತೆ ಪತ್ರ ಬರೆದಿರುವುದಾಗಿ ತಿಳಿಸಿದ ಅವರು, ಸರ್ಕಾರ ಜವಾಬ್ದಾರಿಯಿಂದ ಕೆಲಸ ಮಾಡುತ್ತಿದ್ದು, ಕೇವಲ ಪತ್ರ ಬರೆಯುವುದಕ್ಕೆ ಮಾತ್ರ ಸೀಮಿತವಾಗಿಲ್ಲ ಎಂದು ವಿಪಕ್ಷದ ಟೀಕೆಗೆ ತಿರುಗೇಟು ನೀಡಿದರು.

# ಶಿರಾ ಬಳಿ 2ನೇ ಅಂತಾರಾಷ್ಟ್ರೀಯ ವಿಮಾನನಿಲ್ದಾಣ ನಿರ್ಮಿಸಲು ಕೇಂದ್ರ ಸಚಿವರಿಗೆ ಸೋಮಣ್ಣ ಪತ್ರ

ಬೆಂಗಳೂರು, ಜು.18: ರಾಜ್ಯ ಸರ್ಕಾರದ ಉದ್ದೇಶಿತ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು ತುಮಕೂರು ಜಿಲ್ಲೆಯ ಶಿರಾ ಬಳಿ ನಿರ್ಮಿಸಬೇಕೆಂದು ಕೋರಿ ಕೇಂದ್ರ ನಾಗರಿಕ ವಿಮಾನಯಾನ ಸಚಿವ ಕೆ. ರಾಮಮೋಹನನಾಯ್ಡು ಅವರಿಗೆ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಪತ್ರ ಬರೆದಿದ್ದಾರೆ. ತುಮಕೂರು ಜಿಲ್ಲೆಯ ಶಿರಾ ಬಳಿ ಹೊಸದಾಗಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಿಸಬೇಕೆನ್ನುವುದು ರಾಜ್ಯದ ಬಹುತೇಕ ಜನಪ್ರತಿನಿಧಿಗಳ ಒತ್ತಾಯವಾಗಿದೆ. ರಾಜ್ಯದ ಸಮಗ್ರ ಅಭಿವೃದ್ಧಿಯ ದೃಷ್ಟಿಯಿಂದ ಚಿಂತನೆ ನಡೆಸಬೇಕು ನಾಗರಿಕ ವಿಮಾನಯಾನ ಸಚಿವರಿಗೆ ಸಚಿವ ಸೋಮಣ್ಣ ಮನವಿ ಮಾಡಿದ್ದಾರೆ. ಈಗಾಗಲೇ ರಾಜ್ಯವು ಬೆಂಗಳೂರು ಕೇಂದ್ರಿತವಾಗಿ ಅಭಿವೃದ್ಧಿ ಸಾಧಿಸುತ್ತಿದೆ. ಬೆಂಗಳೂರಿಗೆ ಪರ್ಯಾಯವಾಗಿ ರಾಜ್ಯದ ಎಲ್ಲ ನಗರಗಳನ್ನು ಸಶಕ್ತಗೊಳಿಸುವುದು ಜನಪ್ರತಿನಿಧಿಗಳ ಜವಾಬ್ದಾರಿಯಾಗಿದೆ. ಈ ಹಿನ್ನೆಲೆಯಲ್ಲಿ ಶಿರಾ ಬಳಿ ನೂತನ ವಿಮಾನ ನಿಲ್ದಾಣ ನಿರ್ಮಾಣ ಮಾಡಿದ್ದಲ್ಲಿ ಮಧ್ಯ ಕರ್ನಾಟಕ, ಉತ್ತರ ಕರ್ನಾಟಕ ಭಾಗದ ಜಿಲ್ಲೆಗಳ ಪ್ರಗತಿಗೆ ಸಹಾಯವಾಗಲಿದೆ ಎಂದು ಸಚಿವ ವಿ. ಸೋಮಣ್ಣ ತಮ್ಮ ಪತ್ರದಲ್ಲಿ ತಿಳಿಸಿದ್ದಾರೆ. ಕರ್ನಾಟಕದ ಸಮಗ್ರ ಹಾಗೂ ಸಮತೋಲಿತ ಅಭಿವೃದ್ಧಿಗಾಗಿ ರಾಜ್ಯದಲ್ಲಿ ನಿರ್ಮಿಸಲು ಉದ್ದೇಶಿಸಿರುವ ನೂತನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು ತುಮಕೂರು ಜಿಲ್ಲೆಯ ಶಿರಾ ಬಳಿ ಸ್ಥಾಪಿಸಬೇಕು. ಬೆಂಗಳೂರಿನ ಸಮೀಪವೇ ಮತ್ತೊಂದು ವಿಮಾನ ನಿಲ್ದಾಣ ನಿರ್ಮಿಸುವುದು ಉತ್ತರ ಮತ್ತು ಮಧ್ಯ ಕರ್ನಾಟಕದ ಜಿಲ್ಲೆಗಳ ಪಾಲಿಗೆ ಅನ್ಯಾಯ ಮಾಡಿದಂತಾಗುತ್ತದೆ. ಶಿರಾದಲ್ಲಿ ವಿಮಾನ ನಿಲ್ದಾಣ ಸ್ಥಾಪನೆಯಾದರೆ ಮಧ್ಯ ಕರ್ನಾಟಕ ಹಾಗೂ ಉತ್ತರ ಕರ್ನಾಟಕದ ಪ್ರಮುಖ ಜಿಲ್ಲೆಗಳ ಆರ್ಥಿಕ ಪ್ರಗತಿಗೆ



ಭಾರಿ ಉತ್ತೇಜನ ಸಿಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಶಿರಾವೇ ಏಕೆ ಸೂಕ್ತ ಎಂದು ವಿವರಿಸಿರುವ ಅವರು, ಶಿರಾದಲ್ಲಿ ಎನ್.ಎಚ್ 48, ಎನ್.ಎಚ್ –69, ಎನ್.ಎಚ್ –544ಇ ಸೇರಿದಂತೆ ಹಲವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳ ಜಾಲವಿದೆ. ಅಲ್ಲದೆ, ನೂತನ ರೈಲು ಮಾರ್ಗಗಳ ಸಂಪರ್ಕವೂ ಇಲ್ಲಿ ಬಲವಾಗಿದೆ. ವ ಂ ಂ ೦ ಬ ೈ – ಬ ೆ ೦ ಗ ೆ ಳ ೆ ೂ ರ ೆ ೦ ಕೈಗಾರಿಕಾ ಕಾರಿಡಾರ್, ರಾಷ್ಟ್ರೀಯ ಹೂಡಿಕೆ ಮತ್ತು ಉತ್ಪಾದನಾ ವಲಯ ಮತ್ತು ಕೆಐಎಡಿಬಿ ಕೈಗಾರಿಕಾ ಪ್ರದೇಶಗಳು ಈ ಭಾಗದಲ್ಲಿ ಕಾರ್ಯನಿರ್ವಹಿಸುತ್ತಿವೆ. ಇಲ್ಲಿ ಹೆಚ್ಚಿನ ಪ್ರಮಾಣದ ಸರ್ಕಾರಿ ಭೂಮಿ ಲಭ್ಯವಿದ್ದು, ಭದ್ರಾ ಮೇಲ್ದಂಡೆ, ಹೇಮಾವತಿ ಹಾಗೂ ಎತ್ತಿನಹೊಳೆ ಯೋಜನೆಗಳಿಂದ ನೀರಿನ ಸೌಲಭ್ಯವೂ ಇದೆ. ಜೊತೆಗೆ ಸಮೀಪದಲ್ಲಿಯೇ ಡಿ.ಆರ್.ಡಿ.ಒ, ಐಐಎಸ್ಸಿ ಕ್ಯಾಂಪಸ್ ಮತ್ತು ಎಚ್‌ಎಎಲ್ ಹೆಲಿಕಾಪ್ಟರ್ ಘಟಕಗಳಂತಹ ಮಹತ್ವದ ಸಂಸ್ಥೆಗಳಿವೆ. ಶಿರಾದ ಈ ಸ್ಥಳವು ಡಿಜಿಸಿಎ ನಿಯಮದಂತೆ ಬೆಂಗಳೂರು ವಿಮಾನ ನಿಲ್ದಾಣದಿಂದ ಸುಮಾರು 150 ಕಿ.ಮೀ ದೂರದಲ್ಲಿದ್ದು, ತಾಂತ್ರಿಕವಾಗಿಯೂ ಅತ್ಯಂತ ಸೂಕ್ತವಾಗಿದೆ ಎಂದು ತಿಳಿಸಿದ್ದಾರೆ. ಕಳೆದ ವರ್ಷ ಮಾರ್ಚ್ 20ರಂದು ತುಮಕೂರು, ಚಿಕ್ಕಮಗಳೂರು, ದಾವಣಗೆರೆ, ಚಿತ್ರದುರ್ಗ, ಬಳ್ಳಾರಿ, ಹಾವೇರಿ ಹಾಗೂ ರಾಯಚೂರು ಜಿಲ್ಲೆಗಳ ಶಾಸಕರು ಈ ಕುರಿತು ತಮಗೆ ಮನವಿ ಪತ್ರ ಸಲ್ಲಿಸಿದ್ದರು. ಈ ಹಿನ್ನೆಲೆಯಲ್ಲಿ ತಾವು ಈಗಾಗಲೇ ಏ.22ರಂದು ಕೇಂದ್ರ ನಾಗರಿಕವಿಮಾನಯಾನ ಸಚಿವ ಕೆ. ರಾಮಮೋಹನ ನಾಯ್ಡು ಅವರಿಗೆ ಪತ್ರ ಬರೆದು ಈ ಭಾಗದ ಜನಪ್ರತಿನಿಧಿಗಳ ಬೇಡಿಕೆಯನ್ನು ಅವರ ಗಮನಕ್ಕೆ ತಂದಿರುವುದಾಗಿ ಸಚಿವ ಸೋಮಣ್ಣ ತಿಳಿಸಿದ್ದಾರೆ.



ಮಾರಿಷಸ್ ದೇಶದ ವಿದೇಶಾಂಗ ವ್ಯವಹಾರಗಳು, ಪ್ರಾದೇಶಿಕ ಏಕೀಕರಣ ಹಾಗೂ ಅಂತರರಾಷ್ಟ್ರೀಯ ವ್ಯಾಪಾರದ ಸಚಿವ ನರ್ಸಿಂಘೆನ್ ಹಂಬೈರಾಜೆನ್ ಅವರ ನೇತೃತ್ವದ ನಿಯೋಗವು ಶನಿವಾರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಮಾಡಿ ಮಾತುಕತೆ ನಡೆಸಿತು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ.ಬಿ.ಸಿ.ಭಗವಾನ್ ಹಾಗೂ ಐ.ಬಿ.ಎಂ. ಆರ್ಥಿಕ ಸಲಹೆಗಾರ್ತಿ ಅನನ್ಯಾ ರಾಧಾಕೃಷ್ಣನ್ ಹಾಜರಿದ್ದರು.

# ಚೆನ್ನಮ್ಮ ನಿಧನಕ್ಕೆ ಟಿ.ಆರ್.ರಾಮಪ್ಪ ಸಂತಾಪ

**ಬೆಂಗಳೂರು, ಜು.18:** ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರ ಪತ್ನಿ ಚೆನ್ನಮ್ಮ ಅವರ ನಿಧನಕ್ಕೆ ಹಿರಿಯ ಕಾಂಗ್ರೆಸ್ ಮುಖಂಡ ಟಿ.ಆರ್. ರಾಮಪ್ಪ ಸಂತಾಪ ಸೂಚಿಸಿದ್ದಾರೆ. ಈ ಅಗಲಿಕೆಯ ನೋವು ಭರಿಸುವ ಶಕ್ತಿ ದೇವೇಗೌಡರ ಕುಟುಂಬಕ್ಕೆ ನೀಡಲಿ ಮತ್ತು ಚೆನ್ನಮ್ಮ ನವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ರಾಮಪ್ಪ ಪ್ರಾರ್ಥಿಸಿದ್ದಾರೆ.

# ಬಿಡದಿ ಟೌನ್‌ಶಿಪ್ ವಿರೋಧಿಸಿ ಬಿಜೆಪಿ ಜೆಡಿಎಸ್‌ನಿಂದ ಪ್ರತ್ಯೇಕ ಪಾದಯಾತ್ರೆ

**ಬೆಂಗಳೂರು,ಜು.18:** ಬಿಡದಿ ಟೌನ್‌ಶಿಪ್ ಜಟಾಪಟಿ ಮತ್ತಷ್ಟು ತೀವ್ರಗೊಂಡಿದ್ದು, ಇದೀಗ ಪ್ರತಿಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ನಡುವೆ ಕ್ರೆಡಿಟ್ ವಾರ್ ಆರಂಭವಾಗಿದೆ. ಬಿಡದಿ ಟೌನ್‌ಶಿಪ್ ವಿರೋಧಿಸಿ ಶುಕ್ರವಾರ ಪ್ರತಿಭಟನೆ ನಡೆಸಿದ ಬಿಜೆಪಿ ಬೆಂಗಳೂರಿನಿಂದ ಬಿಡದಿಯವರೆಗೆ ಬೃಹತ್ ಪಾದಯಾತ್ರೆ ನಡೆಸುವುದಾಗಿ ಘೋಷಿಸಿತ್ತು. ಇದರ ಬೆನ್ನಲ್ಲೇ ಮಿತ್ರ ಪಕ್ಷ ಜೆಡಿಎಸ್ ಸಹ ತಾನು ಪ್ರತ್ಯೇಕವಾಗಿ ಪಾದಯಾತ್ರೆ ಮಾಡುವುದಾಗಿ ಶನಿವಾರ ಘೋಷಿಸಿದೆ. ಜುಲೈ 30, 31 ಮತ್ತು ಆಗಸ್ಟ್ 1 ರಂದು ಸುಮಾರು 38 ಕಿಲೋಮೀಟರ್‌ಗಳ ಮೂರು ದಿನಗಳ ಪಾದಯಾತ್ರೆ ನಡೆಸುವುದಾಗಿ ಜೆಡಿಎಸ್ ಘೋಷಣೆ ಮಾಡಿದೆ. "ಜುಲೈ 30 ರಿಂದ ಆಗಸ್ಟ್ 1 ರವರೆಗೂ ಮೂರು ದಿನ ಈ ಪಾದಯಾತ್ರೆ ನಡೆಯಲಿದ್ದು, ಜು. 31 ರಿಂದ ಬಿಡದಿಯ ಬೈರಮಂಗಲದಲ್ಲಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಪಾದಯಾತ್ರೆಗೆ ಚಾಲನೆ ನೀಡುವರು ಎಂದು ಅವರು ಹೇಳಿದರು". ಕೋರ್ ಕಮಿಟಿ ಅಧ್ಯಕ್ಷ ಕೃಷ್ಣಾರೆಡ್ಡಿ, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು ಅವರು ಸುದ್ದಿಗೋಷ್ಠಿ ನಡೆಸಿ ಪಾದಯಾತ್ರೆ ದಿನಾಂಕ ಮತ್ತು ಪಾದಯಾತ್ರೆ ಪೋಸ್ಟರ್ ಅನ್ನು ಬಿಡುಗಡೆ ಮಾಡಿದರು.

ಜುಲೈ 30 ರಂದು ಭೈರಮಂಗಲದಿಂದ ಪಾದಯಾತ್ರೆ ಪ್ರಾರಂಭ ಆಗಿ ಆಗಸ್ಟ್ 1 ರಂದು ಫ್ರೀಡಂ ಪಾರ್ಕ್‌ನಲ್ಲಿ ಪಾದಯಾತ್ರೆ ಅಂತ್ಯವಾಗಲಿದೆ. ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ಈ ಪಾದಯಾತ್ರೆ ನಡೆಯಲಿದೆ. ಪಾದಯಾತ್ರೆಗೆ ಕೇಂದ್ರ ಸಚಿವ ಕುಮಾರಸ್ವಾಮಿ ಚಾಲನೆ ನೀಡಲಿದ್ದಾರೆ ಎಂದು ಜೆಡಿಎಸ್ ನಾಯಕರು ತಿಳಿಸಿದರು. ಜುಲೈ 31 ರಂದು ಮಾಜಿ ಪ್ರಧಾನಿ ದೇವೇಗೌಡ ಪಾದಯಾತ್ರೆಯಲ್ಲಿ ಭಾಗಿಯಾಗಲಿದ್ದಾರೆ. ಆಗಸ್ಟ್ 1 ರಂದು ಪಾದಯಾತ್ರೆ ಫ್ರೀಡಂ ಪಾರ್ಕ್‌ನಲ್ಲಿ ಅಂತ್ಯವಾಗಲಿದೆ. ಅಂದು ಬೃಹತ್ ಸಮಾವೇಶದ ಮೂಲಕ ಬಿಡದಿ ಟೌನ್‌ಶಿಪ್ ಯೋಜನೆ ರದ್ದು ಮಾಡುವಂತೆ ಜೆಡಿಎಸ್ ಆಗ್ರಹ ಮಾಡಲಿದೆ ಎಂದು ಕೋರ್ ಕಮಿಟಿ ಅಧ್ಯಕ್ಷ ಕೃಷ್ಣಾರೆಡ್ಡಿ ತಿಳಿಸಿದ್ದಾರೆ.

ಸರ್ಕಾರ ಈ ಯೋಜನೆ ರದ್ದು ಮಾಡೋವರೆಗೂ ಜೆಡಿಎಸ್ ಹೋರಾಟ ಮಾಡಲಿದೆ. ಪಾದಯಾತ್ರೆ ಬಳಿಕ ವಿಧಾನಸೌಧ ಚಲೋ ಸಹ ಮಾಡ್ತೀವಿ. ಬಿಜೆಪಿಗೂ ಮೊದಲೇ ನಾವು ಪಾದಯಾತ್ರೆಗೆ ನಿರ್ಧಾರ ಮಾಡಿದ್ವಿ. ಅದರಂತೆ ಇಂದು ಘೋಷಣೆ ಮಾಡಿದ್ದೇವೆ ಎಂದು ಕೃಷ್ಣಾರೆಡ್ಡಿ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕರಾದ ಸಿ.ಬಿ. ಸುರೇಶ್ಬಾಬು, ಶಾಸಕ ಎ. ಮಂಜು, ಮುಖಂಡರಾದ ಜವರೇಗೌಡ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವ್ಯಕ್ತಿತ್ವ, ಸೇವಾ ಮನೋಭಾವ, ಕಠಿಣ ಪರಿಶ್ರಮದಿಂದ ಬೆಂಕಿಯಲ್ಲಿ ಅರಳಿದ ಹೂವಾದ ಮಲ್ಲಿಕಾರ್ಜುನ ಖರ್ಗೆ

ಭಾರತೀಯ ರಾಜಕೀಯದಲ್ಲಿ ಸರಳತೆ, ಹೋರಾಟ ಮತ್ತು ಸಾಮಾಜಿಕ ನ್ಯಾಯದ ಪ್ರತೀಕವಾಗಿ ಗುರುತಿಸಿಕೊಂಡಿರುವ ಮಲ್ಲಿಕಾರ್ಜುನ ಖರ್ಗೆ ಅವರ ಜೀವನ ಒಂದು ಸ್ಫೂರ್ತಿದಾಯಕ ಪಯಣ. ಬಾಲ್ಯದಲ್ಲಿ ಎದುರಿಸಿದ ಕಷ್ಟಗಳು, ಸಾಮಾಜಿಕ ಅಸಮಾನತೆ, ಆರ್ಥಿಕ ಸಮಸ್ಯೆಗಳು ಹಾಗೂ ರಾಜಕೀಯ ಸವಾಲುಗಳ ನಡುವೆಯೂ ಅವರು ತಮ್ಮ ಧೈರ್ಯ, ಪರಿಶ್ರಮ ಮತ್ತು ಬದ್ಧತೆಯಿಂದ ದೇಶದ ಅತ್ಯುನ್ನತ ರಾಜಕೀಯ ನಾಯಕರಲ್ಲಿ ಒಬ್ಬರಾಗಿ ಹೊರಹೊಮ್ಮಿದ್ದಾರೆ.

ಬೀದರ್ ಜಿಲ್ಲೆ ಭಾಲ್ಕಿ ತಾಲೂಕು ವರವಟ್ಟಿ ಎಂಬ ಕುಗ್ರಾಮದ ಭೂ ರಹಿತ ಕೃಷಿ ಕೂಲಿ ಕರ್ಮಿಕ ಮಾಪಣ್ಣನ ಮನೆಯಲ್ಲಿ ಖರ್ಗೆ ಹುಟ್ಟಿದರು. ಒಂದು ಅಂಕಣದ ತೆಂಗಿನ ಸೂರಿನ ಆ ಮನೆ ಈಗಲೂ ಅಲ್ಲಿದೆ. ತನ್ನ ಮೊದಲ ಹೆಂಡತಿ ಸಾಬವ್ವ ಹಾಗೂ ಇಬ್ಬರು ಮಕ್ಕಳನ್ನು ದಂಗೆಯೊಂದರಲ್ಲಿ ಕಳೆದುಕೊಂಡ ಮಾಪಣ್ಣ ಅವರು ಪುಟ್ಟ ಕೂಸಾಗಿದ್ದ ಮಲ್ಲಿಕಾರ್ಜುನ ಖರ್ಗೆನ್ನು ಎತ್ತಿಕೊಂಡು ಗುಲ್ಬರ್ಗಕ್ಕೆ ಓಡಿಹೋದರು. ಅಲ್ಲಿನ ಎಂ ಎಸ್ ಕೆ ಮಿಲ್ ನಲ್ಲಿ ಕೂಲಿ ಕೆಲಸ ಮಾಡಿ ಮಗನನ್ನು ವಕೀಲನನ್ನಾಗಿ ರೂಪಿಸಿದರು. ಖರ್ಗೆ ಅವರ ಬಾಲ್ಯ ದುಃಖ ಮತ್ತು ಸಂಕಷ್ಟಗಳಿಂದ ಕೂಡಿತ್ತು. ಅವರ ಬದುಕಿನ ಅತ್ಯಂತ ನೋವಿನ ಅಧ್ಯಾಯವಾಗಿದೆ. ತಮ್ಮ ಕುಟುಂಬದಲ್ಲಿ ಆದ ಈ ದುರಂತ ಅವರ ಮನಸ್ಸಿನಲ್ಲಿ ಅಳಿಸಲಾಗದ ಗಾಯವನ್ನು ಮೂಡಿಸಿದರೂ, ಅದೇ ಅವರನ್ನು ದೃಢ ವ್ಯಕ್ತಿತ್ವದ ನಾಯಕನನ್ನಾಗಿ ರೂಪಿಸಿತು.

ಆರ್ಥಿಕವಾಗಿ ಹಿಂದುಳಿದ ಕುಟುಂಬದಲ್ಲಿ ಬೆಳೆದ ಅವರು ವಕೀಲರಾಗಿ ತಮ್ಮ ವೃತ್ತಿಜೀವನ ಆರಂಭಿಸಿ ಸಮಾಜದ ಬಡವರು, ಕಾರ್ಮಿಕರು ಮತ್ತು ಶೋಷಿತರ ಪರವಾಗಿ ಧ್ವನಿಯಾದರು. ಈ ಸೇವಾ ಮನೋಭಾವವೇ ಅವರನ್ನು ರಾಜಕೀಯಕ್ಕೆ ಕರೆತಂದಿತು. ಕಾರ್ಮಿಕ ನಾಯಕರಾಗಿ, ಅಂಬೇಡ್ಕರ್ ವಾದಿಯಾಗಿ, ಬುದ್ಧನ ಧಮ್ಮ ದಲ್ಲಿ ನಂಬಿಕೆ ಇಟ್ಟುಕೊಂಡಿರುವ ಖರ್ಗೆ ಅಂಬೇಡ್ಕರ್ ಅವರ ಆರ್ ಪಿ ಐ ಪಕ್ಷದಿಂದ ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಗೆದ್ದು 1972ರಲ್ಲಿ ವಿಧಾನಸಭೆಗೆ ಮೊದಲ ಬಾರಿಗೆ ಆಯ್ಕೆಯಾದರು. ಖರ್ಗೆ ಅವರು ವಿಧಾನಸಭೆಯಲ್ಲಿ ಸತತ ಗೆಲುವು ಸಾಧಿಸಿ ಸೋಲಿಲ್ಲದ ಸರದಾರರಾಗಿ ಹೊರ ಹೊಮ್ಮಿದ್ದಾರೆ. ಆಡಳಿತದಲ್ಲಿ ಪಾರದರ್ಶಕತೆ, ಪ್ರಾಮಾಣಿಕತೆ ಮತ್ತು ಜನಪರ



ನಿಲುವಿನಿಂದ ಅವರು ಜನರ ವಿಶ್ವಾಸ ಗಳಿಸಿದರು. ನಂತರ ರಾಷ್ಟ್ರ ರಾಜಕೀಯಕ್ಕೆ ಪ್ರವೇಶಿಸಿ ರೈಲ್ವೆ, ಕಾರ್ಮಿಕ ಮತ್ತು ಉದ್ಯೋಗ ಸೇರಿ ಹಲವು ಪ್ರಮುಖ ಇಲಾಖೆಗಳ ಹಲವು ಪ್ರಮುಖ ಜವಾಬ್ದಾರಿಗಳನ್ನು ಯಶಸ್ವಿಯಾಗಿ ನಿರ್ವಹಿಸಿದರು. 2022ರಲ್ಲಿ ಖರ್ಗೆ ಅವರು ಎಐಸಿಸಿ ಅಧ್ಯಕ್ಷರಾದರು. ಇದು ಪಕ್ಷದ ಇತಿಹಾಸದಲ್ಲಿ ಮಹತ್ವದ ಘಟ್ಟವೆಂದು ಪರಿಗಣಿಸಲಾಗಿದೆ. ದೀರ್ಘ ರಾಜಕೀಯ ಅನುಭವ, ಸಂಘಟನಾ ಸಾಮರ್ಥ್ಯ ಮತ್ತು ಎಲ್ಲ ನಾಯುಕರು, ವರ್ಗಗಳೊಂದಿಗೆ ಬೆರೆಯುವ ಗುಣದಿಂದ ಅವರು ರಾಷ್ಟ್ರೀಯ ಮಟ್ಟದಲ್ಲಿ ಗೌರವಾನ್ವಿತ ನಾಯಕರಾಗಿದ್ದಾರೆ.

ಮಲ್ಲಿಕಾರ್ಜುನ ಖರ್ಗೆ ಅವರ ಜೀವನ ಯುವಜನತೆಗೆ ಸ್ಫೂರ್ತಿಯ ಸಂದೇಶ ನೀಡುತ್ತದೆ. ಜನ್ಮ, ಬಡತನ ಅಥವಾ ಪರಿಸ್ಥಿತಿಗಳು ವ್ಯಕ್ತಿಯ ಭವಿಷ್ಯವನ್ನು ನಿರ್ಧರಿಸುವುದಿಲ್ಲ; ಬದಲಿಗೆ ಪರಿಶ್ರಮ, ಶಿಕ್ಷಣ, ಆತ್ಮವಿಶ್ವಾಸ ಮತ್ತು ಸಮಾಜಸೇವೆಯ ಮನೋಭಾವವೇ ಯಶಸ್ಸಿನ ನಿಜವಾದ ಆಧಾರ ಎಂಬುದನ್ನು ಅವರ ಬದುಕು ಸಾರುತ್ತದೆ. ಸಂಕಷ್ಟಗಳು ಅವರನ್ನು ಕುಗ್ಗಿಸಲಿಲ್ಲ; ಬದಲಿಗೆ ಇನ್ನಷ್ಟು ಗಟ್ಟಿಯಾಗಿ ನಿಲ್ಲುವಂತೆ ಮಾಡಿತು.

1999 ರಲ್ಲಿ ಕಾಂಗ್ರೆಸ್ ಹೈಕಮಾಂಡ್ ಖರ್ಗೆ ಅವರನ್ನು ಕೈಬಿಟ್ಟು ಎಸ್ ಎಂ ಕೃಷ್ಣ ಅವರನ್ನು ಮುಖ್ಯಮಂತ್ರಿ ಸ್ಥಾನಕ್ಕೆ ಆಯ್ಕೆ ಮಾಡಿದಾಗ ಪ್ರತಿಕ್ರಿಯೆ ನೀಡಿದ ಖರ್ಗೆ "ನನಗೆ ಮುಖ್ಯಮಂತ್ರಿ ಸ್ಥಾನ ಸಿಕ್ಕಿಲ್ಲ ಅಂತ ಏನೂ ಬೇಸರ ಇಲ್ಲ. ಸೂಕ್ತ ಸಮಯಕ್ಕೆ ಮುನ್ನ, ಹಣೆಬರಹಕ್ಕೂ ಹೆಚ್ಚು ಏನೂ ಸಿಗಲಾರದು ಎಂದು ಪ್ರತಿಕ್ರಯಿಸಿದರು. ನಂತರ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಮತ್ತು ಜೆಡಿಎಸ್ ಮೈತ್ರಿಕೂಟ ಸರ್ಕಾರದಲ್ಲೂ ಮುಖ್ಯಮಂತ್ರಿಯಾಗುವ ಅವಾಕಾಶವಿತ್ತು. ಆದರೆ ಜೆಡಿಎಸ್ ವರಿಷ್ಠ ಎಚ್.ಡಿ. ದೇವೇಗೌಡರು ಖರ್ಗೆ ಅವರ ಆತ್ಮೀಯ ಒಡನಾಡಿ ಧರಂ ಸಿಂಗ್ ಅವರಿಗೆ ರಾಜ್ಯದ ಚುಕ್ಕಾಣಿ ಹಿಡಿಯುವ ಸುಯೋಗ ದೊರೆಯಿತು. ಆಗಲೂ ಖರ್ಗೆ ಬೇಸರಿಸಿಕೊಳ್ಳಲಿಲ್ಲ. ಕಾಂಗ್ರೆಸ್ ನಲ್ಲಿ ಬಂಡಾಯ, ಭಿನ್ನಮತೀಯ ಚಟುವಟಿಕೆಗಳಲ್ಲಿ ಎಂದೂ ಭಾಗಿಯಾದ ಅಪ್ಪಟ ಕಾಂಗ್ರೆಸ್ ಸೇನಾನಿ ಮಲ್ಲಿಕಾರ್ಜನ ಖರ್ಗೆ. ಖರ್ಗೆ ಅವರು ತಮ್ಮ ಅಧಿಕಾರದುದ್ದಕ್ಕೂ ಹೈದ್ರಾಬಾದ್ ಕರ್ನಾಟಕ ಹಾಗೂ ಗುಲ್ಬರ್ಗದ ಬೆಳವಣಿಗೆ ಗಣನೀಯ ಕೊಡುಗೆ ನೀಡಿದ್ದಾರೆ. ಸಂವಿಧಾನದ 371 – ಜೆ ಅಡಿ ದೊರೆತ ವಿಶೇಷ ಸ್ಥಾನಮಾನ ದೊರಕಿಸಿಕೊಡಲು ಶ್ರಮಿಸಿದ ಖರ್ಗೆ ಅವರಿಂದಾಗಿ ಇಲ್ಲಿನ ಜನರ ಬದುಕು ಬದಲಾಗಿದೆ. ಪಶು ವೈದ್ಯ ವಿವಿ, ಹೈ ಕೋರ್ಟ್ ಪೀಠ, ಇಎಸ್ಐ ಆಸ್ಪತ್ರೆ ಹಾಗೂ ವೈದ್ಯ ಕಾಲೇಜು, ರಾಜ್ಯ ಸರಕಾರದ ವೈದ್ಯ ಕಾಲೇಜು, ಜಯದೇವ ಆಸ್ಪತ್ರೆ, ಕೇಂದ್ರ ಸರಕಾರದ ಕೆಲವು ಕಚೇರಿಗಳು, ರೈಲ್ವೆ ಸೌಲಭ್ಯ ಹೀಗೆ ಪಟ್ಟಿ ಮಾಡುತ್ತಾ ಹೋದರೆ ಅಗಾಧ ಸಾಧನೆಗಳನ್ನು ಅವರು ಹೊತ್ತು ನಡೆದಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ವಿಧಾನಸಭೆ ಪ್ರತಿಪಕ್ಷ ನಾಯಕರಾಗಿ, ರಾಜ್ಯಸಭೆಯಲ್ಲಿ ಎರಡನೇ ಬಾರಿ ಪ್ರತಿಪಕ್ಷ ನಾಯಕರಾಗಿ ಕಾರ್ಯನಿರ್ವಹಿಸುತ್ತಿರುವ ರಾಜ್ಯದ ಏಕೈಕ ರಾಜಕಾರಣಿ. ಆರು ದಶಕಗಳ ರಾಜ್ಯ ರಾಜಕಾರಣ. ಹೆಚ್ಚುಕಡಿಮೆ ಎರಡು ದಶಕಗಳ ಕಾಲ ರಾಷ್ಟ್ರ ರಾಜಕಾರಣಕ್ಕೆ ಕೊಡುಗೆ ನೀಡಿದ್ದಾರೆ. 8 ದಶಕಗಳಲ್ಲಿ ಖರ್ಗೆ ಒಮ್ಮೆ ಮಾತ್ರ ಲೋಕಸಭಾ ಚುನಾವಣೆಯಲ್ಲಿ ಸೋಲುಂಡಿದ್ದಾರೆ. ಉಳಿದಂತೆ ಸೋಲದ, ದಣಿವರೆಯದ ರಾಜಕಾರಣಿ ಎಂಬುದು ವಿಶೇಷ.

ಮಲ್ಲಿಕಾರ್ಜುನ ಖರ್ಗೆ ಅವರು ಕೇವಲ ರಾಜಕಾರಣಿಯಲ್ಲ, ಪ್ರತಿಕೂಲ ಪರಿಸ್ಥಿತಿಗಳನ್ನು ಮೆಟ್ಟಿ ನಿಂತ ಹೋರಾಟಗಾರ. ಅನೇಕ ಕಷ್ಟ-ನೋವುಗಳ ಬೆಂಕಿಯಲ್ಲಿ ನೊಂದು, ಬೆಂದು, ತನ್ನನ್ನೇ ಸುಟ್ಟುಕೊಂಡು ತನ್ನ ವ್ಯಕ್ತಿತ್ವ ಮತ್ತು ಸೇವಾ ಮನೋಭಾವದಿಂದ ಬೆಂಕಿಯಲ್ಲಿ ಅರಳಿದ ಹೂವಿನಂತೆ ಅವರು ಭಾರತೀಯ ರಾಜಕೀಯದಲ್ಲಿ ವಿಶಿಷ್ಟ ಸ್ಥಾನವನ್ನು ಪಡೆದಿದ್ದಾರೆ. ಅವರ ಜೀವನಯಾನ ಅತ್ಯಂತ ಅರ್ಥಪೂರ್ಣವಾಗಿದೆ.

- **ಡಾ.ಆನಂದ ಕುಮಾರ್** । ಎಐಸಿಸಿ ಎಸ್.ಸಿ ವಿಭಾಗದ ರಾಷ್ಟ್ರೀಯ ಸಂಯೋಜಕರು ಹಾಗೂ ಮಹಾರಾಷ್ಟ್ರ ಉಸ್ತುವಾರಿ

# ರಸ್ತೆಬದಿ ಅನಾಥ ವಾಹನಗಳ ವಿರುದ್ಧ ಕಾರ್ಯಾಚರಣೆ

**ಬೆಂಗಳೂರು, ಜು.18:** ಅಕ್ರಮವಾಗಿ ರಸ್ತೆಬದಿಯಲ್ಲಿ ನಿಲುಗಡೆಗೊಳಿಸಿದ್ದ ಅನಾಥ ವಾಹನಗಳ ವಿರುದ್ಧ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಇಂದಿನಿಂದ ಕಠಿಣ ಕಾರ್ಯಾಚರಣೆ ಆರಂಭಿಸಿದೆ. ಗಾಂಧಿನಗರ ವಿಧಾನಸಭಾ ಕ್ಷೇತ್ರದ ಎಂ.ಡಿ. ಬ್ಲಾಕ್‌ನ ವರಾಹಿ ದೇವಸ್ಥಾನದ ಬಳಿ ಸಚಿವ ಕೃಷ್ಣ ಬೈರೇಗೌಡ ಹಾಗೂ ಶಾಸಕ ದಿನೇಶ್ ಗುಂಡೂರಾವ್ ಅವರುಗಳು ಸಾಂಕೇತಿಕವಾಗಿ ವಾಹನಗಳ ಟೋಯಿಂಗ್ ಕಾರ್ಯಕ್ಕೆ ಚಾಲನೆ ನೀಡಿದರು.

ಕಳೆದ ವಾರದಿಂದ ಜಿಬಿಎ ಮತ್ತು ಸಂಚಾರಿ ಪೊಲೀಸರು ಬಿಡಾಡಿ ವಾಹನಗಳಿಗೆ ನೋಟಿಸ್ ಹಾಗೂ ಸ್ಟಿಕ್ಕರ್ ಅಂಟಿಸಿ, ಏಳು ದಿನಗಳೊಳಗೆ ವಾಹನಗಳನ್ನು ತೆರವುಗೊಳಿಸುವಂತೆ ಸೂಚನೆ ನೀಡಿದ್ದರು. ಆದರೆ, ಸೂಚನೆಯನ್ನು ಪಾಲಿಸದ ವಾಹನಗಳ ವಿರುದ್ಧ ಇದೀಗ ಟೋಯಿಂಗ್ ಕಾರ್ಯಾಚರಣೆ ಆರಂಭಿಸಲಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಕೃಷ್ಣ ಬೈರೇಗೌಡ, ರಸ್ತೆಗಳು ಸಾರ್ವಜನಿಕರ ಆಸ್ತಿ. ಕೆಲವರು ರಸ್ತೆಬದಿಯಲ್ಲಿ ವರ್ಷಗಳ ಕಾಲ ವಾಹನಗಳನ್ನು ಬಿಟ್ಟು ಸಾರ್ವಜನಿಕರಿಗೆ ತೊಂದರೆ ಉಂಟುಮಾಡುತ್ತಿದ್ದಾರೆ. ಇದರಿಂದ ಪಾದಚಾರಿಗಳು ಮತ್ತು ವಾಹನ ಸವಾರರಿಗೆ ಸಮಸ್ಯೆಯಾಗುವುದರ ಜೊತೆಗೆ ಕೃತಕ ಟ್ರಾಫಿಕ್ ದಟ್ಟಣೆ ಸೃಷ್ಟಿಯಾಗುತ್ತಿದೆ. ಹೀಗಾಗಿ ಮೊದಲಿಗೆ ನೋಟಿಸ್ ನೀಡಲಾಗಿತ್ತು. ಆದರೂ ವಾಹನ ತೆರವುಗೊಳಿಸದ ಕಾರಣ ಟೋಯಿಂಗ್ ಕಾರ್ಯ ಆರಂಭಿಸಲಾಗಿದೆ, ಎಂದು ಹೇಳಿದರು.

ಜಿಬಿಎ ಮಾಹಿತಿ ಪ್ರಕಾರ, ಅಸ್ತ್ರಂ ತಂತ್ರಾಂಶದ ಮೂಲಕ ಸಂಚಾರಿ ಪೊಲೀಸರು 2,751 ಬಿಡಾಡಿ ವಾಹನಗಳನ್ನು ಹಾಗೂ ಸಾರ್ವಜನಿಕರು 1,498 ವಾಹನಗಳನ್ನು ಗುರುತಿಸಿದ್ದು, ಒಟ್ಟು 4,249 ಬಿಡಾಡಿ ವಾಹನಗಳ ಪಟ್ಟಿ ಸಿದ್ಧವಾಗಿದೆ.

ಕಾರ್ಯಕ್ರಮದಲ್ಲಿ ಕೇಂದ್ರ ನಗರ ಪಾಲಿಕೆ ಆಯುಕ್ತ ಜಿ. ಜಗದೀಶ್, ಅಪರ ಆಯುಕ್ತ ವೆಂಕಟ ಚಲಪತಿ, ಜಂಟಿ ಆಯುಕ್ತ ಹೇಮಂತ್ ಶರಣ್, ಮುಖ್ಯ ಅಭಿಯಂತರ ವಿಜಯ್ ಕುಮಾರ್ ಹರಿದಾಸ್ ಸೇರಿದಂತೆ ಹಲವು ಅಧಿಕಾರಿಗಳು ಇದ್ದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಜುಲೈ 19, 2026, ಭಾನುವಾರ

## ಒಳಪುಟಗಳಲ್ಲಿ

10, 20 ರೂ. ಮುಖಬೆಲೆಯ ಪ್ಲಾಸ್ಟಿಕ್ ನೋಟುಗಳ ಚಲಾವಣೆ ಸಾಧ್ಯತೆ: ಆರ್‌ಬಿಐ ಸಿದ್ಧತೆ- ಪು.4

ಬಿಡದಿ ಟೌನ್‌ಶಿಪ್ ವಿರೋಧಿಸಿ ಬಿಜೆಪಿಯವರಿಂದ ಪ್ರಾಯಶ್ಚಿತ್ತ ಯಾತ್ರೆ: ಶಾಸಕ ಬಾಲಕೃಷ್ಣ ವ್ಯಂಗ್ಯ- ಪು.5

ವಿದ್ಯಾರ್ಥಿಗಳ ಕನಸುಗಳ ರಕ್ಷಣೆ -ಪಾರದರ್ಶಕ ಪರೀಕ್ಷಾ ವ್ಯವಸ್ಥೆ ಖಾತ್ರಿಪಡಿಸುವುದು ಎಲ್ಲರ ಜವಾಬ್ದಾರಿ: ಬಿ.ಕೆ. ಹರಿಪ್ರಸಾದ್- ಪು.5

ಅಮೆರಿಕ 7ನೇ ರಾತ್ರಿಯ ದಾಳಿ ಪೂರ್ಣಗೊಳಿಸುತ್ತಿದ್ದಂತೆ ಪೂರ್ಣ ಪ್ರಮಾಣದ ದಾಳಿಯ ಎಚ್ಚರಿಕೆ ನೀಡಿದ ಇರಾನ್- ಪು.8

# ಸಂಪೂರ್ಣ ದೇಶೀಯ ನಿರ್ಮಿತ ವಿಕ್ರಂ-1 ಕಕ್ಷೀಯ ರಾಕೆಟ್ ಯಶಸ್ವಿ ಉಡಾವಣೆ

**ಸ್ಕೈರೂಟ್ ಏರೋಸ್ಪೇಸ್ ಸಂಸ್ಥೆಯಿಂದ ನಿರ್ಮಾಣ: ಕೇಂದ್ರ ಸಚಿವರು, ಇಸ್ರೋ ಅಧ್ಯಕ್ಷ, ವಿಜ್ಞಾನಿಗಳು ಸೇರಿ ಹಲವು ಗಣ್ಯರು ಸಾಕ್ಷಿ**



**ಬೆಂಗಳೂರು, ಜು.18:** ಭಾರತದ ಖಾಸಗಿ ಬಾಹ್ಯಾಕಾಶ ಸಂಸ್ಥೆ ಸ್ಕೈರೂಟ್ ಏರೋಸ್ಪೇಸ್ ಅಭಿವೃದ್ಧಿಪಡಿಸಿದ ವಿಕ್ರಮ್-1 ಕಕ್ಷೀಯ ರಾಕೆಟ್ ಅನ್ನು ಯಶಸ್ವಿಯಾಗಿ ಶನಿವಾರ ಉಡಾವಣೆ ಮಾಡಲಾಯಿತು.

ಬಾಹ್ಯಾಕಾಶ ಇಲಾಖೆಯ ಇನ್ ಸ್ಪೇಸ್ ಕಾರ್ಯಕ್ರಮದ ಮುಖ್ಯಸ್ಥ ಡಾ. ಪವನ್ ಕೆ. ಗೋಯೆಂಕಾ, ಇಸ್ರೋ ಅಧ್ಯಕ್ಷ ವಿ.ನಾರಾಯಣನ್, ಮಾಜಿ ಅಧ್ಯಕ್ಷ ಎಸ್. ಸೋಮನಾಥ್, ಬಾಹ್ಯಾಕಾಶಯಾನಿ ಶುಭಾಂಶು ಶುಕ್ಲಾ ಸೇರಿದಂತೆ ಹಲವು ಗಣ್ಯರು ಉಡಾವಣೆಯ ಯಶಸ್ಸಿಗೆ ಸಾಕ್ಷಿಯಾದರು.

ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಮಿಷನ್ ಆಗಮನ್ ಅಡಿಯಲ್ಲಿ ವಿಕ್ರಮ್- 1 ರಾಕೆಟ್ ಅನ್ನು ಉಡ್ಡಯನ ಮಾಡಲಾಗಿದ್ದು, ಇದು ದೇಶದ ಪ್ರಥಮ ಖಾಸಗಿ ಕಕ್ಷೀಯ ರಾಕೆಟ್ ಎನ್ನುವ ಹೆಗ್ಗಳಿಕೆಗೆ ಪಾತ್ರವಾಗಿದೆ. ಈ ಮೂಲಕ ಬಾಹ್ಯಾಕಾಶ ವಲಯದ ನವೋದ್ಯಮ ಸಂಸ್ಥೆಯಾಗಿರುವ ಹೈದರಾಬಾದ್ ಮೂಲದ ಸ್ಕೈರೂಟ್, ದೇಶದ ಬಾಹ್ಯಾಕಾಶ ಇತಿಹಾಸದಲ್ಲಿ ಹೊಸ ಅಧ್ಯಾಯವನ್ನು ಆರಂಭಿಸಿದೆ.

ಈ ರಾಕೆಟ್ 350 ಕೆ.ಜಿ. ತೂಕದ ಪೇ ಲೋಡ್‌ಗಳನ್ನು ಹೊಂದಿದ್ದು, ಕೆಳಹಂತದ ಭೂಮಿಯ ಕಕ್ಷೆಯಲ್ಲಿ ನಿಯೋಜಿಸಲು ವಿನ್ಯಾಸಗೊಳಿಸಲಾಗಿದೆ. ಪ್ರಧಾನಿ ನರೇಂದ್ರ ಮೋದಿ ಸ್ಕೈರೂಟ್ ಸಂಸ್ಥೆಯ ಸ್ಥಾಪಕ ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪವನ್‌ಕುಮಾರ್ ಚಂದನ್ ಅವರಿಗೆ ದೂರವಾಣಿ ಕರೆಮಾಡಿ ಅಭಿನಂದಿಸಿದರು.

ಈ ಐತಿಹಾಸಿಕ ಸಾಧನೆ ದೇಶದ ಯುವ ಜನಾಂಗಕ್ಕೆ ಪ್ರೇರಣೆಯಾಗಿದ್ದು, ನಾವೀನ್ಯತಾ ವಲಯಕ್ಕೆ ಕೊಡುಗೆ ಸಲ್ಲಿಸಲು ಸ್ಫೂರ್ತಿ ನೀಡಲಿದೆ. ಯುವ ವೃತ್ತಿಪರರನ್ನು ಒಳಗೊಂಡ ಸ್ಕೈರೂಟ್ ತಂಡ ಬಾಹ್ಯಾಕಾಶ ವಲಯದಲ್ಲಿ ಹೆಸರು ಮೂಡಿಸಿದೆ ಎಂದು ಶ್ಲಾಘಿಸಿದರು. ಕೇಂದ್ರ ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ದೆಹಲಿಯಿಂದ ಉಡಾವಣೆಯನ್ನು ವೀಕ್ಷಿಸಿ, ಸಾಧಕರಿಗೆ ಅಭಿನಂದನೆ ಕೋರಿದರು. ಬಳಿಕ ಅವರು, ಈ ಯಶಸ್ಸು ಬಾಹ್ಯಾಕಾಶ ವಲಯದಲ್ಲಿ ಭಾರತದ ಸಾರ್ವಜನಿಕ-ಖಾಸಗಿ ಸಹಭಾಗಿತ್ವದ ಬಲವರ್ಧನೆಯನ್ನು ಪ್ರತಿಬಿಂಬಿಸುತ್ತದೆ. ಬಾಹ್ಯಾಕಾಶ ಆರ್ಥಿಕತೆಯಲ್ಲಿ ದೇಶದ ತೀವ್ರಗತಿಯ ಪ್ರಗತಿಗೆ ಸಾಕ್ಷಿಯಾಗಿದೆ.

### ಈ ಸಾಧನೆಗೆ ಬಾಹ್ಯಾಕಾಶ ಕ್ಷೇತ್ರವನ್ನು ಖಾಸಗಿ ವಲಯಕ್ಕೆ ಮುಕ್ತಗೊಳಿಸಿದ್ದೇ ಕಾರಣ

**ಸ್ಕೈರೂಟ್ ಸಂಸ್ಥೆ ಸ್ಥಾಪಕ ಪವನ್ ಕುಮಾರ್ ಮಾತನಾಡಿ, ವಿಕ್ರಮ್-1 ರಾಕೆಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಕೈಬರಹದಲ್ಲಿರುವ ವಂದೇ ಮಾತರಂ ಸಾಲುಗಳನ್ನು ಉಡಾವಣೆ ಮಾಡಲಾಗಿದ್ದು, ವಂದೇ ಮಾತರಂ ಗೀತೆ ಬಾಹ್ಯಾಕಾಶವನ್ನು ತಲುಪಿದೆ ಎಂದು ತಿಳಿಸಿದರು. ಬಾಹ್ಯಾಕಾಶ ವಲಯವನ್ನು ಖಾಸಗಿ ಕ್ಷೇತ್ರಕ್ಕೆ ಮುಕ್ತವಾಗಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಮಹತ್ವದ ಸುಧಾರಣಾ ಕ್ರಮ ಕೈಗೊಂಡ ಪರಿಣಾಮವಾಗಿ ಇದು ಸಾಧ್ಯವಾಗಿದೆ. ಪ್ರಸ್ತುತ, ಭಾರತದಲ್ಲಿ ಬಾಹ್ಯಾಕಾಶ ವಲಯದ ನವೋದ್ಯಮಗಳ ಸಂಖ್ಯೆ 400ಕ್ಕೆ ಏರಿಕೆಯಾಗಿದೆ. ತಂಡದ ಪರಿಶ್ರಮದಿಂದ ಈ ಸಾಧನೆ ಸಾಧ್ಯವಾಗಿದ್ದು, ವಿಶ್ವದ ಅತ್ಯುತ್ತಮ ಉಡಾವಣಾ ಸ್ಥಳದಿಂದ**



**ರಾಕೆಟ್ ಉಡಾವಣೆ ಮಾಡಿರುವುದು ಹೆಮ್ಮೆಯ ಕ್ಷಣವಾಗಿದೆ. ಇದಕ್ಕೆ ಅವಕಾಶ ಕಲ್ಪಿಸಿದ ಇಸ್ರೋಕ್ಕೆ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದರು. ವಿಕ್ರಮ್-1 ಸಂಪೂರ್ಣವಾಗಿ ದೇಶೀಯವಾಗಿ ನಿರ್ಮಾಣವಾಗಿರುವ ರಾಕೆಟ್ ಆಗಿದೆ. ದೇಶೀಯ ತಂತ್ರಜ್ಞಾನ ಮತ್ತು ವಿನ್ಯಾಸದೊಂದಿಗೆ ದೇಶೀಯ ತಂತ್ರಜ್ಞರು ದೇಶಕ್ಕಾಗಿ ಹಾಗೂ ಇಡೀ ಜಗತ್ತಿಗಾಗಿ ಇದನ್ನು ನಿರ್ಮಿಸಿದ್ದಾರೆ ಎಂದು ಹೇಳಿದರು.**

### ಪ್ರಧಾನಿ ಮೋದಿ ಶ್ಲಾಘನೆ



**ಪ್ರಧಾನಿ ನರೇಂದ್ರ ಮೋದಿ ಶನಿವಾರ ವಿಕ್ರಮ್ -1 ರ ಯಶಸ್ವಿ ಉಡಾವಣೆಗಾಗಿ ಸ್ಕೈರೂಟ್ ಏರೋಸ್ಪೇಸ್ ಅನ್ನು ಅಭಿನಂದಿಸಿದ್ದಾರೆ, ಇದು ಭಾರತದ ಬಾಹ್ಯಾಕಾಶ ಪ್ರಯಾಣದಲ್ಲಿ "ನಿರ್ಣಾಯಕ ಕ್ಷಣ" ಮತ್ತು ದೇಶದ ಪ್ರವರ್ಧಮಾನಕ್ಕೆ ಬರುತ್ತಿರುವ ಖಾಸಗಿ ಬಾಹ್ಯಾಕಾಶ ಉದ್ಯಮಕ್ಕೆ ಒಂದು ಪ್ರಮುಖ ಮೈಲಿಗಲ್ಲು ಎಂದು ಕರೆದಿದ್ದಾರೆ. ಸ್ಕೈರೂಟ್ ತಂಡದ ಯಶಸ್ಸನ್ನು ಶ್ಲಾಘಿಸಲು ತಾವು ಮಾತನಾಡಿರುವುದಾಗಿ ಮೋದಿ ಹೇಳಿದರು. "ಇದು ಭಾರತದ ಬಾಹ್ಯಾಕಾಶ ಪ್ರಯಾಣದಲ್ಲಿ ನಿರ್ಣಾಯಕ ಕ್ಷಣವಾಗಿದೆ. ನಮ್ಮ ಖಾಸಗಿ ವಲಯದ ಹೆಚ್ಚುತ್ತಿರುವ ಭಾಗವಹಿಸುವಿಕೆಯು ಹೊಸ ಗಡಿಗಳನ್ನು ತೆರೆಯುತ್ತಿದೆ ಮತ್ತು ನಾವೀನ್ಯತೆಯನ್ನು ವೇಗಗೊಳಿಸುತ್ತಿದೆ" ಎಂದು ಅವರು ಹೇಳಿದರು. ಭಾರತದ ಯುವಕರ ಮೇಲೆ ಉಡಾವಣೆಯ ಸ್ಫೂರ್ತಿದಾಯಕ ಪ್ರಭಾವವನ್ನು ಅವರು ಪ್ರತಿಪಾದಿಸಿದರು, "ಈ ಸಾಧನೆಯು ಅಸಂಖ್ಯಾತ ಯುವಕರು ದೊಡ್ಡ ಕನಸು ಕಾಣಲು ಮತ್ತು ನಿರ್ಭಯವಾಗಿ ಹೊಸತನವನ್ನು ಕಂಡುಕೊಳ್ಳಲು ಪ್ರೋತ್ಸಾಹಿಸುತ್ತದೆ ಎಂದಿದ್ದಾರೆ.**

# ಮಾಜಿ ಪ್ರಧಾನಿ ದೇವೇಗೌಡರ ಪತ್ನಿ ಚೆನ್ನಮ್ಮ ವಿಧಿವಶ

**ಚಿಕಿತ್ಸೆಗೆ ದಾಖಲಾಗಿದ್ದ ಆಸ್ಪತ್ರೆಯಲ್ಲಿ ಕೊನೆಯುಸಿರು, ಕಂಬನಿ ಮಿಡಿದ ನಾಡಿನ ಗಣ್ಯರು**



**ಬೆಂಗಳೂರು, ಜು.18:** ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಅವರ ಧರ್ಮಪತ್ನಿ ಚನ್ನಮ್ಮ (85) ಶನಿವಾರ ವಿಧಿವಶರಾದರು. ಕಳೆದ ಕೆಲವು ವರ್ಷಗಳಿಂದ ಉಸಿರಾಟದ ಸಮಸ್ಯೆಯಿಂದ ಬಳಲುತ್ತಿದ್ದ ಅವರ ಆರೋಗ್ಯದಲ್ಲಿ ದಿಢೀರ್ ಏರುಪೇರು ಕಂಡುಬಂದ ಹಿನ್ನೆಲೆಯಲ್ಲಿ ಜುಲೈ 15ರಂದು ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಗೆ ದಾಖಲಿಸ ಲಾಗಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಅವರು ಶನಿವಾರ ಕೊನೆಯುಸಿರೆಳೆದಿದ್ದಾರೆ.

ದೇವೇಗೌಡರ ದೀರ್ಘ ಹಾಗೂ ಸುದೀರ್ಘ ರಾಜಕೀಯ ಪಯಣದಲ್ಲಿ ಸದಾ ನೆರಳಾಗಿ, ಇಡೀ ಕುಟುಂಬದ ಜವಾಬ್ದಾರಿಯನ್ನು ಹೊತ್ತು ಮುನ್ನಡೆಸಿದ್ದ ಗಟ್ಟಿಗಿತ್ತಿ ಚನ್ನಮ್ಮ ಅವರ ಅಗಲಿಕೆ ಗೌಡರ ಕುಟುಂಬಕ್ಕೆ ಹಾಗೂ ಜೆಡಿಎಸ್ ಪಕ್ಷದ ಕಾರ್ಯಕರ್ತರಿಗೆ ತೀವ್ರ ಆಘಾತವನ್ನುಂಟು ಮಾಡಿದೆ.

ಹಾಸನ ತಾಲೂಕಿನ ಮುತ್ತಿಗೆ ಹಿರೇಹಳ್ಳಿ ಮೂಲದ ಚನ್ನಮ್ಮ ಅವರು 1954ರ ಮೇ 25ರಂದು ಹೆಚ್.ಡಿ. ದೇವೇಗೌಡರ ಜೊತೆ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದರು. ಅಂದಿನಿಂದ ಇಂದಿನವರೆಗೂ ದೇವೇಗೌಡರು ರಾಜಕೀಯವಾಗಿ ಸದಾ ಬ್ಯುಸಿಯಾಗಿದ್ದರೂ, ಕುಟುಂಬದ ಯಾವೊಂದು ಹೊರೆಯೂ ಅವರ ಮೇಲೆ ಬೀಳದಂತೆ ಇಡೀ ಸಂಸಾರವನ್ನು ಚನ್ನಮ್ಮ ಅವರೇ ಮುನ್ನಡೆಸಿದ್ದರು.

ಪುತ್ರರಾದ ಮಾಜಿ ಸಚಿವ ಎಚ್.ಡಿ.ರೇವಣ್ಣ, ಎಚ್.ಡಿ. ಬಾಲಕೃಷ್ಣ, ಎಚ್.ಡಿ. ರಮೇಶ್ ಗೌಡ, ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹಾಗೂ ಪುತ್ರಿಯರಾದ ಶೈಲಜಾ ಮತ್ತು ಅನಸೂಯಾ ಅವರನ್ನು ಅತ್ಯಂತ ಶಿಸ್ತಿನಿಂದ ಬೆಳೆಸಿ, ಅವರಿಗೆ ಉತ್ತಮ ಶಿಕ್ಷಣ ಕೊಡಿಸುವಲ್ಲಿ ಚನ್ನಮ್ಮ ಅವರ ಪಾತ್ರ ಅನನ್ಯವಾಗಿತ್ತು. ರಾಜಕೀಯವಾಗಿ ದೊಡ್ಡ ಎತ್ತರಕ್ಕೆ ಬೆಳೆದ ದೇವೇಗೌಡರ ಯಶಸ್ಸಿನ ಹಿಂದೆ ಚನ್ನಮ್ಮ ಅವರ ತ್ಯಾಗ ಮತ್ತು ಕಠಿಣ ಪರಿಶ್ರಮ ಅಡಗಿದೆ.

ಮೃತರ ನಿಧನಕ್ಕೆ ಹಲವಾರು ಗಣ್ಯರು ಕಂಬನಿ ಮಿಡಿದಿದ್ದಾರೆ.

### ಸಮಾಜಸೇವೆಯ ಕಾಳಜಿ ಮೆಚ್ಚುವಂಥದ್ದು



**ಮಾಜಿ ಪ್ರಧಾನಿ ಎಚ್. ಡಿ. ದೇವೇಗೌಡ ಅವರ ಪತ್ನಿ ಚೆನ್ನಮ್ಮ ಅವರ ನಿಧನಕ್ಕೆ ಪ್ರಧಾನಿ ನರೇಂದ್ರ ಮೋದಿ ಸಂತಾಪ ವ್ಯಕ್ತಪಡಿಸಿದ್ದು, ವಿನಮ್ರತೆ ಮತ್ತು ಸಮಾಜಸೇವೆ ಬಗೆಗಿನ ಅವರ ಕಾಳಜಿ ಮೆಚ್ಚುವಂಥದ್ದು. ಇದಕ್ಕಾಗಿ ಅವರು ಜನಮನ್ನಣೆ ಗಳಿಸಿದ್ದರು. ಈ ದುಃಖದ ಸಮಯದಲ್ಲಿ ಮಾಜಿ ಪ್ರಧಾನಿ ದೇವೇಗೌಡರು ಮತ್ತು ಅವರ ಇಡೀ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿ ನೀಡಲಿ ಎಂದು ಭಗವಂತನನ್ನು ಪ್ರಾರ್ಥಿಸುತ್ತೇನೆ ಎಂದು ಪ್ರಧಾನಮಂತ್ರಿ ಮೋದಿ ಕಂಬನಿ ಮಿಡಿದಿದ್ದಾರೆ.**

### ಅಪಾರ ದೈವಭಕ್ತೆ, ಮಹಾನ್ ತಾಯಿ



ಅಪಾರ ದೈವಭಕ್ತೆಯಾಗಿದ್ದ ಚನ್ನಮ್ಮನವರು ತುಂಬು ಕುಟುಂಬವನ್ನು ಸಾಕಿ ಸಲಹಿದ ಮಹಾನ್ ತಾಯಿ. ಅವರು ಆಸ್ಪತ್ರೆಯಿಂದ ಗುಣಮುಖರಾಗಿ ವಾಪಸ್ಸು ಬರುತ್ತಾರೆ ಎಂದು ಎಲ್ಲರೂ ನಂಬಿಕೆ ಇಟ್ಟಿದ್ದರು. ಆ ನಂಬಿಕೆ ಸುಳ್ಳಾಗಿರುವುದಕ್ಕೆ ಬಹಳ ಬೇಸರವಾಗಿದೆ. ಪ್ರತೀ ಯಶಸ್ವಿ ಪುರುಷನ ಹಿಂದೆ ಮಹಿಳೆ ಇದ್ದೇ ಇರುತ್ತಾಳೆ ಎನ್ನುವಂತೆ ದೇವೇಗೌಡರ ಪ್ರತಿ ಯಶಸ್ಸಿನ ಹಿಂದೆ ನಿಂತಿದ್ದವರು ಚೆನ್ನಮ್ಮ. ರಾಜಕೀಯದ ಏಳು-ಬೀಳುಗಳಲ್ಲಿ ದೇವೇಗೌಡರಿಗೆ ಬೆನ್ನೆಲುಬಾಗಿ ನಿಂತವರು. ಯಾವುದೇ ಪ್ರಚಾರ ಬಯಸದೆ, ತೆರೆಮರೆಯಲ್ಲಿ ಇದ್ದವರು. ಇಳಿ ವಯಸ್ಸಿನಲ್ಲಿ ಪತ್ನಿಯ ಅಗಲಿಕೆ ದೇವೇಗೌಡರಿಗೆ ಹಾಗೂ ಅವರ ಕುಟುಂಬ ವರ್ಗದವರಿಗೆ ನೋವು ತರುವುದರ ಜತೆಗೆ ತುಂಬಲಾರದ ನಷ್ಟವಾಗಿದೆ. ಅವರ ಆತ್ಮಕ್ಕೆ ಚಿರಶಾಂತಿ ಕೋರುತ್ತೇನೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕಂಬನಿ ಮಿಡಿದಿದ್ದಾರೆ.



**ಚೆನ್ನಮ್ಮನವರ ನಿಧನದಿಂದ ದುಃಖಿತನಾಗಿದ್ದೇನೆ. ಕಷ್ಟ - ನೋವುಗಳಿಂದ ಕುಗ್ಗದೆ, ಎಲ್ಲವನ್ನೂ ಧೈರ್ಯದಿಂದ ಎದುರಿಸಿದ್ದ ಗಟ್ಟಿಗಿತ್ತಿ. ದೇವೇಗೌಡರ ರಾಜಕೀಯ ಜೀವನದ ಏಳುಬೀಳಿನ ನಡುವೆ ದೊಡ್ಡ ಕುಟುಂಬವನ್ನು ಪೊರೆಯುತ್ತಾ ಬಂದ ಅವರು ಒಬ್ಬ ಆದರ್ಶ ಗೃಹಿಣಿಯಾಗಿದ್ದರು. ದೀರ್ಘಕಾಲದ ಸಂಗಾತಿಯನ್ನು ಕಳೆದುಕೊಂಡ ದೇವೇಗೌಡರಿಗೆ ಹಾಗೂ ಕುಟುಂಬ ಸದಸ್ಯರಿಗೆ ದು:ಖವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಭಗವಂತ ನೀಡಲಿ. ಅವರ ನೋವಿನಲ್ಲಿ ನಾನೂ ಭಾಗಿಯಾಗಿದ್ದೇನೆ. ಮೃತರ ಆತ್ಮಕ್ಕೆ ಚಿರಶಾಂತಿ ಲಭಿಸಲಿ.**

**-ಸಿದ್ದರಾಮಯ್ಯ, ಮಾಜಿ ಮುಖ್ಯಮಂತ್ರಿ**

### ಹರದನಹಳ್ಳಿಯಲ್ಲಿ ನಾಳೆ ಅಂತ್ಯಸಂಸ್ಕಾರ

**ಬೆಂಗಳೂರು, ಜು.18:** ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರ ಪತ್ನಿ ಚೆನ್ನಮ್ಮ ಪಾರ್ಥಿವ ಶರೀರದ ಅಂತಿಮ ದರ್ಶನಕ್ಕೆ ಭಾನುವಾರ ಮಧ್ಯಾಹ್ನದವರೆಗೆ ಪದ್ಮನಾಭನಗರದ ನಿವಾಸದಲ್ಲಿ ವ್ಯವಸ್ಥೆ ಮಾಡಲಾಗಿದೆ. ಬಳಿಕ ಹಾಸನ ಜಿಲ್ಲೆ ಹೊಳೆನರಸೀಪುರ ತಾಲೂಕು ಹರದನಹಳ್ಳಿಗೆ ಪಾರ್ಥಿವ ಶರೀರ ಕೊಂಡೊಯ್ಯಲಾಗುವುದು. ಸೋಮವಾರ ಅಂತ್ಯ ಸಂಸ್ಕಾರ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

# ಸಂಪುಟ ವಿಸ್ತರಣೆಗೆ ಮುಹೂರ್ತ ನಿಗದಿ ಮಾಡಿ

**ಬೆಂಗಳೂರು, ಜು.18** ರಾಜ್ಯ ಸಚಿವ ಸಂಪುಟ ವಿಸ್ತರಣೆ ಚರ್ಚೆಗಳು ಅಪೂರ್ಣವಾಗಿರುವಾಗಲೇ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್ ಅವರು ಶನಿವಾರ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರನ್ನು ಭೇಟಿ ಮಾಡಿ, ಚರ್ಚೆ ನಡೆಸಿದರು.

ಎರಡು ದಿನಗಳ ಹಿಂದೆ ದೆಹಲಿಯಲ್ಲಿ ಸಂಪುಟ ವಿಸ್ತರಣೆ ಬಗ್ಗೆ ಚರ್ಚೆ ನಡೆಯುತ್ತಿದ್ದ ಸಂದರ್ಭದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರ ಪುತ್ರನ ಅನಾರೋಗ್ಯದ ಕಾರಣ ಅವರು ಬೆಂಗಳೂರಿಗೆ ವಾಪಸ್ಸಾಗಿದ್ದರು. ಹಾಗಾಗಿ ಸಂಪುಟ ವಿಸ್ತರಣೆ ಚರ್ಚೆ ಅಪೂರ್ಣವಾಗಿತ್ತು. ಕಾಂಗ್ರೆಸ್ ವರಿಷ್ಠ ರಾಹುಲ್‌ಗಾಂಧಿ ಅವರು ದೆಹಲಿಗೆ ಬಂದಿದ್ದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ಧರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಹರಿಪ್ರಸಾದ್ ಅವರ ಜತೆ ಒಂದು ಸುತ್ತಿನ ಚರ್ಚೆ ನಡೆಸಿ ಖರ್ಗೆ ಅವರು ದೆಹಲಿಗೆ ಬಂದ ನಂತರ ಅವಶ್ಯಬಿದ್ದರೆ ನಿಮ್ಮನ್ನು ಕರೆಯುತ್ತೇನೆ ಎಂದು ಹೇಳಿದ್ದರು.



**ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಗೆ ಸಿಎಂ-ಡಿಸಿಎಂ ಮನವಿ**

ಈ ಬೆಳವಣಿಗೆ ಹಿನ್ನೆಲೆಯಲ್ಲಿ ಸಂಪುಟ ವಿಸ್ತರಣೆ ಮಹೂರ್ತ ಮುಂದಕ್ಕೆ ಹೋಗಿತ್ತು. ಬೆಂಗಳೂರಿನಲ್ಲೇ ಇರುವ ಎಐಸಿಸಿ ಅಧ್ಯಕ್ಷ ಖರ್ಗೆ ಅವರನ್ನು ಅವರ ನಿವಾಸದಲ್ಲಿ ಶನಿವಾರ ಬೆಳಗ್ಗೆ ಮುಖ್ಯಮಂತ್ರಿ ಶಿವಕುಮಾರ್, ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್ ಇವರುಗಳು ಭೇಟಿಯಾಗಿ ಸಂಪುಟ ವಿಸರಣೆ ಬಗ್ಗೆ ಚರ್ಚೆ ನಡೆಸಿದರು. ಕಾಂಗ್ರೆಸ್ ವರಿಷ್ಠ ರಾಹುಲ್‌ಗಾಂಧಿ ಅವರ ಜತೆ ಆದಷ್ಟು ಬೇಗ ಮಾತನಾಡಿ, ಸಂಪುಟ ವಿಸ್ತರಣೆಗೆ ಮಹೂರ್ತ ನಿಗದಿ ಮಾಡಿ ಎಂದು ಈ ಇಬ್ಬರೂ ನಾಯಕರು ಖರ್ಗೆಯವರಲ್ಲಿ ಮನವಿ ಮಾಡಿದರು. ಖರ್ಗೆ ಅವರು ಭಾನುವಾರದ ನಂತರ ದೆಹಲಿಗೆ ತೆರಳಲಿದ್ದ ಸೋಮವಾರ ಇಲ್ಲವೆ ಮಂಗಳವಾರ ಸಂಪುಟ ವಿಸ್ತರಣೆ ಬಗ್ಗೆ ರಾಹುಲ್‌ಗಾಂಧಿ ಅವರೊಂದಿಗೆ ಚರ್ಚಿಸುವ ಸಾಧ್ಯತೆಗಳಿವೆ.

## ದೆಹಲಿಯಲ್ಲಿ ರಾತ್ರಿ ಅಧಿಕ ಬಿಸಿ, ವಾರಾಂತ್ಯದಲ್ಲಿ ಮಳೆ

**ಐಎಂಡಿ ಮುನ್ಸೂಚನೆ**

**ನವದೆಹಲಿ, ಜು. 18:** ದೆಹಲಿಯಲ್ಲಿ ರಾತ್ರಿವೇಳೆ ಐದು ವರ್ಷಗಳಲ್ಲಿಯೇ ಅತ್ಯಂತ ಬಿಸಿ ದಾಖಲಾಗಿದ್ದು, ಬಿಸಿಲು, ಆರ್ದ್ರತೆ ಮತ್ತು ಮಳೆ ಕೊರತೆಯ ನಡುವೆಯೂ ಕನಿಷ್ಠ ತಾಪಮಾನ 31 ಡಿಗ್ರಿ ಸೆಲ್ಸಿಯಸ್‌ಗೆ ಇಳಿದಿದ್ದು, ವಾರಾಂತ್ಯದಲ್ಲಿ ಮಳೆಯೊಂದಿಗೆ ಗುಡುಗು ಸಹಿತ ಮಳೆಯಾಗುವುದಾಗಿ ಭಾರತ ಹವಾಮಾನ ಇಲಾಖೆ(ಐಎಂಡಿ) ಮುನ್ಸೂಚನೆ ನೀಡಿದೆ.

ಗುಡುಗು ಮತ್ತು ಮಿಂಚಿನ ಸಾಧ್ಯತೆಯೊಂದಿಗೆ ಭಾಗಶಃ ಮೋಡ ಕವಿದ ವಾತಾವರಣವಿರಲಿದ್ದು, ತುಂಬಾ ಹಗುರವಾದ ಮಳೆ, ಮಿಂಚಿನೊಂದಿಗೆ ಗುಡುಗು ಸಹಿತ ಮಳೆ ಮತ್ತು ಗಂಟೆಗೆ 30-40 ಕಿಮೀ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆಯಿದೆ. ಈ ಹಿನ್ನೆಲೆಯಲ್ಲಿ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದ್ದು, ಶನಿವಾರ ಮತ್ತು ಭಾನುವಾರ ಯೆಲ್ಲೋ ಅಲರ್ಟ್ ಘೋಷಿಸಿದೆ. 2021ರ ಜುಲೈ 1ರಂದು ನಗರದಲ್ಲಿ 31.7 ಡಿಗ್ರಿ ಸೆಲ್ಸಿಯಸ್‌ಗೆ ತಾಪಮಾನ ಇಳಿದಿತ್ತು. ಗರಿಷ್ಠ ತಾಪಮಾನವು 38.8 ಡಿಗ್ರಿ ಸೆಲ್ಸಿಯಸ್ಗೆ ತಲುಪಿದ್ದು, ಸಾಮಾನ್ಯಕ್ಕಿಂತ 3.6 ಡಿಗ್ರಿ ಹೆಚ್ಚಾಗಿತ್ತು ಎಂದು ತಿಳಿಸಿದೆ.

ನಿಲ್ದಾಣವಾರು ದತ್ತಾಂಶದ ಪ್ರಕಾರ, ಲೋಧಿ ರಸ್ತೆಯಲ್ಲಿ ಗರಿಷ್ಠ ತಾಪಮಾನವು 39.0 ಡಿಗ್ರಿ ಸೆಲ್ಸಿಯಸ್, ಸಾಮಾನ್ಯಕ್ಕಿಂತ 5.0 ಡಿಗ್ರಿ ಸೆಲ್ಸಿಯಸ್, ನಂತರ ಪಾಲಂನಲ್ಲಿ 38.5 ಡಿಗ್ರಿ ಸೆಲ್ಸಿಯಸ್ (ಸಾಮಾನ್ಯಕ್ಕಿಂತ 3.3 ಡಿಗ್ರಿ ಸೆಲ್ಸಿಯಸ್), ಅಯನಗರದಲ್ಲಿ 38.4 ಡಿಗ್ರಿ ಸೆಲ್ಸಿಯಸ್ (ಸಾಮಾನ್ಯಕ್ಕಿಂತ 3.1 ಡಿಗ್ರಿ ಸೆಲ್ಸಿಯಸ್), ಮತ್ತು ರಿಡ್ಜ್ ನಿಲ್ದಾಣದಲ್ಲಿ 37.4 ಡಿಗ್ರಿ ಸೆಲ್ಸಿಯಸ್ (ಸಾಮಾನ್ಯಕ್ಕಿಂತ 2.6 ಡಿಗ್ರಿ ಸೆಲ್ಸಿಯಸ್) ತಾಪಮಾನ ದಾಖಲಾಗಿದೆ.

ನಗರದಲ್ಲಿ ಕನಿಷ್ಠ ತಾಪಮಾನವು 31.0 ಡಿಗ್ರಿ ಸೆಲ್ಸಿಯಸ್, ಸಾಮಾನ್ಯಕ್ಕಿಂತ 3.8 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ನಗರದ ಮೂಲ ಹವಾಮಾನ ಕೇಂದ್ರವಾದ ಸಫ್ದರ್‌ಜಂಗ್‌ನಲ್ಲಿ ಕನಿಷ್ಠ ತಾಪಮಾನವು 31.0 ಡಿಗ್ರಿ ಸೆಲ್ಸಿಯಸ್, ಸಾಮಾನ್ಯಕ್ಕಿಂತ 3.8 ಡಿಗ್ರಿ ಸೆಲ್ಸಿಯಸ್ ಆಗಿತ್ತು.

ರಾಜಧಾನಿಯ ವಾಯು ಗುಣಮಟ್ಟ ಸೂಚ್ಯಂಕ ಶುಕ್ರವಾರ ಸಂಜೆ ಮಧ್ಯಮ ವಿಭಾಗದಲ್ಲಿ 176 ರಷ್ಟಿತ್ತು.

## ರಾಜ್ಯಕ್ಕೆ ಮತ್ತೆ ಕೊರೋನಾತಂಕ

**ಬೆಂಗಳೂರು, ಜು.18:** ಇಡೀ ವಿಶ್ವವನ್ನೇ ನಡುಗಿಸಿದ್ದ ಮಹಾಮಾರಿ ಕೊರೊನಾ ವೈರಸ್ ಇದೀಗ ರಾಜ್ಯದಲ್ಲಿ ಮತ್ತೆ ವಕ್ಕರಿಸುವ ಭೀತಿ ಮೂಡಿಸಿದೆ. ಕಳೆದ ಕೆಲವು ದಿನಗಳಿಂದ ಕರ್ನಾಟಕದಲ್ಲಿ ಕೊರೊನಾ ಸೋಂಕಿತರ ಸಂಖ್ಯೆ ದಿನೇದಿನೆ ಏರಿಕೆಯಾಗುತ್ತಿದ್ದು, ಸಾರ್ವಜನಿಕರಲ್ಲಿ ಹೊಸ ರೂಪಾಂತರಿ ತಳಿಯ ಆತಂಕ ಎದುರಾಗಿದೆ.

**■ 15 ದಿನದಲ್ಲಿ 62 ಪ್ರಕರಣ ವರದಿ, 14 ಮಂದಿಯಲ್ಲಿ ಸೋಂಕು ದೃಢ**

ರಾಜ್ಯದಲ್ಲಿ ಕಳೆದ 15 ದಿನಗಳ ಅವಧಿಯಲ್ಲಿ 62ಕ್ಕೂ ಹೆಚ್ಚು ಹೊಸ ಪ್ರಕರಣಗಳು ವರದಿಯಾಗಿವೆ. ಜೂನ್ 22ರಿಂದ ಜೂನ್ 28ರ ನಡುವೆ ಒಟ್ಟು 106 ಜನರಿಗೆ ಕೋವಿಡ್ ಪರೀಕ್ಷೆ ನಡೆಸಲಾಗಿದ್ದು, ಈ ಪೈಕಿ 14 ಜನರಲ್ಲಿ ಸೋಂಕು ದೃಢಪಟ್ಟಿತ್ತು. ಆ ಬಳಿಕ ಸೋಂಕಿನ ಪ್ರಮಾಣ ಮತ್ತಷ್ಟು ವೇಗ ಪಡೆದುಕೊಂಡಿದ್ದು, ಜುಲೈ 6ರಿಂದ ಜುಲೈ 12ರವರೆಗಿನ ಒಂದೇ ವಾರದಲ್ಲಿ ಬರೋಬ್ಬರಿ 30 ಹೊಸ ಪಾಸಿಟಿವ್ ಪ್ರಕರಣಗಳು ಪತ್ತೆಯಾಗಿವೆ. ಹೊಸ ಪ್ರಕರಣಗಳ ದಿಢೀರ್ ಏರಿಕೆಯಿಂದಾಗಿ ಕರ್ನಾಟಕದಲ್ಲಿ ಸದ್ಯ ಸಕ್ರಿಯ ಕೊರೊನಾ ಪ್ರಕರಣಗಳ ಒಟ್ಟು ಸಂಖ್ಯೆ 145ಕ್ಕೆ ಏರಿಕೆಯಾಗಿದೆ.

# ರಾಜ್ಯದ ರಾಜಕಾರಣಿಗಳ ಪಾಲಿಗೆ ಮಾತೃಸ್ವರೂಪಿಣಿಯಾಗಿದ್ದವರು ಚೆನ್ನಮ್ಮ: ಸಿಎಂ ಡಿ.ಕೆ.ಶಿವಕುಮಾರ್

**ಬೆಂಗಳೂರು, ಜು.18:** "ರಾಜ್ಯದ ರಾಜಕಾರಣಿಗಳ ಪಾಲಿಗೆ ಮಾತೃ ಸ್ವರೂಪಿಣಿಯಾಗಿದ್ದವರು ಚೆನ್ನಮ್ಮ ಅವರು ಎಲ್ಲರಿಗೂ ಮಾದರಿಯಾಗಿದ್ದರು" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದರು.

ಪದ್ಮನಾಭನಗರ ನಿವಾಸದಲ್ಲಿ ಮಾಜಿ ಪ್ರಧಾನಿ ದೇವೇಗೌಡರ ಪತ್ನಿ ಚೆನ್ನಮ್ಮನವರ ಪಾರ್ಥಿವ ಶರೀರಕ್ಕೆ ಶಿವಕುಮಾರ್ ಅವರು ಅಂತಿಮ ನಮನ ಸಲ್ಲಿಸಿ, ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು.

"ಮಾತೃ ಸ್ವರೂಪರಾದ ಚನ್ನಮ್ಮ ಅವರ ನಿಧನ ಮನಸ್ಸಿಗೆ ನೋವಾಗಿದೆ. ಅವರ ಆರೋಗ್ಯ ಗಂಭೀರವಾಗಿತ್ತು ಎಂಬ ಮಾಹಿತಿ ನಮಗೆ ಬಂದಿತ್ತು. ಅವರು ಅಪಾರ ದೈವ ಭಕ್ತೆಯಾಗಿದ್ದರು. ದೇಶದ ದೊಡ್ಡ ಕುಟುಂಬಕ್ಕೆ ಕಷ್ಟ ಹಾಗೂ ಸುಖದ ದಿನಗಳಲ್ಲಿ ಹಗಲು ರಾತ್ರಿ ಜೊತೆಯಾಗಿ ನಿಂತು ಸೇವೆ ಮಾಡಿದ ಧೀಮಂತ ಮಹಿಳೆ" ಎಂದು ಸ್ಮರಿಸಿದರು.

"ನಾವುಗಳು ಯಾರೂ ಶಾಶ್ವತವಲ್ಲ. ಆದರೆ ದೇಶ ಹಾಗೂ ರಾಜ್ಯದ ರಾಜಕಾರಣಿಗಳ ಪಾಲಿಗೆ ಮಾತೃ ಸ್ವರೂಪಿಣಿಯಾಗಿದ್ದರು. ದೇವೇಗೌಡರು ಹಾಗೂ ಆ ಕುಟುಂಬದ ಎಲ್ಲಾ ಮಕ್ಕಳ ಯಶಸ್ಸಿಗೆ ಅನೇಕ ತ್ಯಾಗ ಮಾಡಿದ ಹೆಣ್ಣುಮಗಳು. ಆಕೆಯನ್ನು ನಾವು ಕಳೆದುಕೊಂಡಿದ್ದೇವೆ" ಎಂದು ಬೇಸರ ವ್ಯಕ್ತಪಡಿಸಿದರು.

"ಕರ್ನಾಟಕ ಸರ್ಕಾರ ಅವರಿಗೆ ಸಕಲ ಸರ್ಕಾರಿ ಗೌರವಗಳೊಂದಿಗೆ, ಅಂತಿಮ ನಮನಗಳನ್ನು ಸಲ್ಲಿಸಲಾಗುವುದು. ಸೋಮವಾರ ಅವರ ಅಂತ್ಯಕ್ರಿಯೆಯನ್ನು ಮಾಡಲು ಕುಟುಂಬದವರು ತೀರ್ಮಾನ ಮಾಡಿದ್ದು, ಆ ಕಾರ್ಯಕ್ರಮದಲ್ಲಿ ಭಾಗವಹಿಸುತ್ತೇವೆ. ಅದಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳಲು ಸರ್ಕಾರದ ಕಡೆಯಿಂದ ಸೂಚನೆ ನೀಡಲಾಗಿದೆ" ಎಂದರು.

"ಮಾಜಿ ಪ್ರಧಾನಮಂತ್ರಿ ಪತ್ನಿ, ಕೇಂದ್ರ ಸಚಿವರ ತಾಯಿಯಾಗಿದ್ದು, ಈ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ನಾವು ಸರ್ಕಾರಿ ಗೌರವ ನೀಡಲು ತೀರ್ಮಾನಿಸಿದ್ದೇವೆ. ದೇವೇಗೌಡರ ರಾಜಕೀಯ ಹಾದಿಯ ಎಲ್ಲಾ ಹಂತಗಳಲ್ಲಿ ಅವರ ಜೊತೆಗೆ ನಿಂತಿದ್ದರು. ಅವರ ಆತ್ಮಕ್ಕೆ ಶಾಂತಿ ಸಿಗಲಿ. ಅವರ ಅಗಲಿಕೆ ನೋವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬದ ಎಲ್ಲಾ ಸದಸ್ಯರಿಗೆ ಕರುಣಿಸಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ" ಎಂದು ಸಂತಾಪ ಸೂಚಿಸಿದರು.



**ಮಾಜಿ ಪ್ರಧಾನಿ ದೇವೇಗೌಡರ ಪತ್ನಿ ಚೆನ್ನಮ್ಮನವರ ಪಾರ್ಥಿವ ಶರೀರಕ್ಕೆ ಪದ್ಮನಾಭನಗರ ನಿವಾಸದಲ್ಲಿ ಸಿಎಂ ಡಿ ಕೆ ಶಿವಕುಮಾರ್ ಅವರು ಪತ್ನಿ ಉಷಾ ಅವರ ಜತೆ ಶನಿವಾರ ರಾತ್ರಿ ಅಂತಿಮ ನಮನ ಸಲ್ಲಿಸಿದರು. ದೇವೇಗೌಡರು, ಮಾಜಿ ಸಿಎಂ ಕುಮಾರಸ್ವಾಮಿ, ಮಾಜಿ ಸಚಿವ ರೇವಣ್ಣ ಸೇರಿದಂತೆ ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳಿದರು. ಮಾಜಿ ಸಿಎಂ ದಿವಂಗತ ಎಸ್ ಎಂ ಕೃಷ್ಣ ಅವರ ಪತ್ನಿ ಪ್ರೇಮಾ ಕೃಷ್ಣ, ಪುತ್ರಿ ಮಾಳವಿಕಾ ಹಾಜರಿದ್ದರು.**

# ದೆಹಲಿ ಸಾರಿಗೆಗೆ 2800 ಹೊಸ ಇವಿ ಬಸ್‌ಗಳ ಸೇರ್ಪಡೆ

**2028-29ರ ವೇಳೆಗೆ 14000 ಬಸ್‌ಗಳ ಸೇರ್ಪಡೆ ಗುರಿ: ದೆಹಲಿ ಸಿಎಂ ರೇಖಾಗುಪ್ತ**





**ನವದೆಹಲಿ, ಜು.18:** ಸಾರ್ವಜನಿಕ ಸಾರಿಗೆಯನ್ನು ಬಲಪಡಿಸಲು ದೆಹಲಿ ಸರ್ಕಾರ ನಿರಂತರವಾಗಿ ಕೆಲಸ ಮಾಡುತ್ತಿದ್ದು, ತನ್ನ ಎಲೆಕ್ಟ್ರಿಕ್ ಬಸ್‌ಗಳ ಫ್ಲೀಟ್ ಅನ್ನು ವಿಸ್ತರಿಸುತ್ತಿದೆ ಎಂದು ಮುಖ್ಯಮಂತ್ರಿ ರೇಖಾ ಗುಪ್ತಾ ಹೇಳಿದರು.


ದೆಹಲಿ ಸರ್ಕಾರವು ವಾಯು ಮಾಲಿನ್ಯವನ್ನು ಕಡಿಮೆ ಮಾಡಲು ಮತ್ತು ರಾಷ್ಟ್ರೀಯ ರಾಜಧಾನಿಯ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಬಲಪಡಿಸಲು ನಿರ್ಣಾಯಕ ಹೆಜ್ಜೆ ಇಟ್ಟಿದೆ, ಮತ್ತು ಯೋಜನೆಯ ಪ್ರಕಾರ ಪಿಎಂ ಇ-ಡ್ರೈವ್ ಯೋಜನೆಯ ಹಂತ-1ರ ಅಡಿಯಲ್ಲಿ ಸಾರಿಗೆ ನಿಗಮದ ಫ್ಲೀಟ್‌ಗೆ 2800 ಹೊಸ ಲೋ-ಫ್ಲೋರ್ ಎಲೆಕ್ಟ್ರಿಕ್ ಬಸ್‌ಗಳನ್ನು ಸೇರಿಸಲಾಗುವುದು. ಈ ಕ್ರಮವು ಪ್ರಧಾನಿ ನರೇಂದ್ರ ಮೋದಿಯವರ ಸ್ವಚ್ಛ, ಹಸಿರು ಮತ್ತು ಅಭಿವೃದ್ಧಿ ಹೊಂದಿದ ಭಾರತ ಮತ್ತು ಅಭಿವೃದ್ಧಿ ಹೊಂದಿದ ರಾಷ್ಟ್ರೀಯ ರಾಜಧಾನಿಯ ದೃಷ್ಟಿಕೋನಕ್ಕೆ ಅನುಗುಣವಾಗಿದೆ ಎಂದರು.

ಮುಖ್ಯಮಂತ್ರಿಯವರ ಪ್ರಕಾರ, 2028-29ರ ವೇಳೆಗೆ ದೆಹಲಿಯ ಸಾರ್ವಜನಿಕ ಸಾರಿಗೆ ಫ್ಲೀಟ್ ಅನ್ನು ಸುಮಾರು 14,000 ಬಸ್‌ಗಳಿಗೆ ಹೆಚ್ಚಿಸುವ ಗುರಿಯನ್ನು ಸರ್ಕಾರ ಹೊಂದಿದೆ, ಮತ್ತು ಈ 2800 ಬಸ್‌ಗಳು ಮುಂದಿನ ವರ್ಷದಿಂದ ದೆಹಲಿಯ ರಸ್ತೆಗಳಲ್ಲಿ ಓಡಲು ಪ್ರಾರಂಭಿಸುವ ನಿರೀಕ್ಷೆಯಿದೆ. ದೆಹಲಿ ಸಚಿವ ಸಂಪುಟದ ಇತ್ತೀಚಿನ ಸಭೆಯಲ್ಲಿ ಬಸ್‌ಗಳನ್ನು ಸೇರಿಸುವ ನಿರ್ಧಾರವನ್ನು ಅಂಗೀಕರಿಸಲಾಗಿದೆ, ಆದರೆ 2,800 ಶೂನ್ಯ-ಹೊರಸೂಸುವಿಕೆ ವಿದ್ಯುತ್ ಬಸ್‌ಗಳನ್ನು ಸೇರಿಸುವುದು ದೆಹಲಿಯ ಗಾಳಿಯ ಗುಣಮಟ್ಟವನ್ನು ಸುಧಾರಿಸುವ ಮತ್ತು ನಾಗರಿಕರಿಗೆ ಹೆಚ್ಚು ಅನುಕೂಲಕರ, ಆಧುನಿಕ ಮತ್ತು ಸುಸ್ಥಿರ ಸಾರ್ವಜನಿಕ ಸಾರಿಗೆಯನ್ನು ಒದಗಿಸುವತ್ತ ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದು ಸಿಎಂ ಹೇಳಿದರು.

ಒಟ್ಟು ಫ್ಲೀಟ್‌ನಲ್ಲಿ, 1,400 ಬಸ್‌ಗಳು 12 ಮೀಟರ್ ಉದ್ದವಿರುತ್ತವೆ ಮತ್ತು ಉಳಿದ 1,400 ಬಸ್‌ಗಳು 9 ಮೀಟರ್ ಉದ್ದವಿರುತ್ತವೆ. 9 ಮೀಟರ್ ಬಸ್‌ಗಳು ಕಿರಿದಾದ ರಸ್ತೆಗಳಲ್ಲಿ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ವಿಶೇಷವಾಗಿ ಉಪಯುಕ್ತವಾಗುತ್ತವೆ, ಮುಖ್ಯ ಕಾರಿಡಾರ್‌ಗಳನ್ನು ಮೀರಿ ಸಾರ್ವಜನಿಕ ಸಾರಿಗೆಯನ್ನು ವಿಸ್ತರಿಸಲು ಮತ್ತು ಕೊನೆಯ ಮೈಲಿ ಸಂಪರ್ಕವನ್ನು ಸುಧಾರಿಸಲು ಸಹಾಯ ಮಾಡುತ್ತದೆ. ದೆಹಲಿ ಸಚಿವ ಸಂಪುಟದೊಂದಿಗೆ ಹಂಚಿಕೊಂಡ ಮಾಹಿತಿಯ ಪ್ರಕಾರ, ಸರ್ಕಾರವು ಕಳೆದ ವರ್ಷ 2,800 ಎಲೆಕ್ಟ್ರಿಕ್ ಬಸ್‌ಗಳ ಅಗತ್ಯವನ್ನು ಕನ್ವರ್ಜೆನ್ಸ್ ಎನರ್ಜಿ ಸರ್ವೀಸಸ್ ಸಂಸ್ಥೆಗೆ ಸಲ್ಲಿಸಿತ್ತು. ದೆಹಲಿ ಎಲೆಕ್ಟ್ರಿಕ್ ವೆಹಿಕಲ್ ಇಂಟರ್‌ಕನೆಕ್ಟರ್ ಬಸ್‌ಗಳ ಜತೆ ಕಾರ್ಯಾಚರಣೆಯ ಅನುಭವದ ಆಧಾರದ ಮೇಲೆ, ಅವಶ್ಯಕತೆಯನ್ನು ನಂತರ ಪರಿಷ್ಕರಿಸಲಾಯಿತು ಮತ್ತು ಸಮಾನ ಸಂಖ್ಯೆಯ 12 ಮೀ. ಮತ್ತು 9ಮೀ. ಬಸ್‌ಗಳ ಖರೀದಿಗೆ ನಿರ್ಧರಿಸಲಾಯಿತು ಎಂದರು.

ಸಿಇಎಸ್ಎಲ್ ಎಲ್ಲಾ 2,800 ಬಸ್‌ಗಳ ಸೇರ್ಪಡೆಗಾಗಿ ರಾಷ್ಟ್ರವ್ಯಾಪಿ ಸ್ಪರ್ಧಾತ್ಮಕ ಬಿಡ್ಡಿಂಗ್ ಪ್ರಕ್ರಿಯೆಯನ್ನು ಅಳವಡಿಸಿಕೊಂಡಿದೆ, ಇದು ಸ್ಪರ್ಧಾತ್ಮಕ ದರಗಳಲ್ಲಿ ಬಸ್ ಕಾರ್ಯಾಚರಣೆಯನ್ನು ಖಚಿತಪಡಿಸಿಕೊಳ್ಳಲು ಸಹಾಯ ಮಾಡುತ್ತದೆ. ಪಿಎಂ ಇ-ಡ್ರೈವ್ ಯೋಜನೆಯ ಹಂತ-Iರ ಅಡಿಯಲ್ಲಿ, ಈ ಯೋಜನೆಯು ಪ್ರತಿ 12-ಮೀಟರ್ ಎಲೆಕ್ಟ್ರಿಕ್ ಬಸ್‌ಗೆ ಗರಿಷ್ಠ 35 ಲಕ್ಷ ರೂ. ಮತ್ತು ಪ್ರತಿ 9-ಮೀಟರ್ ಎಲೆಕ್ಟ್ರಿಕ್ ಬಸ್‌ಗೆ 25 ಲಕ್ಷ ರೂ.ಗಳ ಸರ್ಕಾರಿ ಆರ್ಥಿಕ ಸಹಾಯವನ್ನು ಒದಗಿಸುತ್ತದೆ. ಎಲ್ಲಾ 2,800 ಬಸ್‌ಗಳನ್ನು ಒಟ್ಟು ವೆಚ್ಚದ ಒಪ್ಪಂದ (ಜಿಸಿಸಿ) ಮಾದರಿಯಡಿಯಲ್ಲಿ ದೆಹಲಿಯ ಸಾರ್ವಜನಿಕ ಸಾರಿಗೆ ಪಡೆಯಲ್ಲಿ ಸೇರಿಸಲಾಗುವುದು ಮತ್ತು ಗೊತ್ತುಪಡಿಸಿದ ಸೇವಾ ವ್ಯವಸ್ಥೆಯಡಿಯಲ್ಲಿ ಕಾರ್ಯನಿರ್ವಹಿಸುತ್ತವೆ. ಸಂಪೂರ್ಣ ನೌಕಾಪಡೆಯನ್ನು ದೆಹಲಿ ಸಾರಿಗೆ ನಿಗಮ (ಡಿಟಿಸಿ) ನಿರ್ವಹಿಸುತ್ತದೆ, ಜಿಸಿಸಿ ಮಾದರಿಯಡಿಯಲ್ಲಿ ಬಸ್ ಕಾರ್ಯಾಚರಣೆಗಳು ಮತ್ತು ಸೇವಾ ಒಪ್ಪಂದಗಳನ್ನು 12 ವರ್ಷಗಳ ಅವಧಿಗೆ ನಿಗದಿಪಡಿಸಲಾಗಿದೆ. ಮುಂದಿನ ವರ್ಷ ಏಪ್ರಿಲ್‌ನಿಂದ ಈ ಆಧುನಿಕ ಬಸ್ಗಳನ್ನು ಬಿಡುಗಡೆ ಮಾಡುವ ಗುರಿಯನ್ನು ಸರ್ಕಾರ ಹೊಂದಿದೆ ಎಂದು ಸಿಎಂ ಗುಪ್ತಾ ಹೇಳಿದ್ದಾರೆ. ಆಗಸ್ಟ್ 2028 ರ ವೇಳೆಗೆ ದೆಹಲಿಯ ಸಾರ್ವಜನಿಕ ಸಾರಿಗೆ ವ್ಯವಸ್ಥೆಯಲ್ಲಿ ಇಡೀ ಬಸ್ಗಳನ್ನು ಸಂಯೋಜಿಸುವ ನಿರೀಕ್ಷೆಯಿದೆ. 2,800 ಶೂನ್ಯ-ಹೊರಸೂಸುವಿಕೆ ವಿದ್ಯುತ್ ಬಸ್‌ಗಳನ್ನು ಸೇರಿಸುವುದರಿಂದ 2028-29ರ ವೇಳೆಗೆ ನಗರದ ಸಾರ್ವಜನಿಕ ಬಸ್ ಫ್ಲೀಟ್ ಅನ್ನು 14,000 ಬಸ್‌ಗಳಿಗೆ ವಿಸ್ತರಿಸುವ ತಮ್ಮ ಗುರಿಯನ್ನು ಬಲಪಡಿಸುತ್ತದೆ ಎಂದು ಗುಪ್ತಾ ಹೇಳಿದ್ದಾರೆ.

## ಅಮಿರ್ ಖಾನ್‌ಗೆ ಜೀವ ಬೆದರಿಕೆ; ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್ ಹೆಸರಲ್ಲಿ ಸಂದೇಶ



**ಮುಂಬೈ, ಜು.18:** ಬಾಲಿವುಡ್ ನಟ ಸಲ್ಮಾನ್ ಖಾನ್‌ಗೆ ಹಲವು ಬಾರಿ ಜೀವ ಬೆದರಿಕೆ ಹಾಕಿದ ಬೆನ್ನಲ್ಲೇ ಇದೀಗ ಮತ್ತೊರ್ವ ಖ್ಯಾತ ನಟ ಅಮಿರ್ ಖಾನ್‌ಗೂ ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್ ಹೆಸರಲ್ಲಿ ಜೀವ ಬೆದರಿಕೆ ಬಂದಿದೆ.

ಸಾಮಾಜಿಕ ಜಾಲತಾಣದ ಮೂಲಕ ಹರಿದಾಡುತ್ತಿರುವ ಆಡಿಯೋ ಹಾಗೂ ಸಂದೇಶದಲ್ಲಿ ಅಮಿರ್ ಖಾನ್ ಅವರನ್ನು ನೇರವಾಗಿ ಗುರಿಯಾಗಿಸಿ ಬೆದರಿಕೆ ಹಾಕಲಾಗಿದೆ.

ಸಂದೇಶದಲ್ಲಿ ಅಮಿರ್ ಖಾನ್ ಅವರ ಇತ್ತೀಚಿನ ವೈಯಕ್ತಿಕ ಜೀವನವನ್ನು ಉಲ್ಲೇಖಿಸಲಾಗಿದ್ದು, ಅವರು ಲವ್ ಜಿಹಾದ್‌ಗೆ ಉತ್ತೇಜನ ನೀಡುತ್ತಿದ್ದಾರೆ ಎಂದು ಆರೋಪಿಸಲಾಗಿದೆ. ಇದೇ ಕಾರಣಕ್ಕಾಗಿ ಗಂಭೀರ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಬೆದರಿಕೆ ಹಾಕಲಾಗಿದೆ.

ಬೆದರಿಕೆ ಸಂದೇಶದಲ್ಲಿ ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್ ಹೆಸರನ್ನು ಬಳಸಲಾಗಿದೆ. ಆದರೆ, ಈ ಸಂದೇಶ ನಿಜವಾಗಿಯೂ ಗ್ಯಾಂಗ್‌ನಿಂದಲೇ ಬಂದಿದೆಯೇ ಅಥವಾ ಯಾರಾದರೂ ದುರುದ್ದೇಶದಿಂದ ಆ ಹೆಸರನ್ನು ಬಳಸಿದ್ದಾರೆಯೇ ಎಂಬುದು ಇನ್ನೂ ದೃಢಪಟ್ಟಿಲ್ಲ. ಈ ಹಿನ್ನೆಲೆಯಲ್ಲಿ ಮುಂಬೈ ಪೊಲೀಸರು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ಸಂದೇಶದ ಮೂಲ ಮತ್ತು ಅದರ ಸತ್ಯಾಸತ್ಯತೆ ಪರಿಶೀಲಿಸುತ್ತಿದ್ದಾರೆ.

ಸದ್ಯಕ್ಕೆ ಅಮಿರ್ ಖಾನ್ ಅಥವಾ ಅವರ ಕುಟುಂಬದ ಸದಸ್ಯರು ಹಾಗೂ ತಂಡದಿಂದ ಮುಂಬೈ ಪೊಲೀಸರಿಗೆ ಯಾವುದೇ ಅಧಿಕೃತ ದೂರು ಸಲ್ಲಿಕೆಯಾಗಿಲ್ಲ. ದೂರು ಬಂದ ತಕ್ಷಣ ಅಗತ್ಯ ಕಾನೂನು ಕ್ರಮ ಕೈಗೊಳ್ಳುವುದಾಗಿ ಪೊಲೀಸ್ ಮೂಲಗಳು ತಿಳಿಸಿವೆ. ಅಲ್ಲದೆ, ಬೆದರಿಕೆ ಸಂದೇಶದ ಹಿಂದಿರುವ ವ್ಯಕ್ತಿಗಳು ಅಥವಾ ಸಂಘಟನೆಯ ಬಗ್ಗೆ ತಾಂತ್ರಿಕ ಮಾಹಿತಿ ಸಂಗ್ರಹಿಸುವ ಕಾರ್ಯವೂ ನಡೆಯುತ್ತಿದೆ.

## ದೆಹಲಿ ಏಮ್ಸ್‌ಗೆ ಲಾಲುಪ್ರಸಾದ್ ಯಾದವ್ ದಾಖಲು



**ಪಟನಾ, ಜು.18:** ಆರ್‌ಜೆಡಿ ವರಿಷ್ಠ ಲಾಲು ಪ್ರಸಾದ್ ಯಾದವ್ ಅವರನ್ನು ಹೆಚ್ಚಿನ ವೈದ್ಯಕೀಯ ಚಿಕಿತ್ಸೆಗಾಗಿ ದೆಹಲಿಯ ಏಮ್ಸ್‌ಗೆ ಕರೆದೊಯ್ಯಲಾಗುವುದು ಎಂದು ಅವರ ಹಿರಿಯ ಮಗಳು ಮಿಸಾ ಭಾರ್ತಿ ತಿಳಿಸಿದ್ದಾರೆ. ಶುಕ್ರವಾರ ಸಂಜೆ ರಕ್ತದೊತ್ತಡದಲ್ಲಿ ಏರಿಳಿತ ಕಂಡುಬಂದ ಹಿನ್ನೆಲೆ ಪ್ರಸಾದ್ ಅವರನ್ನು ಪಟನಾದ ಇಂದಿರಾಗಾಂಧಿ ವೈದ್ಯಕೀಯ ವಿಜ್ಞಾನ ಸಂಸ್ಥೆಗೆ ಕರೆತರಲಾಗಿತ್ತು.

ರಕ್ತದೊತ್ತಡದಲ್ಲಿ ಏರಿಳಿತ ಕಂಡುಬಂದ ಹಿನ್ನೆಲೆ ಲಾಲು ಪ್ರಸಾದ್ ಯಾದವ್ ಅವರನ್ನು ಐಜಿಐಎಂಎಸ್ಗೆ ದಾಖಲಿಸಲಾಯಿತು. ವೈದ್ಯರು ವಿವರವಾದ ಪರೀಕ್ಷೆ ನಡೆಸಿ ಅವರ ಸ್ಥಿತಿ ಸ್ಥಿರವಾದ ನಂತರ ಅವರನ್ನು ಡಿಸ್ಚಾರ್ಜ್ ಮಾಡಲಾಗಿದೆ. ಅವರನ್ನು ಹೆಚ್ಚಿನ ವೈದ್ಯಕೀಯ ಚಿಕಿತ್ಸೆಗಾಗಿ ದೆಹಲಿಯ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆಗೆ ಕರೆದೊಯ್ಯಲಾಗುವುದು ಎಂದು ಆರ್‌ಜೆಡಿ ಸಂಸದೆ ಮೀಸಾ ಭಾರತಿ ಮಾಧ್ಯಮಗಳಿಗೆ ತಿಳಿಸಿದ್ದಾರೆ.

ಪ್ರಸಾದ್ ಅವರ ಆರೋಗ್ಯ ಸದ್ಯ ಸ್ಥಿರವಾಗಿದೆ. ದೆಹಲಿಗೆ ಪ್ರಯಾಣಿಸುವ ಮೊದಲು ಮನೆಯಲ್ಲಿಯೇ ವೀಕ್ಷಣೆಯಲ್ಲಿರಲು ವೈದ್ಯರು ಸಲಹೆ ನೀಡಿದ್ದಾರೆ. ದೆಹಲಿಯ ಏಮ್ಸ್‌ನಲ್ಲಿ ಅವರು ನಿಯಮಿತವಾಗಿ ವಿಶೇಷ ಚಿಕಿತ್ಸೆ ಪಡೆಯುತ್ತಾರೆ ಎಂದು ಅವರು ಹೇಳಿದ್ದಾರೆ.

ಇತ್ತೀಚೆಗೆ ಲಾಲು ಪ್ರಸಾದ್ ಅವರು ಕೌಟಿಲ್ಯ ನಗರಕ್ಕೆ ಸ್ಥಳಾಂತರಗೊಂಡಿದ್ದರು.ಈ ಪ್ರದೇಶದಲ್ಲಿ ಗಂಭೀರ ನೈರ್ಮಲ್ಯ ಸಮಸ್ಯೆಗಳಿವೆ. ಆದರೆ, ಈ ವಿಷಯವನ್ನು ಎತ್ತಿದರೆ ಜನರು ಬೇರೆ ರೀತಿಯಲ್ಲಿ ಯೋಚಿಸಬಹುದು. ಕೌಟಿಲ್ಯ ನಗರದಲ್ಲಿ ನೈರ್ಮಲ್ಯ ಒಂದು ದೊಡ್ಡ ಸಮಸ್ಯೆಯಾಗಿದೆ ಎಂದು ಮಿಸಾ ದೂರಿದ್ದಾರೆ.




ಸಿಲಿಗುರಿಯ ಝುಮಾಗಾಚ್ ಗಡಿಯ ಔಟ್‌ಪೋಸ್ಟ್‌ನಲ್ಲಿ ಶನಿವಾರ ನಡೆದ ಬಾರ್ಡರ್ ಗಾರ್ಡಿಂಗ್ ಕಾನ್ಫರೆನ್ಸ್‌ನಲ್ಲಿ ಗೃಹ ಸಚಿವ ಅಮಿತ್‌ಶಾ ಗಡಿಭದ್ರತಾ ಪಡೆ ಸಿಬ್ಬಂದಿ ಜತೆ ವಿಚಾರ ವಿನಿಮಯ ನಡೆಸಿದರು.

## ಟಿಎಂಸಿ ಸಂಸದ ಅಭಿಷೇಕ್ ಬ್ಯಾನರ್ಜಿ ಕಚೇರಿ ಧ್ವಂಸ

ಕೊಲ್ಕತ್ತ, ಜು.18: ದಕ್ಷಿಣ 24 ಪರಗಣದ ಅಮ್ತಾಲಾದಲ್ಲಿರುವ ಟಿಎಂಸಿ ಸಂಸದ ಅಭಿಷೇಕ್ ಬ್ಯಾನರ್ಜಿ ಅವರ ಕಚೇರಿಯನ್ನು ಬುಲ್ಡೋಜರ್‌ಗಳಿಂದ ಧ್ವಂಸ ಮಾಡಲಾಗಿದೆ. ಹೆಚ್ಚಿನ ಸಂಖ್ಯೆಯ ಪೊಲೀಸರು ಮತ್ತು ಅರೆಸೈನಿಕ ಪಡೆಗಳ ಸಮ್ಮುಖದಲ್ಲಿ ಅಕ್ರಮ ಕಟ್ಟಡವನ್ನು ಕೆಡವಲಾಯಿತು. ಪದೇಪದೆ ನೋಟಿಸ್ ನೀಡಿದ್ದರೂ, ನಾಲ್ಕು ಅಂತಸ್ತಿನ ಕಚೇರಿಗೆ ಯಾವುದೇ ಮಾನ್ಯ ದಾಖಲೆಗಳನ್ನು ಸಲ್ಲಿಸಲು ಅಭಿಷೇಕ್ ವಿಫಲರಾಗಿದ್ದಾರೆ ಎಂದು ಆಡಳಿತ ಮೂಲಗಳು ತಿಳಿಸಿವೆ. ಕಚೇರಿಯನ್ನು ಮಾನ್ಯ ಕಟ್ಟಡ ಯೋಜನೆ ಅಥವಾ ಎನ್‌ಒಸಿ ಇಲ್ಲದೆ ನಿರ್ಮಿಸಲಾಗಿದೆ ಎಂದು ಆಡಳಿತವು ಹೇಳುತ್ತದೆ. ಜೂ.30 ಮತ್ತು ಜು.7ರಂದು ನೋಟಿಸ್ ಕಳುಹಿಸಲಾಯಿತು. ಅಗತ್ಯ ದಾಖಲೆಗಳನ್ನು ಸಲ್ಲಿಸಲು ಸೂಚನೆ ನೀಡಲಾಯಿತು. ಆದಾಗ್ಯೂ, ಯಾವುದೇ ನೋಟಿಸ್‌ಗಳಿಗೆ ಪ್ರತಿಕ್ರಿಯಿಸಲಾಗಿಲ್ಲ ಅಥವಾ ನಿಗದಿತ ದಿನಾಂಕದಂದು ಯಾರೂ ಹಾಜರಾಗಿಲ್ಲ ಎಂದು ಆರೋಪಿಸಲಾಗಿದೆ. ಇದರ ನಂತರ ಕ್ರಮ ಕೈಗೊಳ್ಳಲಾಗಿದೆ.

## ರಾಜೀನಾಮೆ ನೀಡುವಂತೆ ಧರ್ಮೇಂದ್ರ ಪ್ರಧಾನ್‌ಗೆ ವಿದ್ವಾಂಸರು, ಹೋರಾಟಗಾರರ ಬಹಿರಂಗ ಪತ್ರ

**ನವದೆಹಲಿ, ಜು. 18:** ನೀಟ್-ಯುಜಿ ಸೇರಿದಂತೆ ವಿವಿಧ ರಾಷ್ಟ್ರೀಯ ಪರೀಕ್ಷೆಗಳ ನಿರ್ವಹಣೆಯಲ್ಲಿನ ಸಂಪೂರ್ಣ ವೈಫಲ್ಯದ ನೈತಿಕ ಹೊಣೆಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ತಕ್ಷಣವೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ದೇಶದ ಪ್ರಮುಖ ವಿದ್ವಾಂಸರು, ಲೇಖಕರು ಹಾಗೂ ಹೋರಾಟಗಾರರು ಬಹಿರಂಗ ಪತ್ರವೊಂದನ್ನು ಬರೆದಿದ್ದಾರೆ

ಶಿಕ್ಷಣ ಸಚಿವರಿಗೆ ಬರೆದಿರುವ ಈ ಪತ್ರದಲ್ಲಿ, ಕಳೆದ 20 ದಿನಗಳಿಂದ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ಪ್ರಸಿದ್ಧ ಶಿಕ್ಷಣ ತಜ್ಞ ಮತ್ತು ಪರಿಸರ ಕಾರ್ಯಕರ್ತ ಸೋನಮ್ ವಾಂಗ್ಚುಕ್ ಅವರ ಕಳವಳಕಾರಿ ಆರೋಗ್ಯ ಸ್ಥಿತಿ ಬಗ್ಗೆ ತೀವ್ರ ಆತಂಕ ವ್ಯಕ್ತಪಡಿಸಲಾಗಿದೆ. ಶಿಕ್ಷಣ ಸಚಿವರ ರಾಜೀನಾಮೆಗೆ ಆಗ್ರಹಿಸಿ ನವದೆಹಲಿಯ ಜಂತರ್ ಮಂತರ್‌ನಲ್ಲಿ ಕಾಕ್ರೋಚ್ ಜನತಾ ಪಾರ್ಟಿಕಳೆದ ತಿಂಗಳು ಆರಂಭಿಸಿರುವ ಪ್ರತಿಭಟನೆಯಲ್ಲಿ ವಾಂಗ್ಚುಕ್ ಪಾಲ್ಗೊಂಡಿದ್ದಾರೆ. ಸತತ ಉಪವಾಸದಿಂದಾಗಿ ಅವರು ಈಗಾಗಲೇ ಸುಮಾರು 10 ಕೆ.ಜಿ. ತೂಕ ಕಳೆದುಕೊಂಡಿದ್ದು, ದೇಶಕ್ಕೆ ಅತ್ಯಮೂಲ್ಯವಾಗಿರುವ ಅವರ ಜೀವ ಹಾಗೂ ಅವರೊಂದಿಗೆ ಉಪವಾಸ ಕುಳಿತಿರುವ ಆದರ್ಶವಾದಿ ವಿದ್ಯಾರ್ಥಿಗಳ ಜೀವ ಅಪಾಯದಲ್ಲಿದೆ ಎಂದು ಗಣ್ಯರು ಎಚ್ಚರಿಸಿದ್ದಾರೆ.

ಉಪವಾಸ ನಿರತರಿಗೆ ಏನಾದರೂ ಹೆಚ್ಚುಕಮ್ಮಿಯಾದರೆ, ಭವಿಷ್ಯವು ಅದಕ್ಕೆ ನಿಮ್ಮನ್ನೇ ನೇರ ಹೊಣೆಗಾರರನ್ನಾಗಿ ಮಾಡಲಿದೆ. ಅಮೂಲ್ಯ ಜೀವಗಳನ್ನು ಬಲಿಕೊಟ್ಟು ಅಧಿಕಾರಕ್ಕೆ ಅಂಟಿಕೊಳ್ಳುವ ನಿಮ್ಮ ನಡೆಯನ್ನು ಅತ್ಯಂತ ಅಗೌರವಯುತ ಎಂದು ಪರಿಗಣಿಸಲಾಗುತ್ತದೆ. ಬದಲಾಗಿ, ಸರ್ಕಾರದ ವೈಫಲ್ಯಗಳ ನೈತಿಕ ಹೊಣೆಹೊತ್ತು ನೀವು ರಾಜೀನಾಮೆ ನೀಡುವುದು ಗೌರವಾನ್ವಿತ ನಡೆಯಾಗಲಿದೆ ಎಂದು ಪತ್ರದಲ್ಲಿ ತೀಕ್ಷ್ಣವಾಗಿ ಉಲ್ಲೇಖಿಸಲಾಗಿದೆ.

ಪಕ್ಷ ಮತ್ತು ಸರ್ಕಾರದ ಸೂಚನೆಯಂತೆ ನೀವು ರಾಜೀನಾಮೆ ನೀಡದೆ ಇರಬಹುದು, ಆದರೆ ಅಂತಿಮವಾಗಿ ಯಾವುದೇ ವ್ಯಕ್ತಿ ತನ್ನ ಸ್ವಂತ ಕಾರ್ಯಗಳ ನೈತಿಕ ಹೊಣೆಗಾರಿಕೆಯಿಂದ ನುಣುಚಿಕೊಳ್ಳಲು ಸಾಧ್ಯವಿಲ್ಲ ಎಂದು ಪತ್ರದಲ್ಲಿ ಕಿವಿಮಾತು ಹೇಳಲಾಗಿದೆ.

ಈ ಪತ್ರಕ್ಕೆ ಜವಾಹರಲಾಲ್ ನೆಹರೂ ವಿಶ್ವವಿದ್ಯಾಲಯದ (ಜೆಎನ್ಯು) ಎಮೆರಿಟಸ್ ಪ್ರಾಧ್ಯಾಪಕರಾದ ರೊಮಿಲಾ ಥಾಪರ್, ಪ್ರಭಾತ್ ಪಟ್ನಾಯಕ್, ಉತ್ಸಾ ಪಟ್ನಾಯಕ್, ಜೋಯಾ ಹಸನ್, ನಿವೃತ್ತ ಪ್ರಾಧ್ಯಾಪಕರಾದ ಸುನಂದಾ ಸೇನ್ ಹಾಗೂ ಸಿ.ಪಿ. ಚಂದ್ರಶೇಖರ್ ಸಹಿ ಹಾಕಿದ್ದಾರೆ. ಇವರಲ್ಲದೆ, ದೆಹಲಿ ವಿಶ್ವವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕಿ ನೀರಾ ಚಾಂದೋಕ್ ಹಾಗೂ ಪ್ರಮುಖ ಲೇಖಕರು ಮತ್ತು ಹೋರಾಟಗಾರರಾದ ಜಾನ್ ದಯಾಳ್ ಮತ್ತು ಹರ್ಷ್ ಮಂದರ್ ಅವರು ಕೂಡ ಈ ಬಹಿರಂಗ ಪತ್ರಕ್ಕೆ ಸಹಿ ಮಾಡುವ ಮೂಲಕ ಸಚಿವರ ರಾಜೀನಾಮೆಗೆ ದನಿಗೂಡಿಸಿದ್ದಾರೆ.

# ದೆಹಲಿಯ ಸಫ್ದರ್‌ಜಂಗ್ ಆಸ್ಪತ್ರೆಗೆ ಸೋನಂ ವಾಂಗ್ಚುಕ್ ದಾಖಲು



**ನವದೆಹಲಿ, ಜು.18:** ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ರಾಜೀನಾಮೆಗೆ ಒತ್ತಾಯಿಸಿ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ಸಾಮಾಜಿಕ ಕಾರ್ಯಕರ್ತ ಸೋನಂ ವಾಂಗ್ಚುಕ್ ಅವರನ್ನು ದೆಹಲಿ ಪೊಲೀಸರು ಸಬ್ದರ್ ಜಂಗ್ ಆಸ್ಪತ್ರೆಗೆ ದಾಖಲಿಸಿದ್ದಾರೆ.

- **ಕಾಕ್ರೋಚ್ ಜನತಾ ಪಕ್ಷದ ಸದಸ್ಯರಿಂದ ತಡೆ, ಪೊಲೀಸರೊಂದಿಗೆ ಸಂಘರ್ಷ**
- **ಅಭಿಜಿತ್ ದೀಪ್ಕೆಯಿಂದ ಉಪವಾಸ ಸತ್ಯಾಗ್ರಹ ಆರಂಭ**

ಸೋನಂ ಅವರನ್ನು ಆಸ್ಪತ್ರೆಗೆ ಕರೆದೊಯ್ಯಲು ಪೊಲೀಸರು ಮುಂದಾದಾಗ ಹೈಡ್ರಾಮವೇ ನಡೆಯಿತು. ಕಾಕ್ರೋಚ್ ಜನತಾ ಪಕ್ಷದ ಸದಸ್ಯರು ಅವರನ್ನು ಕಳುಹಿಸಲು ನಿರಾಕರಿಸಿದ ಹಿನ್ನಲೆ ಒಂದು ಹಂತದಲ್ಲಿ ಸಂಘರ್ಷವೂ ಏರ್ಪಟ್ಟಿತು. ವಾಂಗ್ಚುಕ್ ಆಸ್ಪತ್ರೆಗೆ ದಾಖಲಾದ ಬಳಿಕ ಪ್ರತಿಭಟನಾ ಸ್ಥಳದಲ್ಲಿ ಭಾರಿ ಬಂದೋಬಸ್ತ್ ಮಾಡಲಾಗಿದೆ. ಜುಲೈ 20ರಂದು ವಾಂಗ್ಚುಕ್ ಮತ್ತು ಅವರ ಬೆಂಬಲಿಗರು ಸಂಸತ್ ವರೆಗೂ ಮೆರವಣಿಗೆ ನಡೆಸಲು ಯೋಜಿಸಿದ್ದರು.

ಆದರೆ ಅದಕ್ಕೂ ಮುನ್ನಾ ಹೈಕೋರ್ಟ್ ಆದೇಶದ ಪ್ರಕಾರ ಮತ್ತು ಸೋನಮ್ ವಾಂಗ್ಚುಕ್ ಆರೋಗ್ಯ ಸ್ಥಿತಿ ಹದಗೆಟ್ಟ ಕಾರಣ, ಅವರನ್ನು ಅಗತ್ಯ ವೈದ್ಯಕೀಯ ಆರೈಕೆಗಾಗಿ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ ಎಂದು ದೆಹಲಿ ಪೊಲೀಸರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಸಬ್ದರ್ ಜಂಗ್ ಆಸ್ಪತ್ರೆಯಲ್ಲಿ ದಾಖಲಾಗಿರುವ ಸೋನಮ್ ವಾಂಗ್ಚುಕ್ ಅವರ ವೈದ್ಯಕೀಯ ವರದಿಗಳನ್ನು ಆಡಳಿತ ಮತ್ತು ಪೊಲೀಸರು ಹಂಚಿಕೊಳ್ಳುತ್ತಿಲ್ಲ ಮತ್ತು ಸೋನಮ್ ಅವರನ್ನು ಬಂಧಿಸಲಾಗಿರುವ ಕೋಣೆಗೆ ಫೋನ್ ತೆಗೆದುಕೊಂಡು ಹೋಗಲು ಅವಕಾಶ ನೀಡುತ್ತಿಲ್ಲ ಎಂದು ಸೋನಮ್ ವಾಂಗ್ಚುಕ್ ಪತ್ನಿ ಗೀತಾಂಜಲಿ ಆರೋಪಿಸಿದ್ದಾರೆ.

ಮತ್ತೊಂದೆಡೆ ಸೋನಂ ವಾಗ್ಚುಕ್ ಅವರನ್ನು ಸಫ್ದರ್ಜಂಗ್ ಆಸ್ಪತ್ರೆಗೆ ದಾಖಲಿಸಿದ ಬೆನ್ನಲ್ಲೇ, ಹೋರಾಟ ಮುಂದುವರಿಸುವುದಾಗಿ ಸಿಜೆಪಿ ಸಂಸ್ಥಾಪಕ ಅಭಿಜೀತ್ ದೀಪ್ಕೆ ಹೇಳಿದ್ದಾರೆ. ಈ ಮೂಲಕ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ಘೋಷಿಸಿದ್ದಾರೆ. ಈ ಬಗ್ಗೆ ತಮ್ಮ ಎಕ್ಸ್ ಖಾತೆ ಪೋಸ್ಟ್ ನಲ್ಲಿ ಅಭಿಜೀತ್ ತಿಳಿಸಿದ್ದಾರೆ.

ನಾನು ಇಂದಿನಿಂದ ನನ್ನ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹವನ್ನು ಪ್ರಾರಂಭಿಸುತ್ತಿದ್ದೇನೆ. ಯಾರೂ ಹಿಂದೆ ಸರಿಯಬೇಡಿ ಎಂದು ನಾನು ಎಲ್ಲರಿಗೂ ಮನವಿ ಮಾಡುತ್ತೇನೆ. ಈ ಚಳವಳಿ ದೊಡ್ಡದಾಗಿ ಬೆಳೆಯುತ್ತದೆ. ಅವರು ಗಂಭೀರ ತಪ್ಪು ಮಾಡಿದ್ದಾರೆ. ಎಲ್ಲರೂ ಜಂತರ್ ಮಂತರ್‌ಗೆ ಬರಬೇಕೆಂದು ಒತ್ತಾಯಿಸುತ್ತೇನೆ. ಜು.20ರ ಮೆರವಣಿಗೆಯೊಂದಿಗೆ ಮುಂದುವರಿಯುತ್ತೇವೆ ಎಂದು ದೀಪ್ಕೆ ಹೇಳಿದ್ದಾರೆ.

## ಸೋನಮ್ ವಾಂಗ್ಚುಕ್ ಸ್ಥಳಾಂತರಿಸಿದ ಕೇಂದ್ರದ ವಿರುದ್ಧ ರಾಹುಲ್ ಟೀಕೆ



**ನವದೆಹಲಿ, ಜು.18:** ಹವಾಮಾನ ಕಾರ್ಯಕರ್ತ ಸೋನಮ್ ವಾಂಗ್ಚುಕ್ ಅವರನ್ನು ಉಪವಾಸ ಸತ್ಯಾಗ್ರಹದ ಸಮಯದಲ್ಲಿ ಜಂತರ್ ಮಂತರ್‌ನಿಂದ ತೆಗೆದುಹಾಕಿದ್ದಕ್ಕಾಗಿ ಕಾಂಗ್ರೆಸ್ ನಾಯಕ ಮತ್ತು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಶನಿವಾರ ನರೇಂದ್ರ ಮೋದಿ ಸರ್ಕಾರವನ್ನು ಟೀಕಿಸಿದರು. ಕೇಂದ್ರವು ಶಾಂತಿಯುತ ಭಿನ್ನಾಭಿಪ್ರಾಯವನ್ನು ನಿಗ್ರಹಿಸುತ್ತಿದೆ ಮತ್ತು ವಿದ್ಯಾರ್ಥಿಗಳು ಎದುರಿಸುತ್ತಿರುವ ತುರ್ತು ಸಮಸ್ಯೆಗಳನ್ನು ನಿರ್ಲಕ್ಷಿಸುತ್ತಿದೆ ಎಂದು ಆರೋಪಿಸಿದರು. "ಮೋದಿ ಸರ್ಕಾರದ ಮೂಲ ತತ್ವಗಳು ಅಸತ್ಯ ಮತ್ತು ಹಿಂಸಾ" ಎಂದು ಗಾಂಧಿ ಆರೋಪಿಸಿದರು. ವಾಂಗ್ಚುಕ್ ಅವರ ಬಂಧನವನ್ನು ಉಲ್ಲೇಖಿಸಿ ಗಾಂಧಿಯವರು, "ಸೋನಮ್ ವಾಂಗ್ಚುಕ್ ಜಿ ಅವರು ಅಹಿಂಸಾತ್ಮಕ ಉಪವಾಸ ಸತ್ಯಾಗ್ರಹ ನಡೆಸುತ್ತಿರುವಾಗ ಅವರನ್ನು ಜಂತರ್ ಮಂತರ್‌ನಿಂದ ತೆಗೆದುಹಾಕಿದ್ದು ತಪ್ಪು" ಎಂದು ಹೇಳಿದರು. "ಪತ್ರಿಕೆ ಸೋರಿಕೆ, ಹೆಚ್ಚುತ್ತಿರುವ ಶಿಕ್ಷಣ ವೆಚ್ಚ ಮತ್ತು ವಿದ್ಯಾರ್ಥಿಗಳ ಆತ್ಮಹತ್ಯೆಗಳು ಭಾರತದ ಭವಿಷ್ಯಕ್ಕೆ ನಿರ್ಣಾಯಕ ವಿಷಯಗಳಾಗಿವೆ" ಎಂದು ಗಾಂಧಿ ಹೇಳಿದರು. ಈ ವಿಷಯಗಳ ಮೇಲೆ ಸಾರ್ವಜನಿಕ ಒತ್ತಡ ಮುಂದುವರಿಯುತ್ತದೆ ಎಂದು ಪ್ರತಿಪಾದಿಸಿದ ಅವರು, "ಭಾರತದ ವಿದ್ಯಾರ್ಥಿಗಳು ಮತ್ತು ಅವರನ್ನು ಪ್ರೀತಿಸುವ ಮತ್ತು ನಂಬುವ ನಮ್ಮನ್ನು ಈ ವಿಷಯಗಳನ್ನು ಎತ್ತದಂತೆ ತಡೆಯಲು ಯಾವುದೇ ಶಕ್ತಿಗೆ ಸಾಧ್ಯವಿಲ್ಲ" ಎಂದು ಹೇಳಿದರು.

## ಅಹಮದಾಬಾದ್ ಪಟಾಕಿ ಕಾರ್ಖಾನೆಯಲ್ಲಿ ಸ್ಫೋಟ: ಎಂಟು ಕಾರ್ಮಿಕರ ದುರ್ಮರಣ

ಅಹಮದಾಬಾದ್, ಜು.18: ಗುಜರಾತ್‌ನ ಅಹಮದಾಬಾದ್‌ನ ಪಟಾಕಿ ಕಾರ್ಖಾನೆಯಲ್ಲಿ ಶನಿವಾರ ಭೀಕರ ಸ್ಫೋಟ ಸಂಭವಿಸಿದೆ. ಈ ದುರಂತದಲ್ಲಿ ಕನಿಷ್ಠ 8 ಕಾರ್ಮಿಕರು ಸ್ಥಳದಲ್ಲೇ ದುರ್ಮರಣ ಹೊಂದಿದ್ದು ಹಲವರು ತೀವ್ರವಾಗಿ ಗಾಯಗೊಂಡಿದ್ದಾರೆ.

ಅಹಮದಾಬಾದ್‌ನ ವಸ್ತ್ರಾಲ್ ಪ್ರದೇಶದಲ್ಲಿರುವ ಪರವಾನಗಿಯನ್ನು ಈ ಮೊದಲೇ ರದ್ದುಗೊಳಿಸಲಾಗಿದ್ದರೂ, ಜಮೀನೊಂದರಲ್ಲಿ ಅಕ್ರಮವಾಗಿ ಪಟಾಕಿ ತಯಾರಿಕೆಯನ್ನು ಮುಂದುವರಿಸಲಾಗಿತ್ತು ಎನ್ನಲಾಗಿದೆ. ಈ ವೇಳೆ ದುರ್ಘಟನೆ ಸಂಭವಿಸಿದೆ. ಇನ್ನು ಘಟನೆ ನಡೆದ ಸ್ಥಳಕ್ಕೆ ಹತ್ತಿರದಲ್ಲೇ ಇದ್ದ ರಾಪಿಡ್ ಆಕ್ಷನ್ ಫೋರ್ಸ್ ಕ್ಯಾಂಪ್‌ನ ಸಿಬ್ಬಂದಿ ಮತ್ತು ಅಗ್ನಿಶಾಮಕ ದಳದವರು ತಕ್ಷಣವೇ ಸ್ಥಳಕ್ಕೆ ಧಾವಿಸಿ, ಅವಶೇಷಗಳ ಅಡಿಯಲ್ಲಿ ಸಿಲುಕಿದ್ದವರನ್ನು ರಕ್ಷಿಸಿದ್ದಾರೆ. ಇನ್ನು ಗಾಯಾಳುಗಳನ್ನು ತಕ್ಷಣವೇ ಎಲ್.ಜಿ. ಆಸ್ಪತ್ರೆ ಮತ್ತು ಸಿವಿಲ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ.

ದುರ್ಘಟನೆಗೆ ಪ್ರಧಾನಿ ನರೇಂದ್ರ ಮೋದಿ ದುಃಖ ವ್ಯಕ್ತಪಡಿಸಿದ್ದು, ಮೃತರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ. ಅಲ್ಲದೆ ಪ್ರಧಾನಿ ಪರಿಹಾರ ನಿಧಿಯಿಂದ ಮೃತರ ಕುಟುಂಬಗಳಿಗೆ ತಲಾ 2 ಲಕ್ಷ ಧನಸಹಾಯ ಘೋಷಿಸಲಾಗಿದೆ.

# 10, 20 ರೂ. ಮುಖಬೆಲೆಯ ಪ್ಲಾಸ್ಟಿಕ್ ನೋಟುಗಳ ಚಲಾವಣೆ ಸಾಧ್ಯತೆ: ಆರ್‌ಬಿಐ ಸಿದ್ಧತೆ

**ನವದೆಹಲಿ, ಜು. 18:** ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಮುಂದಿನ ವರ್ಷದಿಂದ ದೇಶದಲ್ಲಿ 10 ಮತ್ತು 20 ರೂ. ಮುಖಬೆಲೆಯ ಪಾಲಿಮರ್ (ಪ್ಲಾಸ್ಟಿಕ್) ಕರೆನ್ಸಿ ನೋಟುಗಳನ್ನು ಪ್ರಾಯೋಗಿಕವಾಗಿ ಚಲಾವಣೆಗೆ ತರುವ ಸಾಧ್ಯತೆಯಿದೆ.

ಈ ಮಹತ್ವಾಕಾಂಕ್ಷಿ ಯೋಜನೆಯ ಮೊದಲ ಹಂತದ ಜಾರಿಗಾಗಿ ಆರ್‌ಬಿಐ ಬಿರುಸಿನ ಸಿದ್ಧತೆ ಆರಂಭಿಸಿದ್ದು, ನೋಟು ಮುದ್ರಣಕ್ಕೆ ಅಗತ್ಯವಾದ ಕಚ್ಚಾವಸ್ತುಗಳ ಪೂರೈಕೆಗಾಗಿ ಜಾಗತಿಕ ಮಟ್ಟದಲ್ಲಿ ಟೆಂಡರ್ ಆಹ್ವಾನಿಸಿದೆ. ಈ ಪ್ರಾಯೋಗಿಕ ಹಂತದ ಯಶಸ್ಸಿನ ಆಧಾರದ ಮೇಲೆ 2027ರ ವೇಳೆಗೆ ಹೊಸ ನೋಟುಗಳು ಸಾರ್ವಜನಿಕ ಬಳಕೆಗೆ ಮುಕ್ತವಾಗುವ ನಿರೀಕ್ಷೆಯಿದೆ.

ಆರ್‌ಬಿಐನ ಅಂಗಸಂಸ್ಥೆಯಾದ ಭಾರತೀಯ ರಿಸರ್ವ್ ಬ್ಯಾಂಕ್ ನೋಟ್ ಮುದ್ರಣ್ ಪ್ರೈವೇಟ್ ಲಿಮಿಟೆಡ್ ಪಾಲಿಮರ್ ಹಾಳೆಗಳ ಪೂರೈಕೆಗಾಗಿ ಜಾಗತಿಕ ಆಸಕ್ತಿ ವ್ಯಕ್ತಪಡಿಸುವಿಕೆ ಪತ್ರ ಆಹ್ವಾನಿಸಿದೆ. 10 ಮತ್ತು 20 ರೂ. ಮುಖಬೆಲೆಯ ನೋಟುಗಳಿಗಾಗಿ ತಲಾ 34,000 ರೀಮ್ಗಳಂತೆ ಒಟ್ಟು 68,000 ರೀಮ್‌ಗಳ ಪಾಲಿಮರ್ ಹಾಳೆಗಳಿಗೆ ಬೇಡಿಕೆ ಇಡಲಾಗಿದೆ. ಕಳ್ಳನೋಟು ಹಾವಳಿ ತಡೆಯಲು ಈ ನೋಟುಗಳಲ್ಲಿ ಪಾರದರ್ಶಕ ವಿಂಡೋ, ಮೆಟಾಲಿಕ್ ಸಂಖ್ಯೆ, ಮ್ಯಾಗ್ನೆಟಿಕ್ ಥ್ರೆಡ್ ಹಾಗೂ ಶ್ಯಾಡೋ ಇಮೇಜ್ನಂತಹ ಅತ್ಯಾಧುನಿಕ ಭದ್ರತಾ ವೈಶಿಷ್ಟ್ಯಗಳನ್ನು ಅಳವಡಿಸಲಾಗುತ್ತದೆ.

ಭದ್ರತಾ ದೃಷ್ಟಿಯಿಂದ ಟೆಂಡರ್ ಪ್ರಕ್ರಿಯೆಯಲ್ಲಿ ಅತ್ಯಂತ ಕಟ್ಟುನಿಟ್ಟಿನ ನಿಯಮಗಳನ್ನು ವಿಧಿಸಲಾಗಿದೆ. ಬಿಡ್ದಾರರ ಕಾರ್ಯಾಚರಣೆಗಳು ಚೀನಾ ಅಥವಾ ಪಾಕಿಸ್ತಾನದಿಂದ ಸಂಪೂರ್ಣ ಪ್ರತ್ಯೇಕವಾಗಿರಬೇಕು. ಆ ದೇಶಗಳಿಂದ ಕಚ್ಚಾ ವಸ್ತುಗಳನ್ನು ಆಮದು ಮಾಡುವಂತಿಲ್ಲ ಹಾಗೂ ಅಲ್ಲಿ ಈ ಹಿಂದೆ ಕೆಲಸ ಮಾಡಿದ ಯಾವುದೇ ಸಿಬ್ಬಂದಿಯನ್ನು ಭಾರತದ ಈ ಯೋಜನೆಗೆ ನಿಯೋಜಿಸುವಂತಿಲ್ಲ. ಬಿಆರ್‌ಬಿಎನ್‌ಎಂಪಿಎಲ್ ಮತ್ತು ಎಸ್‌ಪಿಎಂಸಿಐಎಲ್ ಮುದ್ರಣಾಲಯಗಳಲ್ಲಿ ಮುದ್ರಣಗೊಳ್ಳಲಿರುವ ಈ ಪ್ರಕ್ರಿಯೆಗೆ ಟೆಂಡರ್ ಸಲ್ಲಿಸಲು ಆಗಸ್ಟ್ 18 ಕೊನೆಯ ದಿನವಾಗಿದೆ.

**2027ರ ವೇಳೆಗೆ ಹೊಸ ನೋಟುಗಳು ಸಾರ್ವಜನಿಕ ಬಳಕೆಗೆ ಮುಕ್ತವಾಗುವ ನಿರೀಕ್ಷೆ**




ಭಾರತದೊಂದಿಗೆ ಗಡಿ ಹಂಚಿಕೊಂಡಿರುವ ದೇಶಗಳ ಕಂಪನಿಗಳು ಡಿಪಿಐಐಟಿ ನೋಂದಣಿ ಪಡೆಯುವುದು ಕಡ್ಡಾಯವಾಗಿದೆ. ಕೇಂದ್ರ ಬ್ಯಾಂಕ್‌ಗಳಿಗೆ ಪೂರೈಕೆ ಮಾಡಿದ ಕನಿಷ್ಠ ಮೂರು ವರ್ಷಗಳ ಅನುಭವ ಹೊಂದಿರುವವರು ಮಾತ್ರ ಬಿಡ್ ಮಾಡಲು ಅರ್ಹರಾಗಿದ್ದಾರೆ. ಇದಲ್ಲದೆ, ಈ ನೋಟುಗಳ ಕಚ್ಚಾವಸ್ತು ಪ್ರಾಣಿಗಳ ಕೊಬ್ಬು ಮತ್ತು ಡಿಎನ್‌ಎ ಅಂಶಗಳಿಂದ ಸಂಪೂರ್ಣ ಮುಕ್ತವಾಗಿರುವ ಕುರಿತು ಪ್ರಯೋಗಾಲಯದ ಪ್ರಮಾಣಪತ್ರ ಒದಗಿಸುವುದು ಕಡ್ಡಾಯವಾಗಿದೆ.

ಜೂನ್ನಲ್ಲಿ ನಡೆದ ಹಣಕಾಸು ನೀತಿ ಸಮಿತಿ ಸಭೆಯ ಬಳಿಕ ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಅವರು ಪಾಲಿಮರ್ ನೋಟುಗಳ ಪ್ರಸ್ತಾವನೆ ಕುರಿತು ಸುಳಿವು ನೀಡಿದ್ದರು. 1988ರಲ್ಲಿ ಆಸ್ಟ್ರೇಲಿಯಾದಲ್ಲಿ ಮೊದಲ ಬಾರಿಗೆ ಪರಿಚಯಿಸಲಾದ ಈ ಪಾಲಿಮರ್ ನೋಟುಗಳು ಪ್ರಸ್ತುತ 50ಕ್ಕೂ ಹೆಚ್ಚು ದೇಶಗಳಲ್ಲಿ ಬಳಕೆಯಲ್ಲಿವೆ. ಕಾಗದದ ನೋಟುಗಳಿಗಿಂತ ಇವು ಹೆಚ್ಚು ಕಾಲ ಬಾಳಿಕೆ ಬರುತ್ತವೆ, ದೀರ್ಘಾವಧಿಯಲ್ಲಿ ಮುದ್ರಣ ವೆಚ್ಚವನ್ನು ತಗ್ಗಿಸುತ್ತವೆ ಹಾಗೂ ಪರಿಸರ ಸ್ನೇಹಿಯಾಗಿವೆ ಎಂಬುದು ಇದರ ಪ್ರಮುಖ ಅನುಕೂಲಗಳಾಗಿವೆ.

### ಡಿಎಲ್‌ಎಫ್‌ಗೆ ಟೆಂಡರ್ ನೀಡಿದ ಎಚ್‌ಡಿಕೆ ಪಡೆದ ಕಿಕ್‌ಬ್ಯಾಕ್ ಎಷ್ಟು?

# ಬಿಡದಿ ಟೌನ್‌ಶಿಪ್ ವಿರೋಧಿಸಿ ಬಿಜೆಪಿಯವರಿಂದ ಪ್ರಾಯಶ್ಚಿತ್ತ ಯಾತ್ರೆ: ಶಾಸಕ ಬಾಲಕೃಷ್ಣ ವ್ಯಂಗ್ಯ

**ಬೆಂಗಳೂರು, ಜು.18:** ಬಿಡದಿ ಟೌನ್‌ಶಿಪ್ ಯೋಜನೆ ವಿಚಾರವಾಗಿ ಬಿಜೆಪಿ ನಾಯಕರು ಮಾಡಲು ಹೊರಟಿರುವುದು ಪಾದಯಾತ್ರೆಯಲ್ಲ, ತಾವು ಮಾಡಿರುವ ಪಾಪಕ್ಕೆ ಪ್ರಾಯಶ್ಚಿತ ಯಾತ್ರೆಯಾಗಿದೆ ಎಂದು ಮಾಗಡಿ ಶಾಸಕ ಎಚ್ ಸಿ ಬಾಲಕೃಷ್ಣ ಅವರು ತಿರುಗೇಟು ನೀಡಿದ್ದಾರೆ.

ಬಿಡದಿ ಟೌನ್‌ಶಿಪ್ ವಿಚಾರವಾಗಿ ಮಾಗಡಿ ಕ್ಷೇತ್ರದ ಶಾಸಕರಾದ ಹೆಚ್ ಸಿ ಬಾಲಕೃಷ್ಣ ಅವರು ಕೆಪಿಸಿಸಿ ಕಚೇರಿಯಲ್ಲಿ ಮಾಧ್ಯಮಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದರು. ಕುಣಿಗಲ್ ಕ್ಷೇತ್ರದ ಶಾಸಕರಾದ ಎಚ್ ಡಿ ರಂಗನಾಥ್, ಕೆಪಿಸಿಸಿ ಮಾಧ್ಯಮ ವಿಭಾಗದ ಮುಖ್ಯಸ್ಥ ರಮೇಶ್ ಬಾಬು, ಕೆಪಿಸಿಸಿ ಸಾಮಾಜಿಕ ಜಾಲತಾಣ ವಿಭಾಗದ ಮುಖ್ಯಸ್ಥರಾದ ಐಶ್ವರ್ಯ ಮಹದೇವ್ ಅವರು ಉಪಸ್ಥಿತರಿದ್ದರು.

ಬಿಡದಿ ಟೌನ್‌ಶಿಪ್ ವಿಚಾರವಾಗಿ ಇಂದಿನ ಕರ್ಮಕಾಂಡಕ್ಕೆ ಬಿಜೆಪಿಯವರು ಕೂಡ ಪಾಲುದಾರರು. ಬಿಜೆಪಿ ಅನೇಕ ಮುಖಂಡರು ವೀರಾವೇಷದ ಭಾಷಣ ಮಾಡಿದ್ದಾರೆ. ಪಾದಯಾತ್ರೆ ಮಾಡುವುದಾಗಿ ಹೇಳಿದ್ದಾರೆ. ಅವರು ಮಾಡಿರುವ ಪಾಪಕ್ಕೆ ಈಗ ಮಾಡಬೇಕಾಗಿರುವುದು ಪ್ರಾಯಶ್ಚಿತ ಯಾತ್ರೆ. ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ ಅವರು ನಮ್ಮ ಪಾಪದ ಕೂಸನ್ನು ನೀವು ಯಾಕೆ ಹೊತ್ತುಕೊಂಡು ತಿರುಗುತ್ತಿದ್ದೀರಿ ಎಂದು ಪ್ರಶ್ನಿಸಿದ್ದಾರೆ. ಅವರ ಪಾಪದ ಕೂಸು ವಿಕಲಚೇತನ ಪರಿಸ್ಥಿತಿಯಲ್ಲಿದೆ. ಅದನ್ನು ಮಾಡುವಾಗಲೇ ಕುಮಾರಸ್ವಾಮಿ ಅವರು ಕೈಕಾಲು ಮುರಿದಿದ್ದಾರೆ. ಕುಮಾರಸ್ವಾಮಿ ಅವರ ಪಾಪದ ಕೂಸನ್ನು ಮೊದಲು ಎತ್ತಿಕೊಂಡವರು ಯಡಿಯೂರಪ್ಪ ನವರು. ನಂತರ ಸದಾನಂದ ಗೌಡರು, ಜಗದೀಶ್ ಶೆಟ್ಟರ್ ಹಾಗೂ ಬಸವರಾಜ ಬೊಮ್ಮಾಯಿ ಅವರು ಎತ್ತಿಕೊಂಡರು. ಈಗ ಕಡೆಯದಾಗಿ ಆ ಕೂಸಿಗೆ ಚಿಕಿತ್ಸೆ ನೀಡಲು ನಾವು ಹೊತ್ತುಕೊಂಡಿದ್ದೇವೆ ಎಂದು ಲೇವಡಿ ಮಾಡಿದರು.



ಯಡಿಯೂರಪ್ಪನವರು ನಮ್ಮ ಹಳೆಯ ನಾಯಕರು. ಅವರ ಬಗ್ಗೆ ನನಗೆ ಗೌರವವಿದೆ. ಒಬ್ಬ ನಾಯಕರಾದವರಿಗೆ ತನ್ನ ನಡೆ ನುಡಿ ಒಂದೇ ರೀತಿ ಇರಬೇಕು. ಜನರ ಮುಂದೆ ಮಾತನಾಡುವುದು, ಹಿಂದೆ ಮಾಡುವ ಕೆಲಸ ಬೇರೆ ಬೇರೆಯಾಗಬಾರದು. ಕುಮಾರಸ್ವಾಮಿ ಅವರು ಇದಕ್ಕೆ ನಾನು ಸಹಿ ಹಾಕಿದ್ದೇನಾ ಎಂದು ಕುಮಾರಸ್ವಾಮಿ ಅವರು ಹೇಳಿದ್ದು, ನಾನು ಈ ವಿಚಾರವನ್ನು ಅಧಿವೇಶನದಲ್ಲಿ ಚರ್ಚೆ ಮಾಡುತ್ತೇನೆ. ಅವರು ಎಷ್ಟು ಸಭೆ ನಡೆಸಿದ್ದಾರೆ. ನಮ್ಮ ಅಶೋಕಣ್ಣ ಬನ್ನಿ ಅಧಿವೇಶನಕ್ಕೆ ತೋರಿಸುತ್ತೇವೆ ಎಂದು ಕರೆಯುತ್ತಿದ್ದಾರೆ. ಅವರು ಏನು ತೋರಿಸುತ್ತಾರೋ ಅದಕ್ಕೆಲ್ಲ ನಾವು ಅಧಿವೇಶನದಲ್ಲಿ ಉತ್ತರ ನೀಡುತ್ತೇವೆ ಎಂದು ತಿಳಿಸಿದರು.

**ಡಿಎಲ್‌ಎಫ್‌ಗೆ ಟೆಂಡರ್ ಕೊಟ್ಟ ಕುಮಾರಸ್ವಾಮಿ ಪಡೆದ ಕಿಕ್‌ಬ್ಯಾಕ್ ಎಷ್ಟು?:** ಕುಮಾರಸ್ವಾಮಿ ಅವರು ಬಿಡದಿ ಯೋಜನೆಯನ್ನು ಪಿಪಿಪಿ ಮಾದರಿಯಲ್ಲಿ ಡಿಎಲ್‌ಎಫ್ ನವರಿಗೆ ನೀಡಿದರು. ಇದನ್ನು ನೀಡುವಾಗ ಅವರು ಎಷ್ಟು ಕಿಕ್ ಬ್ಯಾಕ್ ಪಡೆದಿದ್ದರು ಎಂದು ಕುಮಾರಸ್ವಾಮಿ ಅವರೇ ಹೇಳಬೇಕು. ಕುಮಾರಸ್ವಾಮಿ ಅವರು ಈ ಯೋಜನೆ ಮಾಡುವಾಗ ಡಿಸಿಎಂ ಆಗಿದ್ದು ಯಡಿಯೂರಪ್ಪನವರು. ಕನಿಷ್ಠ ಸೌಜನ್ಯಕ್ಕಾದರೂ ಯಡಿಯೂರಪ್ಪನವರನ್ನು ಪಕ್ಕದಲ್ಲಿ ಕೂರಿಸಿಕೊಂಡು ಸಭೆ ಮಾಡಲಿಲ್ಲ. ಶಿವಕುಮಾರ್ ಅವರು ಕಿಕ್ ಬ್ಯಾಕ್ ಪಡೆದು ಕೇಂದ್ರದ ನಾಯಕರಿಗೆ ಕಳುಹಿಸುತಿದ್ದಾರೆ ಎಂದು ಬಿಜೆಪಿ ಹಾಗೂ ಜೆಡಿಎಸ್ ನಾಯಕರು ಅನೇಕ ಬಾರಿ ಆರೋಪಿಸಿದ್ದಾರೆ. ಡಿಎಲ್‌ಎಫ್ ಗೆ ಜಾಗತಿಕ ಟೆಂಡರ್ ನೀಡುವಾಗ ಕುಮಾರಸ್ವಾಮಿ ಅವರು ಎಷ್ಟು ಕಿಕ್ ಬ್ಯಾಕ್ ಪಡೆದಿದ್ದರು ಡಿಎಲ್‌ಎಫ್ ಅವರು ಕೊಟ್ಟ ಹಣವನ್ನು ಹಿಂತಿರುಗಿಸಲು ಸಾಧ್ಯವಿಲ್ಲ. ಆದರೆ ಜಾಗತಿಕ ಮುಗ್ಗಟ್ಟಿನಲ್ಲಿ ಈ ಯೋಜನೆ ಮಾಡುವುದು ಅಸಾಧ್ಯ ಎಂದು ಡಿಎಲ್‌ಎಫ್ ಹಿಂದಕ್ಕೆ ಸರಿದಾಗ ಇವರು 400 ಕೋಟಿ ಹಣ ವಾಪಸ್ ನೀಡಿದಾಗ ಯಡಿಯೂರಪ್ಪನವರು ಎಷ್ಟು ಕಿಕ್‌ಬ್ಯಾಕ್ ಪಡೆದರು? ಅದರಲ್ಲಿ ಅವರ ಕೇಂದ್ರದ ನಾಯಕರಿಗೆ ಎಷ್ಟು ಪಾಲು ನೀಡಿದರು ಎಂದು ಪ್ರಶ್ನಿಸಿದರು.



ಮಾಜಿ ಕೇಂದ್ರ ಸಚಿವ ಹಾಗೂ ನವದೆಹಲಿಯಲ್ಲಿ ತೆಲಂಗಾಣ ಸರ್ಕಾರದ ಸಲಹೆಗಾರ ಸಮುದ್ರಾಲ ವೇಣುಗೋಪಾಲಾಚಾರಿ ಅವರು ಶನಿವಾರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಬೆಂಗಳೂರಿನ ವಿಧಾನಸೌಧದಲ್ಲಿ ಭೇಟಿ ಮಾಡಿ ಮಾತುಕತೆ ನಡೆಸಿದರು.

## ಮತದಾರರ ಗೊಂದಲ ಪರಿಹರಿಸಲು ಸಹಾಯಕೇಂದ್ರ ಸ್ಥಾಪನೆ: ಜಿಲ್ಲಾ ಚುನಾವಣಾಧಿಕಾರಿ ರಮೇಶ್ ಮಾಹಿತಿ

**ಬೆಂಗಳೂರು, ಜು.18:** ರಾಜಧಾನಿ ಹಾಗೂ ಕರ್ನಾಟಕದಲ್ಲಿ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ನಡೆದಿದ್ದು, ಪ್ರಕ್ರಿಯೆಯಲ್ಲಿನ ಗೊಂದಲ ಹಾಗೂ ಸಮಸ್ಯೆಗಳನ್ನು ಪರಿಹರಿಸುವ ಉದ್ದೇಶದಿಂದ ಮತದಾರರ ಸಹಾಯ ಕೇಂದ್ರಗಳನ್ನು ಸ್ಥಾಪಿಸಿಲಾಗಿದೆ. ಇದರ ಸಂಪೂರ್ಣ ವಿವರ ಇಲ್ಲಿದೆ.

ಬೆಂಗಳೂರು ದಕ್ಷಿಣ ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಭಾರತೀಯ ಚುನಾವಣಾ ಆಯೋಗದ ನಿರ್ದೇಶನದಂತೆ ನಡೆಯುತ್ತಿರುವ ವಿಶೇಷ ಸಮಗ್ರ ಪರಿಷ್ಕರಣೆ –2026 ಕಾರ್ಯಕ್ರಮದ ಅಂಗವಾಗಿ, ಮತದಾರರಿಗೆ ಅಗತ್ಯ ಮಾಹಿತಿ, ಮಾರ್ಗದರ್ಶನ ಹಾಗೂ ಸಹಾಯವನ್ನು ಒದಗಿಸುವ ಉದ್ದೇಶದಿಂದ ಅಪರ ಜಿಲ್ಲಾ ಚುನಾವಣಾಧಿಕಾರಿಗಳ (ದಕ್ಷಿಣ) ವ್ಯಾಪ್ತಿಯಲ್ಲಿ ಒಟ್ಟು 98 ಮತದಾರರ ಸಹಾಯ ಕೇಂದ್ರಗಳನ್ನು ಸ್ಥಾಪಿಸಿಲಾಗಿದೆ ಎಂದು ಬೆಂಗಳೂರಿನ ಹೆಚ್ಚುವರಿ ಜಿಲ್ಲಾ ಚುನಾವಣಾಧಿಕಾರಿಗಳಾದ ಕೆ.ಎನ್. ರಮೇಶ್ ತಿಳಿಸಿದ್ದಾರೆ.

ವಿಶೇಷ ಪರಿಷ್ಕರಣೆಯ ಅಂಗವಾಗಿ ಸ್ಥಾಪಿಸಲಾಗಿರುವ ಈ ಮತದಾರರ ಸಹಾಯ ಕೇಂದ್ರಗಳು ಆಯಾ ವ್ಯಾಪ್ತಿಯ ಸಂಬಂಧಿತ ವಾರ್ಡ್ ಕಚೇರಿಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಸಾರ್ವಜನಿಕರು ತಮ್ಮ ವ್ಯಾಪ್ತಿಯ ಕೇಂದ್ರಗಳಿಗೆ ಖುದ್ದಾಗಿ ಭೇಟಿ ನೀಡಿ ಚುನಾವಣೆಗೆ ಸಂಬಂಧಿಸಿದ ಎಲ್ಲಾ ಸೇವೆಗಳನ್ನು ಸುಲಭವಾಗಿ ಪಡೆದುಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಮತದಾರರು ಈ ಸಹಾಯ ಕೇಂದ್ರಗಳಲ್ಲಿ ಪ್ರಮುಖವಾಗಿ 2002ರ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ಗುರುತಿಸಲು ನೆರವು ಪಡೆಯಬಹುದು. ಇದರೊಂದಿಗೆ ಗಣತಿ ನಮೂನೆಯನ್ನು ಸರಿಯಾಗಿ ಭರ್ತಿ ಮಾಡುವ ಕುರಿತು ಸೂಕ್ತ ಮಾರ್ಗದರ್ಶನ, ವಿಶೇಷ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ಮತದಾರರಲ್ಲಿರುವ ಯಾವುದೇ ರೀತಿಯ ಸಂದೇಹಗಳಿಗೆ ಪರಿಹಾರ ಮತ್ತು ಒಟ್ಟಾರೆ ಚುನಾವಣಾ ಪ್ರಕ್ರಿಯೆಯ ಕುರಿತು ಸೂಕ್ತ ಸಲಹೆಯನ್ನು ಇಲ್ಲಿ ನೀಡಲಾಗುತ್ತದೆ ಎಂದು ಮಾಹಿತಿ ನೀಡಿದರು.



ಮತದಾರರ ಪಟ್ಟಿಯ ನಿಖರತೆ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಕ್ಷೇತ್ರವಾರು ಸಹಾಯ ಕೇಂದ್ರಗಳನ್ನು ತೆರೆಯಲಾಗಿದೆ. ಗೋವಿಂದರಾಜನಗರ ಕ್ಷೇತ್ರದಲ್ಲಿ 09, ವಿಜಯನಗರ ಕ್ಷೇತ್ರದಲ್ಲಿ 08, ಬಸವನಗುಡಿ ಕ್ಷೇತ್ರದಲ್ಲಿ 07, ಪದ್ಮನಾಭನಗರ ಕ್ಷೇತ್ರದಲ್ಲಿ 16, ಬಿಟಿಎಂ ಲೇಔಟ್ ಕ್ಷೇತ್ರದಲ್ಲಿ 25, ಜಯನಗರ ಕ್ಷೇತ್ರದಲ್ಲಿ 10 ಹಾಗೂ ಬೊಮ್ಮನಹಳ್ಳಿ ಕ್ಷೇತ್ರದಲ್ಲಿ 23 ಕೇಂದ್ರಗಳು ಸೇರಿದಂತೆ ಒಟ್ಟು 98 ಸಹಾಯ ಕೇಂದ್ರಗಳು ಸಾರ್ವಜನಿಕರ ಸೇವೆಗೆ ಲಭ್ಯವಿವೆ ಎಂದು ವಿವರಿದರು.ಸಾರ್ವಜನಿಕರು ಈ ಮತದಾರರ ಸಹಾಯ ಕೇಂದ್ರಗಳ ಸೌಲಭ್ಯವನ್ನು ಸದುಪಯೋಗ ಪಡಿಸಿಕೊಂಡು, ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು. ಮತದಾರರ ಪಟ್ಟಿಯ ನಿಖರತೆ ಹಾಗೂ ಪಾರದರ್ಶಕತೆಯನ್ನು ಕಾಪಾಡುವಲ್ಲಿ ಸಾರ್ವಜನಿಕರ ಸಹಕಾರ ಅತ್ಯಂತ ಮಹತ್ವದ್ದಾಗಿದ್ದು, ಪ್ರತಿಯೊಬ್ಬ ಅರ್ಹ ಮತದಾರರು ಈ ಅವಕಾಶವನ್ನು ಬಳಸಿಕೊಳ್ಳಬೇಕೆಂದು ಕೋರಿದ್ದಾರೆ. ಬೆಂಗಳೂರಿನ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯು ಚುರುಕು ಪಡೆದುಕೊಂಡಿದೆ.

## ಪ್ರಾಥಮಿಕ, ಪ್ರೌಢಶಾಲೆಗಳ ವಿವಿಧ ವೃಂದದ 15 ಸಾವಿರ ಶಿಕ್ಷಕರ ನೇರ ನೇಮಕಾತಿಗೆ ಸರ್ಕಾರ ಆದೇಶ

**ಬೆಂಗಳೂರು, ಜು.18:** ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಖಾಲಿ ಇರುವ ವಿವಿಧ ವೃಂದದ 15,000 ಶಿಕ್ಷಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕರ್ನಾಟಕ ಸರ್ಕಾರವು ಅಧಿಕೃತ ಆದೇಶ ಹೊರಡಿಸಿದೆ. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಈ ಅನುಮೋದನೆ ನೀಡಲಾಗಿದೆ. ಸರ್ಕಾರದ ಅಧೀನ ಕಾರ್ಯದರ್ಶಿ ಅಧಿಕೃತ ಆದೇಶ ಹೊರಡಿಸಿದ್ದಾರೆ. ಕಲ್ಯಾಣ ಕರ್ನಾಟಕಕ್ಕೆ 6905 ಹಾಗೂ ಇತರ ಜಿಲ್ಲೆಗಳಿಗೆ 8095 ಹುದ್ದೆ ನೇಮಕಕ್ಕೆ ಅಧಿಸೂಚನೆ ಹೊರಡಿಸಲಾಗಿದೆ. ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ದೀರ್ಘಕಾಲದಿಂದ ಖಾಲಿ ಇರುವ ಶಿಕ್ಷಕರ ಹುದ್ದೆಗಳಿಂದಾಗಿ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ತೊಂದರೆಯಾಗುತ್ತಿತ್ತು. ಈ ನೇರ ನೇಮಕಾತಿಯ ಮೂಲಕ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡಲು ಸಹಕಾರಿಯಾಗಲಿದ್ದು, ಶಿಕ್ಷಕ ಆಕಾಂಕ್ಷಿಗಳಿಗೆ ಉತ್ತಮ ಉದ್ಯೋಗಾವಕಾಶ ದೊರೆಯಲಿದೆ. ಶೀಘ್ರದಲ್ಲೇ ಶಾಲಾ ಶಿಕ್ಷಣ ಇಲಾಖೆಯು ಈ ಹುದ್ದೆಗಳ ಭರ್ತಿಗಾಗಿ ಅಧಿಕೃತ ಅಧಿಸೂಚನೆ ಮತ್ತು ಅರ್ಜಿ ಸಲ್ಲಿಸುವ ಪ್ರಕ್ರಿಯೆಯ ವಿವರಗಳನ್ನು ಪ್ರಕಟಿಸಲಿದೆ. ಅಧಿಸೂಚನೆಯಲ್ಲಿರುವ ನಿಯಮಾವಳಿಯಂತೆ ಅಭ್ಯರ್ಥಿಗಳ ಆಯ್ಕೆಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲಾಗುತ್ತದೆ. ಉಳಿದಂತೆ ಸ್ಪರ್ಧಾತ್ಮಕ ಪರೀಕ್ಷೆ, ಶಿಕ್ಷಕರ ಅರ್ಹತಾ ಪರೀಕ್ಷೆ ಮತ್ತು ಶೈಕ್ಷಣಿಕ ಅರ್ಹತೆಯಲ್ಲಿ ಪಡೆದ ಅಂಕಗಳನ್ನು ಪರಿಗಣಿಸಿ ವೇಟೇಜ್ ಆಧಾರದ ಮೇಲೆ ಮೆರಿಟ್ ಪಟ್ಟಿ ಸಿದ್ಧಪಡಿಸಲಾಗುತ್ತದೆ. ಅಭ್ಯರ್ಥಿಗಳಿಗೆ ನಡೆಸಲಾಗುವ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಪ್ರತಿ ಪತ್ರಿಕೆಯಲ್ಲೂ ಕನಿಷ್ಠ ಶೇ. 35 ಅಂಕ ಗಳಿಸುವುದನ್ನು ಕಡ್ಡಾಯ ಗೊಳಿಸಲಾಗಿದ್ದು, ಪರೀಕ್ಷೆಯು ಕನ್ನಡ ಮತ್ತು ಇಂಗ್ಲೀಷ್ ಮಾಧ್ಯಮದಲ್ಲಿ ನಡೆಯಲಿದೆ. ಅಭ್ಯರ್ಥಿಗಳು ಕನಿಷ್ಠ 21 ವರ್ಷ ಪೂರೈಸಿರಬೇಕಿದೆ. ಪರಿಶಿಷ್ಟ ಜಾತಿ/ಪಂಗಡ, ಪ್ರವರ್ಗ–1 ಮತ್ತು ವಿಶೇಷ ಚೇತನರಿಗೆ 43 ವರ್ಷಗಳು, ಪ್ರವರ್ಗ–2ಎ, 2ಬಿ, 3ಎ, 3ಬಿಗೆ 41 ವರ್ಷ ಹಾಗೂ ಸಾಮಾನ್ಯ ಅಭ್ಯರ್ಥಿಗಳಿಗೆ 38 ವರ್ಷಗಳ ಗರಿಷ್ಠ ವಯೋಮಿತಿ ನಿಗದಿ ಮಾಡಲಾಗಿದೆ. ಪರೀಕ್ಷೆಯ ಪ್ರಶ್ನೆ ಪತ್ರಿಕೆಯು ವಸ್ತು ನಿಷ್ಠ ಮತ್ತು ವಿವರಣಾತ್ಮಕ ಮಾದರಿಯ ಪ್ರಶ್ನೆಗಳನ್ನು ಒಳಗೊಂಡಿರಲಿದೆ ಎಂದು ಕರಡು ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

## ವಿದ್ಯಾರ್ಥಿಗಳ ಕನಸುಗಳ ರಕ್ಷಣೆ –ಪಾರದರ್ಶಕ ಪರೀಕ್ಷಾ ವ್ಯವಸ್ಥೆ ಖಾತ್ರಿಪಡಿಸುವುದು ಎಲ್ಲರ ಜವಾಬ್ದಾರಿ: ಬಿ.ಕೆ.ಹರಿಪ್ರಸಾದ್

**ಬೆಂಗಳೂರು, ಜು.18:** ನೀಟ್ ಪ್ರಶ್ನೆಪತ್ರಿಕೆ ಸೋರಿಕೆಯಂತಹ ಘಟನೆಗಳಿಂದ ದೇಶದ ಶಿಕ್ಷಣ ವ್ಯವಸ್ಥೆ ಮೇಲಿನ ನಂಬಿಕೆ ಮತ್ತು ಆತ್ಮವಿಶ್ವಾಸ ಕಳೆದುಕೊಂಡಿರುವ ವಿದ್ಯಾರ್ಥಿಗಳಿಗೆ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಭರವಸೆಯ ಮಾತುಗಳನ್ನಾಡಿದ್ದಾರೆ.

ಕಾಂಗ್ರೆಸ್ ಪಕ್ಷದ ಭಾರತ್ ಜೋಡೋ ಭವನದಲ್ಲಿ ಯುವ ಕಾಂಗ್ರೆಸ್ ಶನಿವಾರ ಆಯೋಜಿಸಿದ್ದ ವಿದ್ಯಾರ್ಥಿ–ಯುವ ಸಂವಾದದಲ್ಲಿ ಮಾತನಾಡಿರುವ ಬಗ್ಗೆ ಎಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿರುವ ಅವರು, ವಿದ್ಯಾರ್ಥಿಗಳ ಆತಂಕ, ಅನಿಶ್ಚಿತತೆ, ನಿರೀಕ್ಷೆಗಳು ಹಾಗೂ ಶಿಕ್ಷಣ ವ್ಯವಸ್ಥೆಯ ಕುರಿತ ಕಳವಳಗಳನ್ನು ಮುಕ್ತವಾಗಿ ಹಂಚಿಕೊಂಡಿದ್ದಾರೆ ತಿಳಿಸಿದ್ದಾರೆ.



ವಿದ್ಯಾರ್ಥಿಗಳ ಕನಸುಗಳನ್ನು ರಕ್ಷಿಸುವುದು ಹಾಗೂ ಪಾರದರ್ಶಕ, ನ್ಯಾಯಸಮ್ಮತ ಪರೀಕ್ಷಾ ವ್ಯವಸ್ಥೆಯನ್ನು ಖಾತ್ರಿಪಡಿಸುವುದು ಎಲ್ಲರ ಜವಾಬ್ದಾರಿಯಾಗಿದೆ. ದೇಶದ ಯುವಜನತೆಯ ಭವಿಷ್ಯಕ್ಕೆ ಧಕ್ಕೆ ತಂದಿರುವ ಕೇಂದ್ರದ ಬಿಜೆಪಿ ಸರ್ಕಾರದ ಅಕ್ರಮಗಳ ವಿರುದ್ಧ ಕಾಂಗ್ರೆಸ್ ಪಕ್ಷ ಸದಾ ದೃಢವಾಗಿ ನಿಲ್ಲಲಿದೆ ಎಂದು ಅವರು ತಿಳಿಸಿದ್ದಾರೆ.

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಶಿಕ್ಷಣ ಕ್ಷೇತ್ರದಲ್ಲಿ ಅಮೂಲಾಗ್ರ ಬದಲಾವಣೆಗಾಗಿ "ಛಾತ್ರೋಂ ಕಿ ಗೂಂಜ್" ಅಭಿಯಾನದ ಮೂಲಕ ವಿದ್ಯಾರ್ಥಿಗಳಿಗೆ ಭರವಸೆ ಮೂಡಿಸುತ್ತಿದ್ದಾರೆ.

ಯಾವುದೇ ಕಾರಣಕ್ಕೂ ವಿದ್ಯಾರ್ಥಿ–ಯುವಜನತೆ ಆತ್ಮವಿಶ್ವಾಸ ಕಳೆದುಕೊಳ್ಳಬಾರದು ಎಂದು ಹರಿಪ್ರಸಾದ್ ಕರೆ ನೀಡಿದ್ದಾರೆ.ಈ ಸಂವಾದದಲ್ಲಿ ರಾಜ್ಯಸಭಾ ಸದಸ್ಯ ಮನ್ಸೂರ್ ಖಾನ್ ಹಾಗೂ ಯುವ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥ್ ಗೌಡ ಉಪಸ್ಥಿತರಿದ್ದರು.

### ಅಧಿಕಾರಿಗಳಿಗೆ ಜಿಬಿಎ ಮುಖ್ಯ ಆಯುಕ್ತ ಎಂ.ಮಹೇಶ್ವರರಾವ್ ಸೂಚನೆ

## ಜಿಬಿಎ ವ್ಯಾಪ್ತಿಯಲ್ಲಿ ಅಗ್ನಿ ಸುರಕ್ಷತಾ ವ್ಯವಸ್ಥೆ ಹೊಂದಿರದ ಕಟ್ಟಡ ಮಾಲೀಕರ ವಿರುದ್ಧ ಪ್ರಕರಣ

**ಬೆಂಗಳೂರು, ಜು.18:** ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಅಪಾಯ ಸಾಧ್ಯತೆಯಿರುವ ಪ್ರದೇಶಗಳಲ್ಲಿ, ಕಡ್ಡಾಯ ಅಗ್ನಿ ಸುರಕ್ಷತಾ ವ್ಯವಸ್ಥೆಗಳನ್ನು ಹೊಂದಿರದ ಕಟ್ಟಡಗಳ ಮಾಲೀಕರ ವಿರುದ್ಧ ಕ್ರಿಮಿನಲ್ ಪ್ರಕರಣಗಳನ್ನು ದಾಖಲಿಸುವಂತೆ ಪ್ರಾಧಿಕಾರದ ಮುಖ್ಯ ಆಯುಕ್ತ ಎಂ ಮಹೇಶ್ವರ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಬಿಎ ಅಡಿಯಲ್ಲಿನ ವಿವಿಧ ಇಲಾಖೆಗಳ ಸಮನ್ವಯ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ನಗರದ ಸೂಕ್ಷ್ಮ ಪ್ರದೇಶಗಳಲ್ಲಿ ಅಗ್ನಿ ಸುರಕ್ಷತಾ ಪರಿಶೀಲನೆಗಳನ್ನು (ಆಡಿಟ್) ನಡೆಸುವಂತೆ ಸೂಚಿಸಿದರು. ಅಗತ್ಯವಿರುವ ಬೆಂಕಿ ಸುರಕ್ಷತಾ ಕ್ರಮಗಳನ್ನು ಕಲ್ಪಿಸಲು ವಿಫಲವಾಗುವ ಕಟ್ಟಡಗಳ ಮಾಲೀಕರ ವಿರುದ್ಧ ಕ್ರಿಮಿನಲ್ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.'ಅಗ್ನಿಶಾಮಕ ತುರ್ತು ಸಂದರ್ಭಗಳಲ್ಲಿ ನೀರಿನ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ದುರ್ಬಲ ಪ್ರದೇಶಗಳಲ್ಲಿ ಹೊಸದಾಗಿ ನಿರ್ಮಿಸಲಾದ ವೈಟ್–ಟಾಪಿಂಗ್ ರಸ್ತೆಗಳಲ್ಲಿ ಅಗ್ನಿಶಾಮಕ ಹೈಡ್ರಂಟ್ ಗಳನ್ನು ಅಳವಡಿಸಿ. ಸ್ಥಾಪಿಸಲಾದ ಹೈಡ್ರಂಟ್‌ಗಳನ್ನು ಪ್ರತಿ ತಿಂಗಳು ಸರಿಯಾಗಿ ನಿರ್ವಹಿಸಬೇಕು ಮತ್ತು ಪರಿಶೀಲಿಸಬೇಕು. ಯಾವುದೇ ದೋಷಗಳನ್ನು ತಕ್ಷಣವೇ ಸರಿಪಡಿಸ ಬೇಕು' ಎಂದರು.



ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕೈಗೊಳ್ಳುವ ಕಾಮಗಾರಿಗಳು ಹಾಗೂ ರಸ್ತೆ ದುರಸ್ತಿ ಕಾರ್ಯಗಳು ಹಲವು ಬಾರಿ ಸಮರ್ಪಕವಾಗಿ ನಡೆಯದಿರುವುದರಿಂದ ಜಿಬಿಎ ಟೀಕೆಗೆ ಗುರಿಯಾಗುತ್ತಿದೆ ಎಂದು ರಾವ್ ಗಮನಸೆಳೆದರು. ಜಲಮಂಡಳಿ ಕಾಮಗಾರಿ ನಡೆ ಯುವ ಸ್ಥಳದಲ್ಲಿಯೂ ಯೋಜನೆಯ ವಿವರಗಳನ್ನು ಒಳಗೊಂಡ ನಾಮಫಲಕ ವನ್ನು ಅಳವಡಿಸಬೇಕು. ರಸ್ತೆ ಅಗೆಯುವ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವುದನ್ನು ಹಾಗೂ ರಸ್ತೆ ದುರಸ್ತಿಯನ್ನು ಉತ್ತಮ ಗುಣಮಟ್ಟದ ಮಾನದಂಡಗಳೊಂದಿಗೆ ಕೈಗೊಳ್ಳುವುದನ್ನು ಅಧಿಕಾರಿಗಳು ಖಚಿತಪಡಿಸಿಕೊಳ್ಳಬೇಕು' ಎಂದರು.

## ಯುಜಿ ನೀಟ್: ಹೊಸದಾಗಿ ಅರ್ಜಿ ಸಲ್ಲಿಸಲು ಜು.24ರವರೆಗೆ ಅವಕಾಶ

ಬೆಂಗಳೂರು, ಜು.18: ವೈದ್ಯಕೀಯ ಕೋರ್ಸ್‌ಗಳ ಪ್ರವೇಶಕ್ಕೆ ನೀಟ್ ಬರೆದು, ಅರ್ಹರಾಗಿರುವ ಹಾಗೂ ಯುಜಿಸಿಇಟಿಗೆ ಇದುವರೆಗೂ ಅರ್ಜಿ ಸಲ್ಲಿಸದೇ ಇರುವ ಅಭ್ಯರ್ಥಿ ಗಳಿಗೆ ಜುಲೈ 24ರವರೆಗೆ ಹೊಸದಾಗಿ ಅರ್ಜಿ ಸಲ್ಲಿಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಲಿಂಕ್ ಬಿಡುಗಡೆ ಮಾಡಿದೆ.

ಯುಜಿ ಸಿಇಟಿಗೆ ಅರ್ಜಿ ಸಲ್ಲಿಸಿ, ನೀಟ್‌ನಲ್ಲಿ ಅರ್ಹರಾಗಿರುವ ಅಭ್ಯರ್ಥಿಗಳಿಗೆ ನೀಟ್ ರೋಲ್ ನಂಬರ್ ಅನ್ನು ಸಿಇಟಿ ಅರ್ಜಿ ಜತೆ ಜೋಡಿಸಲು ಸದ್ಯದಲ್ಲೇ ಲಿಂಕ್ ಬಿಡುಗಡೆ ಮಾಡಲಾಗುವುದು. ಆದರೆ ಇದುವರೆಗೂ ಯಾರು ಅರ್ಜಿಯನ್ನೇ ಸಲ್ಲಿಸಿಲ್ಲವೊ ಅಂತಹವರು ಹೊಸದಾಗಿ ಅರ್ಜಿ ಸಲ್ಲಿಸಬಹುದು ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್. ಪ್ರಸನ್ನ ತಿಳಿಸಿದ್ದಾರೆ.

ವೈದ್ಯಕೀಯ, ದಂತ ವೈದ್ಯಕೀಯ, ಆಯುರ್ವೇದ, ಯುನಾನಿ ಮತ್ತು ಹೋಮಿಯೋಪತಿ ಕೋರ್ಸ್ ಗಳ ಪ್ರವೇಶಕ್ಕೆ ನೀಟ್ ಪರೀಕ್ಷೆಯ ರಾಂಕ್ ಪರಿಗಣಿಸಿ ಸೀಟು ಹಂಚಿಕೆ ಮಾಡಲಾಗುತ್ತದೆ ಎಂದು ಅವರು ವಿವರಿಸಿದ್ದಾರೆ.

ಹೊಸದಾಗಿ ಅರ್ಜಿ ಸಲ್ಲಿಸಿರುವ ಯಾರೆಲ್ಲ ದಾಖಲೆ ಪರಿಶೀಲನೆಗೆ ಬರಬೇಕು ಎನ್ನುವುದರ ಮಾಹಿತಿಯನ್ನು ಸದ್ಯದಲ್ಲಿಯೇ ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗುವುದು ಎಂದು ಅವರು ವಿವರಿಸಿದ್ದಾರೆ.

ಕರ್ನಾಟಕೇತರ ಅಭ್ಯರ್ಥಿಗಳು ಕೂಡ ಕೆಇಎ ಪೋರ್ಟಲ್‌ನಲ್ಲಿ ನೋಂದಣಿ ಮಾಡಿ, ಶುಲ್ಕ ಪಾವತಿಸಬೇಕು. 12ನೇ ತರಗತಿಯ ಅಂಕಗಳನ್ನು ದಾಖಲಿಸಬೇಕು. ಅಂಕಪಟ್ಟಿಯನ್ನು ಅಪ್ ಲೋಡ್ ಮಾಡುವುದಕ್ಕೂ ಅವಕಾಶ ನೀಡಲಾಗಿದೆ. ಇವರು ದಾಖಲೆ ಪರಿಶೀಲನೆಗೆ ಬರುವ ಅಗತ್ಯ ಇರುವುದಿಲ್ಲ ಎಂದು ಅವರು ಹೇಳಿದ್ದಾರೆ.

ಒಸಿಐ, ಪಿಐಓ, ಎನ್‌ಆರ್‌ಐ ಮತ್ತು ವಿದೇಶಿ ಅಭ್ಯರ್ಥಿಗಳು, ಕರ್ನಾಟಕೇತರ ಅಭ್ಯರ್ಥಿಗಳು ಧಾರ್ಮಿಕ ಅಲ್ಪಸಂಖ್ಯಾತ ಅಥವಾ ಎನ್ ಆರ್ ಐ ವಾರ್ಡ್ ಸೀಟುಗಳನ್ನು ಅಥವಾ ಸೇಂಟ್ ಜಾನ್ಸ್ ಮೆಡಿಕಲ್ ಕಾಲೇಜಿನಲ್ಲಿ ನಿರ್ದಿಷ್ಟ ಸೀಟುಗಳನ್ನು ಪಡೆಯಲು ಅರ್ಹರಿದ್ದಲ್ಲಿ ಅಂತಹ ಅಭ್ಯರ್ಥಿಗಳು ಮಾತ್ರ ಸ್ಲಾಟ್ ಬುಕ್ ಮಾಡಿಕೊಂಡು ನಿಗದಿತ ದಿನಾಂಕಗಳಂದು ದಾಖಲೆ ಪರಿಶೀಲನೆಗೆ ಬರಬೇಕು. ದಿನಾಂಕಗಳನ್ನು ನಂತರ ತಿಳಿಸಲಾಗುವುದು ಎಂದು ಅವರು ಹೇಳಿದ್ದಾರೆ.

**ಡಿಸಿಇಟಿ ಮೊದಲ ಸುತ್ತಿನ ಸೀಟು ಹಂಚಿಕೆ ಜು. 21ರಿಂದ ಆರಂಭ**

ಎಂಜಿನಿಯರಿಂಗ್ 3ನೇ ಸೆಮಿಸ್ಟರ್‌ಗೆ ನೇರ ಪ್ರವೇಶ ಕಲ್ಪಿಸುವ ಡಿಸಿಇಟಿ ಮೊದಲ ಸುತ್ತಿನ ಸೀಟು ಹಂಚಿಕೆಯ ವೇಳಾಪಟ್ಟಿ ಪ್ರಕಟಿಸಿದ್ದು, ಜುಲೈ 21ರಿಂದ 24ರವರೆಗೆ ಇಚ್ಛೆ/ಆಯ್ಕೆಗಳನ್ನು ದಾಖಲಿಸಲು ಅವಕಾಶ ನೀಡಲಾಗಿದೆ ಎಂದು ಪ್ರಸನ್ನ ಅವರು ತಿಳಿಸಿದ್ದಾರೆ.

ಜುಲೈ 24ರಂದು ಸಂಜೆ 6 ಗಂಟೆಗೆ ಸೀಟು ಹಂಚಿಕೆಯ ಅಣಕು ಫಲಿತಾಂಶ ಪ್ರಕಟಿಸಲಾಗುತ್ತದೆ. ನಂತರ ಜುಲೈ 27ರವರೆಗೆ ಆಪ್ಷನ್ಸ್ ಬದಲಿಸಲು/ತೆಗೆದುಹಾಕಲು/ಸೇರಿಸಲು ಅವಕಾಶ ಇರುತ್ತದೆ. ನಂತರ ಜುಲೈ 27ರಂದು ಸಂಜೆ 6ಗಂಟೆಗೆ ಸೀಟು ಹಂಚಿಕೆಯ ಅಂತಿಮ ಫಲಿತಾಂಶ ಪ್ರಕಟಿಸಲಾಗುವುದು ಎಂದು ಅವರು ಹೇಳಿದರು.

ಜುಲೈ 28ರಿಂದ 31ರವರೆಗೆ ಚಾಯ್ಸ್ ದಾಖಲಿಸಲು ಅವಕಾಶ ನೀಡಲಾಗಿದೆ. ಚಾಯ್ಸ್–1 ಮತ್ತು ಚಾಯ್ಸ್ –2 ದಾಖಲಿಸಿದವರು ಜುಲೈ 28ರಿಂದ ಆಗಸ್ಟ್ 1ರವರೆಗೆ ಚಲನ್ ಡೌನ್‌ಲೋಡ್ ಮಾಡುವುದು. ಚಾಯ್ಸ್– 1 ದಾಖಲಿಸಿದವರು ಶುಲ್ಕ ಪಾವತಿಸಿ ಆಗಸ್ಟ್ 4ರೊಳಗೆ ಕಾಲೇಜಿಗೆ ವರದಿ ಮಾಡಿಕೊಳ್ಳಬೇಕು ಎಂದು ಅವರು ವಿವರಿಸಿದ್ದಾರೆ.

**ಅರ್ಕಿಟೆಕ್ಚರ್ ಕೋರ್ಸ್ ಪ್ರವೇಶ**

ಡಿಪ್ಲೊಮಾ ಅಭ್ಯರ್ಥಿಗಳು, ಆರ್ಕಿಟೆಕ್ಚರ್ ಕೋರ್ಸ್ ಪ್ರವೇಶಕ್ಕಾಗಿ ನಾಟಾ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಪಟ್ಟಿಯನ್ನು ಜುಲೈ 20ರೊಳಗೆ ಕೆಇಎ ಕಚೇರಿಗೆ ಸಲ್ಲಿಸಲು ಸೂಚಿಸಲಾಗಿದೆ.

ಡಿಸಿಇಟಿ ಅರ್ಜಿ ಪ್ರತಿ, ನಾಟಾ ಅಂಕ ಪಟ್ಟಿ, ಡಿಪ್ಲೊಮಾ ಅಂಕಪಟ್ಟಿ, ಅರ್ಜಿಯಲ್ಲಿ ಕ್ಲೇಮ್ ಮಾಡಿರುವ ಪ್ರಕಾರ ವ್ಯಾಸಂಗ ಪ್ರಮಾಣ ಪತ್ರ ಇತ್ಯಾದಿ ದಾಖಲೆಗಳ ಸಮೇತ ಬಂದು ಕೆಇಎ ಕಚೇರಿಯಲ್ಲಿ ಸಲ್ಲಿಸಬೇಕು ಎಂದು ಪ್ರಸನ್ನ ಅವರು ಸೂಚಿಸಿದ್ದಾರೆ.

## ಶೋಭಾ ಕರಂದ್ಲಾಜೆ ವಿರುದ್ಧದ ಮಾನನಷ್ಟ ಮೊಕದ್ದಮೆ ರದ್ದು

**ಬೆಂಗಳೂರು, ಜು.18:** ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ವಿರುದ್ಧ ಮಾಜಿ ಶಾಸಕಿ ಸೌಮ್ಯಾರೆಡ್ಡಿ ದಾಖಲಿಸಿದ್ದ ಮಾನನಷ್ಟ ಮೊಕದ್ದಮೆಯನ್ನು ಹೈಕೋರ್ಟ್ ರದ್ದುಪಡಿಸಿದೆ.

ತಮ್ಮ ವಿರುದ್ಧ ಸೌಮ್ಯಾರೆಡ್ಡಿ ದಾಖಲಿಸಿರುವ ಮೊಕದ್ದಮೆಯನ್ನು ರದ್ದುಪಡಿಸಬೇಕು ಎಂದು ಕೋರಿ ಶೋಭಾ ಕರಂದ್ಲಾಜೆ ಅವರು ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಈ ಆದೇಶ ನೀಡಿದೆ. ಸಾರ್ವಜನಿಕ ಚರ್ಚೆಯ ಸಂದರ್ಭದಲ್ಲಿ ನೀಡಲಾದ ರಾಜಕೀಯ ಹೇಳಿಕೆಗಳು ವ್ಯಕ್ತಿಯೊಬ್ಬರ ಘನತೆಗೆ ಹಾನಿಯುಂಟು ಮಾಡುವ ನಿರ್ದಿಷ್ಟ ಆರೋಪಗಳನ್ನು ಹೊಂದಿಲ್ಲ ಎಂದಾದರೆ ಅವು ಕ್ರಿಮಿನಲ್ ಹೊಣೆಗಾರಿಕೆಗೆ ಕಾರಣವಾಗುವುದಿಲ್ಲ ಎಂದು ಪೀಠ ಹೇಳಿದೆ.




ಸೌಮ್ಯಾರೆಡ್ಡಿ ಅವರು ದಾಖಲಿಸಿರುವ ಪ್ರಕರಣದಲ್ಲಿ ಮಾನನಷ್ಟ ಅಪರಾಧಕ್ಕೆ ಅಗತ್ಯವಿರುವ ಅಂಶಗಳು ಮೇಲ್ನೋಟಕ್ಕೆ ಕಂಡು ಬಂದಿಲ್ಲ. ಹೀಗಾಗಿ ನ್ಯಾಯಿಕ ಪ್ರಕ್ರಿಯೆ ಮುಂದುವರಿಸುವುದು ಕಾನೂನು ಪ್ರಕ್ರಿಯೆಯ ದುರುಪಯೋಗವಾಗುತ್ತದೆ ಎಂದು ಅಭಿಪ್ರಾಯ ಪಟ್ಟಿರುವ ನ್ಯಾಯಪೀಠ ಈ ಆದೇಶ ನೀಡಿದೆ.

**ಪ್ರಕರಣದ ಹಿನ್ನೆಲೆ:** 2024ರ ಲೋಕಸಭೆ ಚುನಾವಣೆಗೂ ಮುನ್ನ ಮತ್ತು ನಂತರದ ಸಾರ್ವಜನಿಕ ವೇದಿಕೆಗಳಲ್ಲಿ ಶೋಭಾ ಕರಂದ್ಲಾಜೆ ನನ್ನ ವಿರುದ್ಧ ಮಾನಹಾನಿಕರ ಹೇಳಿಕೆಗಳನ್ನು ನೀಡಿದ್ದಾರೆ ಎಂದು ಆರೋಪಿಸಿ ಜಯನಗರದ ಮಾಜಿ ಶಾಸಕಿ ಸೌಮ್ಯಾರೆಡ್ಡಿ ಈ ದೂರು ದಾಖಲಿಸಿದ್ದರು.

## ವೈಟ್‌ಫೀಲ್ಡ್ ಪೊಲೀಸರಿಂದ 150ಕ್ಕೂ ಹೆಚ್ಚು ರೌಡಿಗಳ ಮನೆ ಮೇಲೆ ದಾಳಿ

**ಬೆಂಗಳೂರು, ಜು.18:** ಕಳೆದ ರಾತ್ರಿ ವೈಟ್‌ಫೀಲ್ಡ್ ವಿಭಾಗದ ಪೊಲೀಸರು 150ಕ್ಕೂ ಹೆಚ್ಚು ರೌಡಿಗಳ ಮನೆ ಮೇಲೆ ದಾಳಿ ನಡೆಸಿ ಪರಿಶೀಲಿಸಿ ರೌಡಿಗಳಿಗೆ ಬಾಲ ಬಿಚ್ಚದಂತೆ ಖಡಕ್ ಎಚ್ಚರಿಕೆ ನೀಡಿದ್ದಾರೆ.

140ಕ್ಕೂ ಹೆಚ್ಚು ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನೊಳಗೊಂಡ 28 ತಂಡಗಳು ಏಕಕಾಲದಲ್ಲಿ ಈ ಕಾರ್ಯಾಚರಣೆ ನಡೆಸಿದ್ದಾರೆ. ಬೆಚ್ಚಗೆ ಮಲಗಿದ್ದ ರೌಡಿಗಳನ್ನು ಮನೆಯಿಂದ ಹೊರಗೆ ಕರೆದು ಚಳಿ ಬಿಡಿಸಿದ್ದಾರೆ.

ಪ್ರಸ್ತುತ ಮಾಡುತ್ತಿರುವ ಉದ್ಯೋಗ, ಮೊಬೈಲ್ ಸಂಖ್ಯೆಯನ್ನು ಪಡೆದು ಯಾವುದೇ ಅಪರಾಧ ಚಟುವಟಿಕೆಗಳಲ್ಲಿ ಭಾಗಿಯಾಗದಂತೆ ಎಚ್ಚರಿಕೆ ನೀಡಿದ್ದಾರೆ.ವಾರೆಂಟ್, ವಿಚಾರಣೆ ಇದ್ದರೆ ನ್ಯಾಯಾಲಯಕ್ಕೆ ಹಾಜರಾಗಬೇಕೆಂದು ಸಹ ರೌಡಿಗಳಿಗೆ ಪೊಲೀಸರು ತಿಳಿಸಿದ್ದಾರೆ.

ದಾಳಿ ಸಂದರ್ಭದಲ್ಲಿ ರೌಡಿಗಳು ಬಳಸುತ್ತಿದ್ದ ಕೆಲವು ವಾಹನಗಳಿಗೆ ಸೂಕ್ತ ದಾಖಲೆಗಳು ಇಲ್ಲದ ಕಾರಣ 13 ವಾಹನಗಳನ್ನು ವಶಕ್ಕೆ ಪಡೆದಿದ್ದಾರೆ.ನಗರದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಅಪರಾಧ ಕೃತ್ಯಗಳನ್ನು ತಡೆಯಲು ಹಾಗೂ ರೌಡಿ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಈ ದಾಳಿ ನಡೆಸಲಾಗಿದೆ.ರಾತ್ರಿ 12 ಗಂಟೆಯಿಂದ ಮುಂಜಾನೆ 4 ಗಂಟೆಯವರೆಗೂ ಈ ದಾಳಿ ನಡೆದಿದೆ.

### 21 ಕೋಟಿ ಜಿಎಸ್‌ಟಿ ವಂಚನೆ ಪ್ರಕರಣ ಮುಚ್ಚಿಹಾಕಲು 1 ಕೋಟಿ ರೂ. ಲಂಚ

## ಡಿಜಿಜಿಐ ಹಿರಿಯ ಅಧಿಕಾರಿ ವಿರುದ್ಧ ಸಿಬಿಐನಿಂದ ಭ್ರಷ್ಟಾಚಾರದ ಪ್ರಕರಣ ದಾಖಲು

**ಬೆಂಗಳೂರು, ಜು.18:** ಸುಮಾರು 21 ಕೋಟಿ ರೂ ಮೌಲ್ಯದ ಜಿಎಸ್‌ಟಿ ವಂಚನೆ ಪ್ರಕರಣವನ್ನು ಮುಚ್ಚಿಹಾಕಲು ಮೈಸೂರಿನ ಉದ್ಯಮಿಯೊಬ್ಬರಿಂದ 1 ಕೋಟಿ ರೂ. ಲಂಚ ಪಡೆದ ಡೈರೆಕ್ಟೋರೇಟ್ ಜನರಲ್ ಆಫ್ ಜಿಎಸ್‌ಟಿ ಇಂಟೆಲಿಜೆನ್ಸ್ (ಡಿಜಿಜಿಐ) ಹಿರಿಯ ಅಧಿಕಾರಿಯೊಬ್ಬರ ವಿರುದ್ಧ ಕೇಂದ್ರೀಯ ತನಿಖಾ ದಳ (ಸಿಬಿಐ) ಭ್ರಷ್ಟಾಚಾರದ ಪ್ರಕರಣ ದಾಖಲಿಸಿದೆ.

1 ಕೋಟಿ ರೂ ಲಂಚ ಪಡೆದ ಆರೋಪ ಕೇಳಿ ಬಂದ ತಕ್ಷಣವೇ ಕೇಂದ್ರ ಜಿಎಸ್‌ಟಿ ಘಟಕದ ಸೀನಿಯರ್ ಇಂಟೆಲಿಜೆನ್ಸ್ ಆಫೀಸರ್ ಪ್ರವೀಣ್ ಕುಮಾರ್ ಯಾದವ್ ಅವರನ್ನು ಅಮಾನತುಗೊಳಿಸಲಾಗಿದೆ.

ಅಧಿಕಾರಿ ಯಾದವ್ ಮೈಸೂರಿನ ಗುಜರಿ ಉದ್ಯಮಿ ಮೊಹಮ್ಮದ್ ಕಮ್ರಾನ್ (24) ಎಂಬುವವರಿಂದ 2025ರಲ್ಲಿ 1 ಕೋಟಿ ರೂ. ಲಂಚ ಪಡೆದಿದ್ದರು ಎನ್ನಲಾಗಿದೆ. ಎಫ್‌ಐಆರ್ ಪ್ರಕಾರ, 2025ರ ಸೆಪ್ಟೆಂಬರ್ 10ರಂದು ಉದ್ಯಮಿ ಕಮ್ರಾನ್ ಮನೆಯ ಮೇಲೆ ಜಿಎಸ್‌ಟಿ ಅಧಿಕಾರಿಗಳು ದಾಳಿ ನಡೆಸಿದ್ದರು.

ಈ ವೇಳೆ ಪ್ರವೀಣ್‌ಕುಮಾರ್ ಯಾದವ್ ಪ್ರಕರಣದಿಂದ ಪಾರು ಮಾಡಲು 1 ಕೋಟಿ ರೂ ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಅದೇ ದಿನ ರಾತ್ರಿ 9:30 ರ ಸುಮಾರಿಗೆ ವಾಟ್ಸಾಪ್ ಮೂಲಕ ಲೊಕೇಶನ್ ಕಳುಹಿಸಿ, ಮೈಸೂರಿನ ಪಾರ್ಕ್‌ಲೇನ್ ಹೋಟೆಲ್ ಬಳಿ ಹಣ ತರುವಂತೆ ಸೂಚಿಸಿದ್ದರು. ಕಮ್ರಾನ್ ತನ್ನ ಸ್ನೇಹಿತನೊಂದಿಗೆ ಹೋಗಿ 1 ಕೋಟಿ ರೂ. ನಗದು ಇದ್ದ ಬಾಕ್ಸ್ ಅನ್ನು ಅಧಿಕಾರಿಗೆ ಹಸ್ತಾಂತರಿಸಿದ್ದರು.

ಆದರೆ, ಮರುದಿನವೇ ಪ್ರವೀಣ್ ಯಾದವ್ ಮತ್ತೊಮ್ಮೆ ವಾಟ್ಸಾಪ್ ಕರೆ ಮಾಡಿ, ಕೇಸ್ ಕ್ಲೋಸ್ ಮಾಡಲು ಹೆಚ್ಚುವರಿಯಾಗಿ 4 ಕೋಟಿ ರೂಪಾಯಿಗೆ ಬೇಡಿಕೆ ಇಟ್ಟಿದ್ದರು ಎಂದು ಕಮ್ರಾನ್ ದೂರಿನಲ್ಲಿ ತಿಳಿಸಿದ್ದಾರೆ.

**ಕಳೆದ ವಾರ ಕೇಸ್ ದಾಖಲು:** ಈ ಲಂಚದ ಪ್ರಕರಣದ ಬಗ್ಗೆ ಡಿಜಿಜಿಐ ನಡೆಸಿದ ಆಂತರಿಕ ಪ್ರಾಥಮಿಕ ತನಿಖೆಯಲ್ಲಿ ಪ್ರವೀಣ್ ಯಾದವ್ ಉದ್ಯಮಿ ಜೊತೆ ಸಂಪರ್ಕದಲ್ಲಿದ್ದು, ಹಿರಿಯ ಅಧಿಕಾರಿಗಳಿಗೆ ಮಾಹಿತಿ ಮುಚ್ಚಿಟ್ಟಿರುವುದು ಸಾಬೀತಾಗಿತ್ತು. ಹೀಗಾಗಿ ಅಕ್ಟೋಬರ್ 2025ರಲ್ಲೇ ಸಿಬಿಐಗೆ ದೂರು ನೀಡಲಾಗಿತ್ತು. ಆದರೆ, ಭ್ರಷ್ಟಾಚಾರ ತಡೆ ಕಾಯ್ದೆಯಡಿ ತನಿಖೆ ನಡೆಸಲು ಕರ್ನಾಟಕ ಸರ್ಕಾರ 2026ರ ಮಾರ್ಚ್ 6 ರಂದು ಮತ್ತು ಕೇಂದ್ರ ಸರ್ಕಾರ ಜೂನ್ 8 ರಂದು ಅಧಿಕೃತ ಒಪ್ಪಿಗೆ ನೀಡಿದ ನಂತರ ಕಳೆದ ವಾರ ಸಿಬಿಐ ಈ ಎಫ್‌ಐಆರ್ ದಾಖಲಿಸಿದೆ.

ಮತ್ತೊಂದೆಡೆ, ಸುಳ್ಳು ಇನ್‌ವಾಯ್ಸ್‌ಗಳನ್ನು ಸೃಷ್ಟಿಸಿ 21 ಕೋಟಿ ರೂ. ಜಿಎಸ್‌ಟಿ ವಂಚಿಸಿದ ಆರೋಪದ ಮೇಲೆ 2025 ಸೆಪ್ಟೆಂಬರ್ 16 ರಂದು ಉದ್ಯಮಿ ಕಮ್ರಾನ್‌ನನ್ನು ಬಂಧಿಸಲಾಗಿತ್ತು. ತನ್ನ ಬಂಧನ ಕಾನೂನುಬಾಹಿರ ಎಂದು ಕಮ್ರಾನ್ ಹೈಕೋರ್ಟ್ ಮೆಟ್ಟಿಲೇರಿದ್ದರಾದರೂ, ಈ ವರ್ಷದ ಜುಲೈ 7 ರಂದು ಕರ್ನಾಟಕ ಹೈಕೋರ್ಟ್ ಆತನ ಬಂಧನ ಸರಿ ಎಂದು ಆದೇಶಿಸಿದೆ. ಹೈಕೋರ್ಟ್ ತೀರ್ಪು ಬಂದ ಮರುದಿನವೇ (ಜುಲೈ 8) ಸಿಬಿಐ ಭ್ರಷ್ಟ ಅಧಿಕಾರಿಯ ವಿರುದ್ಧ ಪ್ರಕರಣ ದಾಖಲಿಸಿ ತನಿಖೆ ಚುರುಕುಗೊಳಿಸಿದೆ.



ಮುಂಬರುವ ಮೈಸೂರು ದಸರಾ ಆಚರಣೆಯ ಸಂದರ್ಭದಲ್ಲಿ ಕಂಬಳ (ಸಾಂಪ್ರದಾಯಿಕ ಕೆಸರು–ಹಾಸಿನ ಎಮ್ಮೆ ಓಟ) ಕಾರ್ಯಕ್ರಮವನ್ನು ನಡೆಸುವ ಕರ್ನಾಟಕ ಸರ್ಕಾರದ ಪ್ರಸ್ತಾಪವನ್ನು ವಿರೋಧಿಸಿ 'ಪರಿಸರಕ್ಕಾಗಿ ನಾವು' ಸಾಮೂಹಿಕ ಕಾರ್ಯಕರ್ತರು ಶನಿವಾರ ಮೈಸೂರಿನಲ್ಲಿ ಪ್ರತಿಭಟನೆ ನಡೆಸಿದರು. ಈ ಪ್ರದರ್ಶನವು ಉದ್ದೇಶಿತ ಕಾರ್ಯಕ್ರಮಕ್ಕಾಗಿ ಗೊತ್ತುಪಡಿಸಿದ ಸ್ಥಳವಾದ ಸಾತಗಳ್ಳಿಯಲ್ಲಿರುವ ವಿಟಿಯು ಪ್ರಾದೇಶಿಕ ಕೇಂದ್ರದ ಬಳಿ ನಡೆಯಿತು.

## ಪ್ರಗತಿ ಪರಿಶೀಲನಾ ಸಭೆ: ಬರ ಪರಿಸ್ಥಿತಿ ಸಮರ್ಥವಾಗಿ ಎದುರಿಸಲು ಸಜ್ಜಾಗಲು ಸೂಚನೆ



**ಕಲಬುರಗಿ, ಜು. 18:** ಪ್ರಸಕ್ತ ವರ್ಷದಲ್ಲಿ ಇದೂವರೆಗೆ ಮುಂಗಾರು ಮಳೆ ಕೈಕೊಟ್ಟಿದ್ದರಿಂದ ಮುಂದಿನ ದಿನದಲ್ಲಿ ಬರದ ಛಾಯೆ ಆವರಿಸುವ ಸಾಧ್ಯತೆ ಇದ್ದು, ಅದನ್ನು ಸಮರ್ಥವಾಗಿ ಎದುರಿಸಲು ಅಧಿಕಾರಿಗಳು ಸಜ್ಜಾಗಬೇಕೆಂದು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಯೂ ಆಗಿರುವ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸುಬೋಧ ಯಾದವ ತಿಳಿಸಿದರು.

ಇಂತಹ ಬರ ಪರಿಸ್ಥಿತಿಯಲ್ಲಿ ಜನ ಮತ್ತು ಜಾನುವಾರುಗಳಿಗೆ ಕುಡಿಯುವ ನೀರು ಪೂರೈಕೆ ನಮ್ಮೆಲ್ಲರ ಮೊದಲ ಆದ್ಯತೆಯಾಗಬೇಕು. ಜಾನುವಾರುಗಳಿಗೆ ಸೂಕ್ತ ಪ್ರಮಾಣದಲ್ಲಿ ಮೇವು ದಾಸ್ತಾನು ಮಾಡಿಟ್ಟುಕೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲೆಯಲ್ಲಿ ಬಿದ್ದ ಮಳೆ ಪ್ರಮಾಣವನ್ನು ಮಾಪನ ಮಾಡ ಬೇಕಾದ ರೇನ್‌ಗೇಜ್ ಸ್ಟೇಷನ್ ಕೆಲವೆಡೆ ಕಾರ್ಯನಿರ್ವಹಿಸುತ್ತಿಲ್ಲ ಎಂಬುದನ್ನು ಅರಿತ ಅವರು, ಸಮರ್ಪಕ ಕಾರ್ಯನಿರ್ವಹಣೆ ಇಲ್ಲದೆ ಹೋದಲ್ಲಿ ನಿಖರ ಮಳೆ ಪ್ರಮಾಣ ಸಂಗ್ರಹಣೆ ಕಷ್ಟಸಾಧ್ಯ. ಕೂಡಲೇ ಅವೆಲ್ಲವನ್ನೂ ದುರಸ್ತಿಪಡಿಸಬೇಕೆಂದರು. ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ಅವರು, ಈಗಾಗಲೇ ಕೆ.ಎಸ್.ಎನ್.ಡಿ.ಎಂ.ಸಿ. ಸಂಸ್ಥೆಯಿಂದ ಟೆಂಡರ್ ಕರೆದಿದ್ದು, ದುರಸ್ತಿ ಕಾರ್ಯ ನಡೆದಿದೆ. ಜಿಲ್ಲೆಯ ವಿವಿಧ ಜಲಾಶಯಗಳ ಸ್ಥಿತಿಗತಿ ಅವಲೋಕಿಸಿದ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು, ಮುಂದಿನ ದಿನದಲ್ಲಿ ಮಳೆ ಬಾರದೆ ಹೋದಲ್ಲಿ ಕುಡಿಯುವ ನೀರಿಗೆ ಪರ್ಯಾಯ ವ್ಯವಸ್ಥೆ ಸಹ ಮಾಡಿಟ್ಟುಕೊಳ್ಳಬೇಕು. ಬಾವಿ, ಕೊಳವೆ ಬಾವಿ ಜಲಮೂಲಗಳ ನೆರವಿನಿಂದ ನೀರು ಪೂರೈಕೆ ಮಾಡಬೇಕು. ಕಲಬುರಗಿ ನಗರದಲ್ಲಿ ನಡೆಯುತ್ತಿರುವ 24 ಗಂಟೆ ನಿರಂತರ ಕುಡಯುವ ನೀರು ಯೋಜನೆ ಕಾಮಗಾರಿಗೆ ವೇಗ ಹೆಚ್ಚಿಸ ಬೇಕು ಮತ್ತು ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದ ಕಡೆ ಟ್ಯಾಂಕರ್ ಮೂಲಕ ಪೂರೈಸಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸೂಚನೆ ಕೊಟ್ಟರು.

ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ಮಾತನಾಡಿ ಕಲೆದ ಜೂನ್ 1 ರಿಂದ ಇಲ್ಲಿಯವೆಗೆ ವಾಡಿಕೆಯಂತೆ 168.1 ಮಿಲಿ ಮಿಟರ್ ಮಳೆಯಾಗಬೇಕಿತ್ತು. ಆಗಿದ್ದು ಕೇವಲ 80.8 ಮಿಲಿ ಮೀಟರ್ ಮಾತ್ರ. ಹೀಗಾಗಿ ಮಳೆ ಕೊರತೆಯಿಂದ ಮುಂಗಾರು ಋತುವಿನಲ್ಲಿ ನಿಗದಿತ ಗುರಿ 8,90,633.8 ಹೆಕ್ಟೇರ್ ಪೈಕಿ ಇದೂವರೆಗೆ 2,72,199 ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆಯಾಗಿದೆ. ಜಿಲ್ಲೆಯ ಹಲವು ತಾಲೂಕಿನಲ್ಲಿ ಬಿತ್ತನೆಗೆ ಬೇಕಾದ ಮಳೆ ಇನ್ನು ಬಂದಿಲ್ಲ. ಭತ್ತ, ಉದ್ದು, ತೊಗರಿ, ಹೆಸರು, ಸೋಯಾ ಅವರೆ, ಮೆಕ್ಕೆಜೋಳ, ಸಜ್ಜೆ, ಸೂರ್ಯಕಾಂತಿ ಬೆಳೆಗಳ ಬಿತ್ತನೆಗೆ ಈಗಾಗಲೆ 22,192 ಕ್ವಿಂಟಾಲ್ ವಿತರಿಸಿದೆ. ಉಸ್ತುವಾರಿ ಕಾರ್ಯದರ್ಶಿ ಸುಬೋಧ ಯಾದವ್ ಮಾತನಾಡಿ, ಪ್ರತಿ ವರ್ಷ ಈ ಗ್ರಾಮಗಳಿಗೆ ಬಾಡಿಗೆ ಕೊಳವೆ ಬಾವಿ, ಟ್ಯಾಂಕರ್ ಮೂಲಕ ನೀರು ಪೂರೈಸುವುದು ತಾತ್ಕಾಲಿಕ ವ್ಯವಸ್ಥೆ. ಆದರೆ ಈ ಗ್ರಾಮಗಳಿಗೆ ಬಹುಗ್ರಾಮ ಕುಡಿಯುವ ನೀರು ಯೋಜನೆ ಸೇರಿದಂತೆ ಇನ್ನಿತರ ಯೋಜನೆಗಳ ಮೂಲಕ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು. ಆ ನಿಟ್ಟಿನಲ್ಲಿ ಯೋಜನೆ ರೂಪಿಸಲು ಸಲಹೆ ನೀಡಿದರು.

## ಸೋನಮ್ ವಾಂಗ್‌ಚುಕ್ ಸೇರಿ ಉಪವಾಸ ನಿರತರ ರಕ್ಷಣೆಗೆ ಆಗ್ರಹ

**ಕಲಬುರಗಿ, ಜು. 18:** ಸೋನಮ್ ವಾಂಗ್ಲುಕ್ ಮತ್ತು ಉಪವಾಸ ನಿರತ ವಿದ್ಯಾರ್ಥಿಗಳ ಜೀವಗಳನ್ನು ರಕ್ಷಿಸಲು ಮತ್ತು ಪರೀಕ್ಷಾ ಅಕ್ರಮಗಳಿಗೆ ಹೊಣೆಗಾರಿಕೆಯನ್ನು ಖಚಿತಪಡಿಸಿ ಕೊಳ್ಳಲು ರಾಷ್ಟ್ರಪತಿಗಳು ತಕ್ಷಣ ಮಧ್ಯಸ್ಥಿಕೆ ವಹಿಸಬೇಕು ಎಂದು ಒತ್ತಾಯಿಸಿ ಭಾರತ ಪ್ರಜಾಸತ್ತಾತ್ಮಕ ಯುವ ಜನ ಫೆಡರೇಷನ್ (ಡಿವೈಎಫ್‌ಐ) ಮತ್ತು ಭಾರತ ವಿದ್ಯಾರ್ಥಿ ಫೆಡರೇಷನ್ (ಎಸ್‌ಎಫ್‌ಐ) ನೇತೃತ್ವದಲ್ಲಿ ಯುವ ವಿದ್ಯಾರ್ಥಿಗಳು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನಾ ಪ್ರದರ್ಶನ ಮಾಡಿದರು.

ಪ್ರತಿಭಟನೆಯಲ್ಲಿ ಲವಿತ್ರಾ ವಸ್ತ್ರದ್, ಇಮಾಮಸಾಬ್, ನಾಗರಾಜ್, ಅಜಯ್, ಅಂಕಿತಾ, ಪ್ರೇಮ್, ಅನಿತಾ, ತಾಯಣ್ಣ ಮುಂತಾದವರು ಪಾಲ್ಗೊಂಡಿದ್ದರು. ಪ್ರತಿಭಟನೆಕಾರರು ನಂತರ ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿ, ನವದೆಹಲಿಯ ಜಂತರ್ ಮಂತರ್ ನಲ್ಲಿ ಖ್ಯಾತ ಶಿಕ್ಷಣ ತಜ್ಞ ಹಾಗೂ ಸಮಾಜಮುಖಿ ಚಿಂತನೆಯುಳ್ಳ ಸೋನಮ್ ವಾಂಗ್ಚುಕ್ ಅವರು ಹಲವಾರು ವಿದ್ಯಾರ್ಥಿಗಳು ಮತ್ತು ಯುವಕರೊಂದಿಗೆ ಅನಿರ್ದಿಷ್ಟ ಸತ್ಯಾಗ್ರಹ ಆರಂಭಿಸಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು.

ಹದಿನಾರು ದಿನಗಳಿಗೂ ಹೆಚ್ಚು ಕಾಲ ಮುಂದುವರಿದಿರುವ ಈ ಉಪವಾಸ ಸತ್ಯಾಗ್ರಹವು, ಗಂಭೀರ ಅಕ್ರಮಗಳು, ಪ್ರಶ್ನೆಪತ್ರಿಕೆ ಸೋರಿಕೆ ಆರೋಪಗಳು, ಪರೀಕ್ಷಾ ಆಡಳಿತದ ವೈಫಲ್ಯಗಳು ಹಾಗೂ ಲಕ್ಷಾಂತರ ವಿದ್ಯಾರ್ಥಿಗಳು ಮತ್ತು ಅವರ ಕುಟುಂಬಗಳು ಅನುಭವಿಸಿದ ತೀವ್ರ ಸಂಕಷ್ಟಗಳಿಗೆ ಸಂಬಂಧಿಸಿದಂತೆ ಹೊಣೆಗಾರಿಕೆಯನ್ನು ಆಗ್ರಹಿಸುತ್ತದೆ. ಕೇಂದ್ರ ಶಿಕ್ಷಣ ಸಚಿವರ ರಾಜೀನಾಮ ಸೇರಿದಂತೆ ಉನ್ನತ ಮಟ್ಟದಲ್ಲಿ ಹೊಣೆಗಾರಿಕೆಯನ್ನು



ನಿಗದಿಪಡಿಸಬೇಕು ಹಾಗೂ ಪರೀಕ್ಷಾ ಬಿಕ್ಕಟ್ಟಿನ ನಂತರದ ಪರಿಣಾಮವಾಗಿ ಪ್ರಾಣ ಕಳೆದುಕೊಂಡ ವಿದ್ಯಾರ್ಥಿಗಳ ಕುಟುಂಬಗಳಿಗೆ ಸೂಕ್ತ ಪರಿಹಾರ ಮತ್ತು ಬೆಂಬಲವನ್ನು ಒದಗಿಸಬೇಕು ಎಂದು ಅವರು ಒತ್ತಾಯಿಸಿದರು.

ಸೋನಮ್ ವಾಂಗ್ಚುಕ್, ಉಪವಾಸ ನಿರತ ವಿದ್ಯಾರ್ಥಿಗಳು ಮತ್ತು ಪ್ರತಿಭಟನಾನಿರತ ವಿದ್ಯಾರ್ಥಿ ಸಂಘಟನೆಗಳ ಪ್ರತಿನಿಧಿಗಳೊಂದಿಗೆ ತಕ್ಷಣದ, ನೇರ ಹಾಗೂ ಸದುದ್ದೇಶ ಪೂರ್ವಕ ಸಂವಾದವನ್ನು ಪ್ರಾರಂಭಿಸುವಂತೆ, ಪ್ರತಿಭಟನಾಕಾರರ ಸಮ್ಮತಿ ಮತ್ತು ಘನತೆಯನ್ನು ಸಂಪೂರ್ಣವಾಗಿ ರಕ್ಷಿಸುವ ಮೂಲಕ, ಅವರ ಜೀವಗಳನ್ನು ರಕ್ಷಿಸಲು ಹಾಗೂ ನಿರಂತರ, ಸ್ವತಂತ್ರ ಮತ್ತು ಸೂಕ್ತ ವೈದ್ಯಕೀಯ ಆರೈಕೆಯನ್ನು ಒದಗಿಸಲು ಅಗತ್ಯವಿರುವ ಎಲ್ಲ ಕ್ರಮ ಕೈಗೊಳ್ಳುವಂತೆ, ಪ್ರತಿಭಟನಾಕಾರರು ಮಂಡಿಸಿದ ಪ್ರತಿಯೊಂದು ಪ್ರಮುಖ ಬೇಡಿಕೆಗೂ ಅಧಿಕೃತ, ಸಮರ್ಥನೀಯ ಮತ್ತು ಕಾಲಮಿತಿಯೊಳಗಿನ ಪ್ರತಿಕ್ರಿಯೆಯನ್ನು ನೀಡುವಂತೆ ಅವರು ಆಗ್ರಹಿಸಿದರು.

ಆಪಾದಿತ ಪರೀಕ್ಷಾ ಪತ್ರಿಕೆ ಸೋರಿಕೆ, ಅಕ್ರಮ, ಆಡಳಿತಾತ್ಮಕ ವೈಫಲ್ಯ ಮತ್ತು ಸಂಬಂಧಿತ ನಿರ್ಲಕ್ಷ್ಯದ ಕೃತ್ಯಗಳ ಬಗ್ಗೆ ಸ್ವತಂತ್ರ, ವಿಶ್ವಾಸಾರ್ಹ ಮತ್ತು ಕಾಲಮಿತಿಯ ನ್ಯಾಯಾಂಗ ಅಥವಾ ಅದೇ ರೀತಿಯ ನಿಷ್ಪಕ್ಷಪಾತ ತನಿಖೆ ಕೈಗೊಳ್ಳುವಂತೆ, ವಿಚಾರಣೆಯ ಆಧಾರದ ಮೇಲೆ ವೈಯಕ್ತಿಕ, ಸಾಂಸ್ಥಿಕ ಮತ್ತು ಸಚಿವರ ಜವಾಬ್ದಾರಿಯನ್ನು ನಿಗದಿಪಡಿಸುವುದು ಮತ್ತು ಹೊಣೆಗಾರರಾಗಿರುವ ಎಲ್ಲ ವ್ಯಕ್ತಿಗಳ ವಿರುದ್ಧ, ಅವರ ಹುದ್ದೆ ಅಥವಾ ಸ್ಥಾನವನ್ನು ಲೆಕ್ಕಿಸದೆ ಸೂಕ್ತ ಕ್ರಮ ಕೈಗೊಳ್ಳುವಂತೆ ಅವರು ಒತ್ತಾಯಿಸಿದರು.

ಸಚಿವರ ಜವಾಬ್ದಾರಿ ಮತ್ತು ಪ್ರಜಾಸತ್ತಾತ್ಮಕ ಹೊಣೆಗಾರಿಕೆಯ ತತ್ವಗಳಿಗೆ ಅನುಗುಣವಾಗಿ, ಕೇಂದ್ರ ಶಿಕ್ಷಣ ಸಚಿವರ ರಾಜೀನಾಮೆಯ ಬೇಡಿಕೆಯನ್ನು ಪರಿಗಣಿಸುವಂತೆ, ಪರೀಕ್ಷಾ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ಆತ್ಮಹತ್ಯೆ ಮಾಡಿಕೊಂಡ ಅಥವಾ ಬೇರೆ ರೀತಿಯಲ್ಲಿ ಸರಿಪಡಿಸಲಾಗದ ಹಾನಿಗೆ ಒಳಗಾದ ವಿದ್ಯಾರ್ಥಿಗಳ ಕುಟುಂಬಗಳಿಗೆ ನ್ಯಾಯಯುತ ಪರಿಹಾರ, ಸಮಾಲೋಚನೆ, ಕಾನೂನು ನೆರವು ಮತ್ತು ಇತರ ಅಗತ್ಯ ಬೆಂಬಲವನ್ನು ಒದಗಿಸುವಂತೆ, ಪ್ರಶ್ನೆ ಪತ್ರಿಕೆ ಸೋರಿಕೆ, ಅನಿಯಂತ್ರಿತ ಪರೀಕ್ಷಾ ನಿರ್ಧಾರಗಳು ಮತ್ತು ಕುಂದುಕೊರತೆ ಪರಿಹಾರದಲ್ಲಿನ ವಿಳಂಬಗಳ ವಿರುದ್ಧ ಕಟ್ಟುನಿಟ್ಟಿನ ರಕ್ಷಣೆ ಸೇರಿದಂತೆ ಸಾರ್ವಜನಿಕ ಪರೀಕ್ಷೆಗಳ ಭದ್ರತೆ, ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ಖಚಿತಪಡಿಸಿಕೊಳ್ಳಲು ಸ್ವತಂತ್ರ ರಾಷ್ಟ್ರೀಯ ಕಾರ್ಯವಿಧಾನವನ್ನು ಸ್ಥಾಪಿಸುವಂತೆ ಅವರು ಆಗ್ರಹಿಸಿದರು.

## ಕ್ಷೇತ್ರರ ಜನರ ಹಿತ ಕಾಯುವುದು ಆದ್ಯತೆ: ಮಾಜಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್



**ಬೆಳಗಾವಿ, ಜು.18:** ಗ್ರಾಮೀಣ ಕ್ಷೇತ್ರದ ಮೊದಗಾ ಗ್ರಾಮದ ಮಾರುತಿ ದೇವಸ್ಥಾನಕ್ಕೆ ಸೇರಿದ ಸುಮಾರು 92 ಎಕರೆ 39 ಗುಂಟೆ ಪುಣ್ಯ ಭೂಮಿಯನ್ನು ಕರ್ನಾಟಕ ಹೌಸಿಂಗ್ ಬೋರ್ಡ್ ಸ್ವಾಧೀನಪಡಿಸಿ ಕೊಳ್ಳುವ ಪ್ರಕ್ರಿಯೆಗೆ ಮುಂದಾಗಿರುವ ಹಿನ್ನೆಲೆಯಲ್ಲಿ, ಮಾಜಿ ಸಚಿವೆ ಹಾಗೂ ಬೆಳಗಾವಿ ಗ್ರಾಮೀಣ ಕ್ಷೇತ್ರದ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ನೇತೃತ್ವದ ನಿಯೋಗ ಶನಿವಾರ ಬೆಂಗಳೂರಿನ ಕೆಎಚ್‌ಬಿ ಪ್ರಧಾನ ಕಚೇರಿಗೆ ಭೇಟಿ ನೀಡಿ ಅಧಿಕಾರಿಗಳೊಂದಿಗೆ ಸುದೀರ್ಘ ಸಮಾಲೋಚನೆ ನಡೆಸಿತು.

ಚನ್ನರಾಜ ಹಟ್ಟಿಹೊಳಿ, ಮೃಣಾಲ್ ಹೆಬ್ಬಾಳಕರ್, ದೇವಸ್ಥಾನದ ಆಡಳಿತ ಮಂಡಳಿ ಸದಸ್ಯರು, ಗ್ರಾಮದ ಪಂಚ ಕಮಿಟಿ ಮುಖಂಡರು ಹಾಗೂ ಹಿರಿಯರು ಉಪಸ್ಥಿತರಿದ್ದರು.

ಲಕ್ಷ್ಮೀ ಹೆಬ್ಬಾಳಕರ್ ಅವರು ಶ್ರೀ ಮಾರುತಿ ದೇವಸ್ಥಾನದ ಧಾರ್ಮಿಕ, ಐತಿಹಾಸಿಕ ಮತ್ತು ಸಾಂಸ್ಕೃತಿಕ ಮಹತ್ವವನ್ನು ಅಧಿಕಾರಿಗಳ ಗಮನಕ್ಕೆ ತಂದರು. ದೇವಸ್ಥಾನದ ಜಮೀನಿಗೆ ಸಂಬಂಧಿಸಿದ ಎಲ್ಲಾ ಅಧಿಕೃತ ದಾಖಲೆಗಳನ್ನು ಸಲ್ಲಿಸಿ, ಜನರ ಧಾರ್ಮಿಕ ಭಾವನೆಗಳಿಗೆ ಗೌರವ ನೀಡಿ ಈ ಜಮೀನನ್ನು ಸ್ವಾಧೀನ ಪ್ರಕ್ರಿಯೆಯಿಂದ ತಕ್ಷಣವೇ ಕೈಬಿಡುವಂತೆ ಮನವಿ ಮಾಡಿದರು. ಮನವಿಗೆ ಸ್ಪಂದಿಸಿ, ದೇವಸ್ಥಾನದ ಜಮೀನಿನ ಕುರಿತು ಸಲ್ಲಿಸಲಾದ ದಾಖಲೆಗಳನ್ನು ಪರಿಶೀಲಿಸಿದ ಕೆಎಚ್ಬಿ ಅಧಿಕಾರಿಗಳು ಸ್ವಾಧೀನ ಪ್ರಕ್ರಿಯೆಯನ್ನು ಕೈಬಿಡಲಾಗು ವುದು ಎಂದು ಭರವಸೆ ನೀಡಿದರು.

ಈ ಕುರಿತು ಮಾತನಾಡಿದ ಲಕ್ಷ್ಮೀ ಹೆಬ್ಬಾಳಕರ್, "ಕ್ಷೇತ್ರದ ಜನರ ಹಿತಾಸಕ್ತಿ ಕಾಪಾಡುವುದು ನನ್ನ ಮೊದಲ ಆದ್ಯತೆ. ದೇವರ ಆಸ್ತಿಯನ್ನು ಸಂರಕ್ಷಿಸುವ ಜವಾಬ್ದಾರಿಯೂ ನಮ್ಮೆಲ್ಲರ ಮೇಲಿದೆ. ಕ್ಷೇತ್ರದ ಶಾಸಕಿ ಮಾತ್ರವಲ್ಲ, ಈ ನೆಲದ ಮಗಳಾಗಿ ಜನರ ಧಾರ್ಮಿಕ ನಂಬಿಕೆ ಮತ್ತು ಹಕ್ಕುಗಳ ರಕ್ಷಣೆಗೆ ನಾನು ಸದಾ ಮುಂಚೂಣಿಯಲ್ಲಿರುತ್ತೇನೆ," ಎಂದು ಹೇಳಿದರು.

ಲಕ್ಷ್ಮೀ ಹೆಬ್ಬಾಳಕರ್ ಅವರ ತ್ವರಿತ ಸ್ಪಂದನೆ ಹಾಗೂ ನಿರಂತರ ಪ್ರಯತ್ನದಿಂದ ದೇವಸ್ಥಾನದ ಜಮೀನು ಸ್ವಾಧೀನ ಪ್ರಕ್ರಿಯೆ ಕೈಬಿಡುವ ಭರವಸೆ ದೊರೆತ ಹಿನ್ನೆಲೆಯಲ್ಲಿ, ಮೊದಗಾ ಗ್ರಾಮದ ಗ್ರಾಮಸ್ಥರು, ದೇವಸ್ಥಾನದ ಆಡಳಿತ ಮಂಡಳಿ, ಪಂಚ ಕಮಿಟಿ ಸದಸ್ಯರು ಹಾಗೂ ಹಿರಿಯರು ಅವರಿಗೆ ಕೃತಜ್ಞತೆ ಸಲ್ಲಿಸಿದರು.

## ಶಿಕ್ಷಣದಿಂದಲೇ ಸಮಾಜದ ಸಮಗ್ರ ಪ್ರಗತಿ: ಅಲ್ಲಮಪ್ರಭು ಪಾಟೀಲ್



**ಕಲಬುರಗಿ, ಜು. 18:** ಸಮಾಜದ ಪ್ರಗತಿಗೆ ಶಿಕ್ಷಣ ಅತ್ಯಂತ ಪ್ರಮುಖ ಸಾಧನವಾಗಿದ್ದು, ಎಲ್ಲರೂ ಕಡ್ಡಾಯ ಶಿಕ್ಷಣಕ್ಕೆ ಆದ್ಯತೆ ನೀಡಬೇಕು ಎಂದು ಶಾಸಕ ಅಲ್ಲಮಪ್ರಭು ಪಾಟೀಲ್ ಕರೆ ನೀಡಿದರು.

ನಗರದ ಖಾಸಗಿ ಕಲ್ಯಾಣ ಮಂಟಪದಲ್ಲಿ ಸವಿತಾ ಸಮಾಜ ಸರ್ಕಾರಿ, ಅರೆಸರ್ಕಾರಿ ನೌಕರರ ಸಂಘದಿಂದ ಹಮ್ಮಿಕೊಂಡಿದ್ದ ಎಸ್ಸೆಸ್ಸೆಲ್ಸಿ, ಪಿಯುಸಿ, ಪದವಿ, ಸ್ನಾತಕೋತ್ತರ ಹಾಗೂ ಪಿಎಚ್. ಡಿಯಲ್ಲಿ ಸಾಧನೆ ಮಾಡಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ನೂತನ ಸರ್ಕಾರಿ ಸೇವೆಗೆ ಸೇರ್ಪಡೆಯಾದವರು, ನಿವೃತ್ತ ಸರ್ಕಾರಿ ನೌಕರರಿಗೆ ಸತ್ಕಾರ ಸಮಾರಂಭದಲ್ಲಿ ಮಾತನಾಡಿ, ಪ್ರತಿಭಾವಂತರನ್ನು ಗುರುತಿಸಿ ಗೌರವಿಸುವ ಮೂಲಕ ಮುಂದಿನ ಪೀಳಿಗೆಗೆ ಪ್ರೇರಣೆ ನೀಡುವ ಕಾರ್ಯ ಸಂಘ ನಿರಂತರವಾಗಿ ನಡೆಸುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ವಿಜಯಕುಮಾರ ತೇಗಲತಿಪ್ಪಿ ಕಾರ್ಯಕ್ರಮ ಉದ್ಘಾಟಿಸಿ, ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರದಲ್ಲಿ ಸಾಧನೆ ಮಾಡಿದ ಪ್ರತಿಭೆಗಳನ್ನು ಗುರುತಿಸಿ ಗೌರವಿಸುವುದು ಸಮಾಜದ ಜವಾಬ್ದಾರಿ. ಯುವಕರು ಶಿಕ್ಷಣ ದೊಂದಿಗೆ ಸಾಮಾಜಿಕ ಜವಾಬ್ದಾರಿ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

## ಸಮಾಜದ ಸರ್ವತೋಮುಖ ಅಭಿವೃದ್ಧಿಯಲ್ಲಿ ಸಿಎಸ್‌ಆರ್ ಯೋಜನೆಗಳ ಪಾತ್ರ ಮಹತ್ವದ್ದು: ಸಂಸದ ಕುಮಾರನಾಯಕ್ ಬಣ್ಣನೆ

**ರಾಯಚೂರು, ಜು.18:** ಸಮಾಜದ ಸರ್ವತೋಮುಖ ಅಭಿವೃದ್ಧಿಯಲ್ಲಿ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ (ಸಿಎಸ್‌ಆರ್) ಯೋಜನೆಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಸಂಸದ ಜಿ. ಕುಮಾರ ನಾಯಕ ಹೇಳಿದರು.




ನಗರದ ನವೋದಯ ಶಿಕ್ಷಣ ಸಂಸ್ಥೆಯ ಸಭಾಭವನದಲ್ಲಿ ಶನಿವಾರ ಏರ್ಪಡಿಸಿದ್ದ 'ಇಂಪ್ಯಾಕ್ಟ್ ಸಮ್ಮಿಟ್–2026' ಜಿಲ್ಲಾ ಮಟ್ಟದ ಸಾಂಸ್ಥಿಕ ಸಾಮಾಜಿಕ ಹೊಣೆ ಗಾರಿಕೆ (ಸಿಎಸ್‌ಆರ್) ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ಸರ್ಕಾರದ ಅಭಿವೃದ್ಧಿ ಯೋಜನೆಗಳ ಜೊತೆಗೆ ಖಾಸಗಿ ಸಂಸ್ಥೆಗಳು ತಮ್ಮ ಸಾಮಾಜಿಕ ಹೊಣೆಗಾರಿಕೆ ಯನ್ನು ಸಮರ್ಪಕವಾಗಿ ನಿರ್ವಹಿಸಿದರೆ ಶಿಕ್ಷಣ, ಆರೋಗ್ಯ, ಕುಡಿಯುವ ನೀರು, ಕೌಶಲ್ಯಾಭಿವೃದ್ಧಿ, ಮಹಿಳಾ ಸಬಲೀಕರಣ, ಪರಿಸರ ಸಂರಕ್ಷಣೆ ಹಾಗೂ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿಯಲ್ಲಿ ಗಮನಾರ್ಹ ಬದಲಾವಣೆ ತರಲು ಸಾಧ್ಯವಾಗುತ್ತದೆ' ಎಂದು ಅಭಿಪ್ರಾಯಪಟ್ಟರು.'

ಜಿಲ್ಲೆಯು ಅಭಿವೃದ್ಧಿಗೆ ಅವಕಾಶಗಳು ಇವೆ. ಜಿಲ್ಲೆಯ ಅಗತ್ಯಗಳನ್ನು ಗುರುತಿಸಿ ಸಿಎಸ್‌ಆರ್ ನಿಧಿಯನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವ ಮೂಲಕ ಶಾಶ್ವತ ಅಭಿವೃದ್ಧಿಗೆ ವೇಗ ನೀಡಬೇಕಿದೆ ವಿಶೇಷವಾಗಿ ಹಿಂದುಳಿದ ಪ್ರದೇಶಗಳ ಸರ್ಕಾರಿ ಶಾಲೆಗಳು, ಆಸ್ಪತ್ರೆಗಳು, ಅಂಗನವಾಡಿ ಕೇಂದ್ರಗಳು, ಕೌಶಲ್ಯ ತರಬೇತಿ ಕೇಂದ್ರಗಳು ಹಾಗೂ ಯುವಜನರ ಉದ್ಯೋಗ ಸೃಷ್ಟಿಗೆ ಆದ್ಯತೆ ನೀಡಬೇಕು' ಎಂದು ಹೇಳಿದರು.

ಸರ್ಕಾರಿ ಇಲಾಖೆಗಳು, ಕೈಗಾರಿಕೆಗಳು, ಕಾರ್ಪೊರೇಟ್ ಸಂಸ್ಥೆಗಳು ಹಾಗೂ ಸಾಮಾಜಿಕ ಸಂಘಟನೆಗಳು ಪರಸ್ಪರ ಸಮನ್ವಯ ದೊಂದಿಗೆ ಕಾರ್ಯನಿರ್ವಹಿಸಿದರೆ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಹೊಸದಿಕ್ಕು ಸಿಗಲಿದೆ ಸಮಾಜಮುಖಿ ಕಾರ್ಯಗಳಲ್ಲಿ ಕೈಜೋಡಿಸುವ ಸಂಸ್ಥೆಗಳು ದೇಶದ ಅಭಿವೃದ್ಧಿಗೆ ಮಹತ್ತರ ಕೊಡುಗೆ ನೀಡುತ್ತಿದ್ದು, ಇಂತಹ ಸಮಾವೇಶಗಳು ಅಭಿವೃದ್ಧಿಯ ಹೊಸ ಅವಕಾಶ ಗಳನ್ನು ಸೃಷ್ಟಿಸುವ ವೇದಿಕೆ ಯಾಗಲಿವೆ' ಎಂದು ತಿಳಿಸಿದರು.

ಜಿಲ್ಲೆಯ ಅಭಿವೃದ್ಧಿಗೆ ಕೈ ಜೋಡಿಸಲು ಮುಂದಾಗಿರುವ ವಿವಿಧ ಕೈಗಾರಿಕೆಗಳು, ಕಾರ್ಪೊರೇಟ್ ಸಂಸ್ಥೆಗಳು ಹಾಗೂ ಸಮಾಜಮುಖಿ ಸಂಘಟನೆಗಳ ಕಾರ್ಯವನ್ನು ಸಂಸದರು ಶ್ಲಾಘಿಸಿ, ಜಿಲ್ಲೆಯ ಜನರ ಜೀವನಮಟ್ಟ ಸುಧಾರಣೆಗೆ ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು' ಎಂದರು.

ಮಾನ್ವಿ ಕ್ಷೇತ್ರದ ಶಾಸಕ ಹಂಪಯ್ಯ ನಾಯಕ, ಜಿಲ್ಲಾಧಿಕಾರಿ ಪೂವಿತಾ ಎಸ್, ಜಿಲ್ಲಾ ಪಂಚಾಯಿತಿ ಸಿಇಒ ಈಶ್ವರಕುಮಾರ ಕಾಂದೂ, ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೊಹಾಪಾತ್ರಾ, ನವೋದಯ ಶಿಕ್ಷಣ ಸಂಸ್ಥೆಯ ರಿಜಿಸ್ಟ್ರಾರ್ ಶ್ರೀನಿವಾಸ್, ವಿವಿಧ ಕಾರ್ಪೊರೇಟ್ ಸಂಸ್ಥೆಗಳ ಪ್ರತಿನಿಧಿಗಳು, ಉದ್ಯಮಿಗಳು, ಸಾಮಾಜಿಕ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.

### ಅಗತ್ಯಬಿದ್ದರೆ ಕಾನೂನು ಹೋರಾಟ: ಮಂಡ್ಯ ಜಿಲ್ಲಾ ರೈತ ಹಿತರಕ್ಷಣಾ ಸಮಿತಿ ಎಚ್ಚರಿಕೆ

## ಕೆಆರ್‌ಎಸ್‌ನಿಂದ 6ನೇ ಹಂತದ ಕುಡಿಯುವ ನೀರಿನ ಯೋಜನೆಗೆ ವಿರೋಧ

**ಮಂಡ್ಯ, ಜು.18:** ಕೆಆರ್‌ಎಸ್ ಜಲಾಶಯದಿಂದ ಬೆಂಗಳೂರಿಗೆ ನೀರು ಪೂರೈಸಲು ಕೈಗೊಂಡಿರುವ 6ನೇ ಹಂತದ ಕುಡಿಯುವ ನೀರಿನ ಯೋಜನೆಯನ್ನು ರೈತ ಮುಖಂಡರು ತೀವ್ರವಾಗಿ ವಿರೋಧಿಸಿದರು. ಅಗತ್ಯಬಿದ್ದರೆ ಕಾನೂನು ಹೋರಾಟ ನಡೆಸುವುದಾಗಿಯೂ ಎಚ್ಚರಿಕೆ ನೀಡುವ ಮೂಲಕ ಹಲವು ನಿರ್ಣಯಗಳನ್ನು ಕೈಗೊಂಡರು.

ನಗರದ ಗಾಂಧಿ ಭವನದಲ್ಲಿ ಜಿಲ್ಲಾ ರೈತ ಹಿತರಕ್ಷಣಾ ಸಮಿತಿಯಿಂದ ಶನಿವಾರ ಕರೆದಿದ್ದ 'ಕಾವೇರಿ ದುಂಡುಮೇಜಿನ ಸಭೆ'ಯಲ್ಲಿ ವಿವಿಧ ರೈತಪರ ಸಂಘಟನೆಗಳ ಮುಖಂಡರು ಚರ್ಚೆ ನಡೆಸಿದರು.ಪರಿಸರ ಮಾಲಿನ್ಯ ಮಂಡಳಿ ಮಾಜಿ ಅಧ್ಯಕ್ಷ ಬಿ. ಶಿವಲಿಂಗಯ್ಯ ಮಾತನಾಡಿ, 'ಬೆಂಗಳೂರಿನಿಂದ ಕಾವೇರಿ ಕೊಳ್ಳದ ರೈತರಿಗೆ ಯಾವ ಅನುಕೂಲವಿದೆ.

ಇವರಿಗೆ ರೈತರ ಎದೆ ಮೇಲೆ ಕೆಆರ್‌ಎಸ್ ಅಣೆಕಟ್ಟೆ ನೀರು ತೆಗೆದುಕೊಂಡು ಹೋಗಲು ಬಿಡಬೇಕಾ, ಭೂ ಅಭಿವೃದ್ಧಿಗೆ ಹಾಗೂ ಕುಡಿಯುವ ನೀರಿಗೆ ಬೇರೆ ವ್ಯವಸ್ಥೆಯನ್ನು ಬೆಂಗಳೂರಿನಲ್ಲೇ ಮಾಡಿಕೊಳ್ಳಲಿ' ಎಂದು ಆಕ್ರೋಶ ವ್ಯಕ್ತಪಡಿಸಿದರು

ಕೆಆರ್‌ಎಸ್ ಅಣೆಕಟ್ಟೆ ನೀರು ಇರುವುದು ಪ್ರಮುಖವಾಗಿ ಕೃಷಿ ಚಟುವಟಿಕೆಗೆ. ನಂತರ ಕುಡಿಯುವ ನೀರು, ವಿದ್ಯುತ್ ಉತ್ಪಾದನೆಗೆ. ಆರಂಭದಲ್ಲಿ ನೀರು ಹಂಚಿಕೆಗೆ ಸಂಬಂಧಿಸಿದಂತೆ ತಮಿಳುನಾಡಿನವರ ಜೊತೆ ಹೋರಾಟ ನಡೆಸಬೇಕಿತ್ತು. ಈಗ ಬೆಂಗಳೂರಿನೊಂದಿಗೂ ಹೋರಾಟ ಮಾಡುವ ಪರಿಸ್ಥಿತಿ ಬಂದಿದೆ ಎಂದು ಬೇಸರ ವ್ಯಕ್ತಪಡಿಸಿದರು.



ಕೆಆರ್‌ಎಸ್‌ನಿಂದ 6 ಟಿಎಂಸಿ ನೀರು ತೆಗೆದುಕೊಂಡು ಹೋಗುವ 6ನೇ ಹಂತದ ಕುಡಿಯುವ ನೀರಿನ ಯೋಜನೆಯು ರೈತರಿಗೆ ಮಾರಕ ವಾಗಲಿದೆ. ಕೃಷಿಗೆ ಬಾರಿ ಪೆಟ್ಟು ಬೀಳುವ ಸಂಭವವಿದೆ– ಇಂಡುವಾಳು ಚಂದ್ರಶೇಖರ್, ಜಿಲ್ಲಾ ಘಟಕದ ಅಧ್ಯಕ್ಷ, ರೈತಸಂಘಬಿಡದಿ ಟೌನ್‌ಶಿಪ್ ಯೋಜನೆಯಲ್ಲಿ ಎಐ ತಂತ್ರಜ್ಞಾನಕ್ಕೆ ಕಾವೇರಿ ನೀರು ಬಳಸಲು ರಾಜ್ಯ ಸರ್ಕಾರ ಮುಂದಾದರೆ, ಮಂಡ್ಯ ಜಿಲ್ಲೆಯ ರೈತರ ಬಾಯಿಗೆ ಮಣ್ಣು ಬೀಳುತ್ತದೆ.

–ಸುನಂದಾ ಜಯರಾಂ, ಪ್ರಧಾನ ಕಾರ್ಯದರ್ಶಿ, ಮಂಡ್ಯ ರೈತ ಹಿತರಕ್ಷಣಾ ಸಮಿತಿ

ಕಾವೇರಿ ಸಲಹಾ ಸಮಿತಿಯಿಂದ ಕೆಆರ್‌ಎಸ್ ಅಣೆಕಟ್ಟೆಯಿಂದ ತಮಿಳುನಾಡಿಗೆ ವರ್ಷಕ್ಕೆ 177 ಟಿಎಂಸಿ ನೀರು ಹರಿಸುವಂತೆ ಒಪ್ಪಂದವಾಗಿದೆ. ಕಾವೇರಿ ಕೊಳ್ಳದಿಂದ ಬರುವ ನೀರು 740 ಟಿಎಂಸಿ ಆಗಿದ್ದರೆ, ಇದರಲ್ಲಿ ಅಂದಾಜು ಶೇ 50ರಷ್ಟು ನೀರು ಕೊಡಬೇಕು. ಇಷ್ಟು ನೀರು ಮಳೆ ಬಂದರಷ್ಟೇ ಸಿಗುವುದು ಎಂಬುದನ್ನು ಎಲ್ಲಿಯೂ ಹೇಳಿಲ್ಲ ಏಕೆ' ಎಂದು ಪ್ರಶ್ನಿಸಿದರು.

ಸಭೆಯಲ್ಲಿ ಸಾಹಿತಿ ಜಿ.ಟಿ.ವೀರಪ್ಪ, ಕರುನಾಡು ಸೇವಕರು ಸಂಘಟನೆಯ ಎಂ.ಬಿ. ನಾಗಣ್ಣಗೌಡ, ಜೈ ಕರ್ನಾಟಕ ಪರಿಷತ್ ಎಸ್.ನಾರಾಯಣ್, ಕನ್ನಡಸೇನೆ ಮಂಜುನಾಥ್, ಕರವೇ ಜಯರಾಮು, ಕರುನಾಡು ಸಂಘಟನೆ ರಾಜೂಗೌಡ ಸೀಹಳ್ಳಿ, ಡಿಎಸ್‌ಎಸ್ ಎಂ.ವಿ.ಕೃಷ್ಣ ಎಸ್‌ಡಿಎಂಸಿ ಸಮಿತಿ ಸಂತೋಷ್‌ಗೌಡ, ರೈತ ಸಂಘದ ಮುದ್ದೇಗೌಡ, ಟಿ.ಡಿ. ಬಸವರಾಜು, ಮಹಾಂತಪ್ಪ ಭಾಗವಹಿಸಿದ್ದರು.

**ಪ್ರಮುಖ ನಿರ್ಣಯಗಳು**

ಕೆಆರ್‌ಎಸ್ ಜಲಾಶಯದಿಂದ ಬೆಂಗಳೂರು 6ನೇ ಹಂತ ಹಾಗೂ ಮೈಸೂರಿನ ಹಳೇ ಹುಂಡುವಾಡಿಗೆ ನೀರು ತೆಗೆದುಕೊಂಡು ಹೋಗುವ ಯೋಜನೆ ರೂಪಿಸಿರುವ ಸರ್ಕಾರದ ನಿಲುವನ್ನು ಸಭೆ ವಿರೋಧಿಸುತ್ತದೆ. 6ನೇ ಹಂತದ ಯೋಜನೆ ಮಂಡ್ಯ ಜಿಲ್ಲೆಯ ಕೃಷಿ ಬದುಕಿಗೆ ಮಾರಕ. ಬೆಳೆಯುತ್ತಿರುವ ಬೆಂಗಳೂರು ನಗರಕ್ಕೆ ಪರ್ಯಾಯ ವ್ಯವಸ್ಥೆ ಮೂಲಕ (ಮಳೆ ನೀರು) ನೀರು ಒದಗಿಸುವ ಯೋಜನೆ ರೂಪಿಸಿಕೊಳ್ಳಲು ಒತ್ತಾಯ.

ಮಂಡ್ಯ ಜಿಲ್ಲೆಯ ಚುನಾಯಿತ ಹಾಲಿ ಮತ್ತು ಮಾಜಿ ಜನಪ್ರತಿನಿಧಿಗಳು 6ನೇ ಹಂತದ ನೀರು ತೆಗೆದುಕೊಂಡು ಹೋಗುವ ಯೋಜನೆ ಯನ್ನು ಕೈ ಬಿಡಿಸುವ ಜವಾಬ್ದಾರಿ ತೆಗೆದುಕೊಳ್ಳಬೇಕು. ಸರ್ಕಾರ ಕೂಡಲೇ ಈ ಒತ್ತಾಯಗಳಿಗೆ ಸ್ಪಂದಿಸದಿದ್ದರೆ ಕೆಆರ್‌ಎಸ್ ಬಳಿ ಇರುವ ಕಟ್ಟೇರಿಯಲ್ಲಿ ತೀವ್ರತರ ಹೋರಾಟ ರೂಪಿಸ ಬೇಕಾಗುತ್ತದೆ ಎಂದು ಸರ್ಕಾರಕ್ಕೆ ಎಚ್ಚರಿಕೆ.

### ಸರ್ಕಾರಿ ಜಮೀನು ಒತ್ತುವರಿ ತೆರವುಗೊಳಿಸಿದ ಕಂದಾಯ ಅಧಿಕಾರಿಗಳು

## ಇಲಾಖೆಯ ದಿಟ್ಟ ಕ್ರಮಕ್ಕೆ ಸಾರ್ವಜನಿಕ ವಲಯದಲ್ಲಿ ವ್ಯಾಪಕ ಶ್ಲಾಘನೆ ವ್ಯಕ್ತ



**ಬಳ್ಳಾರಿ,ಜು.18.** ನಗರದ ಕೌಲ್ ಬಜಾರ್ ಹಾಗೂ ಕಂಟೋನ್ಮೆಂಟ್ ಪ್ರದೇಶಗಳಲ್ಲಿ ಅನಧಿಕೃತವಾಗಿ ಒತ್ತುವರಿಯಾಗಿದ್ದ ಕೋಟ್ಯಂತರ ರೂಪಾಯಿ ಮೌಲ್ಯದ ಸರ್ಕಾರಿ ಜಮೀನನ್ನು ಕಂದಾಯ ಇಲಾಖೆಯ ಅಧಿಕಾರಿಗಳು ಜೆಸಿಬಿ ಯಂತ್ರಗಳ ಸಹಾಯದೊಂದಿಗೆ ಯಶಸ್ವಿಯಾಗಿ ತೆರವುಗೊಳಿಸಿದ್ದಾರೆ.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್. ಕೆ ಅವರ ನಿರ್ದೇಶನದಂತೆ, ಅಪರ ಜಿಲ್ಲಾಧಿಕಾರಿ ಮಹಮ್ಮದ್.ಎನ್ ಝುಬೇರ್, ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ ಅವರ ನೇತೃತ್ವದಲ್ಲಿ ಶನಿವಾರ ಬಳ್ಳಾರಿ ತಹಶೀಲ್ದಾರ್ ಟಿ.ರೇಖಾ ಮತ್ತು ಕಂದಾಯ ಅಧಿಕಾರಿಗಳು ಮತ್ತು ಪೊಲೀಸ್ ಸಿಬ್ಬಂದಿಯ ಜಂಟಿ ಕಾರ್ಯಾಚರಣೆ ನಡೆಯಿತು. ಬಳ್ಳಾರಿ ನಗರದ ಸಿಟಿಸಿ ವಾರ್ಡ್ ನಂ. 20, ಬ್ಲಾಕ್ ನಂ. 13, ಟಿಎಸ್ ನಂ.1074ರಲ್ಲಿ ಬರುವ ಸುಮಾರು 0.93 ಸೆಂಟ್ಸ್ ವಿಸ್ತೀರ್ಣದ ಸರ್ಕಾರಿ ಹಳ್ಳದ ಜಮೀನನ್ನು ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ಈ ಸ್ಥಳದಲ್ಲಿದ್ದ ಅನಧಿಕೃತ ತಾತ್ಕಾಲಿಕ ಶೆಡ್‌ಗಳು ಮತ್ತು ಕಟ್ಟಡಗಳನ್ನು ಜೆಸಿಬಿ ಮೂಲಕ ತೆರವುಗೊಳಿಸಲಾಯಿತು. ಬಳ್ಳಾರಿ ಕೋಟೆ ಸಮೀಪದ ಹೊಸಪೇಟೆ ರಸ್ತೆಯ ಕಂಟೋನ್ಮೆಂಟ್ ಸಿಟಿಸಿ ವಾರ್ಡ್ ನಂ.21, ಬ್ಲಾಕ್ ನಂ. 03, ಟಿಎಸ್ ನಂ.59(ಪಿ) ರಲ್ಲಿ ಬರುವ 0.10.50 ಸೆಂಟ್ಸ್ ಸರ್ಕಾರಿ ಜಮೀನಿನ ಒತ್ತುವರಿಯನ್ನೂ ಸಹ ಅಧಿಕಾರಿಗಳ ತಂಡ ಸಮ್ಮುಖದಲ್ಲಿ ತೆರವುಗೊಳಿಸಿ, ಸರ್ಕಾರದ ವಶಕ್ಕೆ ಪಡೆಯಲಾಯಿತು.

ತೆರವುಗೊಳಿಸಲಾದ ಜಾಗಗಳಲ್ಲಿ ಅಧಿಕೃತ ಸರ್ಕಾರಿ ಎಚ್ಚರಿಕೆ ಫಲಕಗಳನ್ನು ಅಳವಡಿಸಲಾಗಿದೆ. ಈ ಜಮೀನು ಸರ್ಕಾರಕ್ಕೆ ಸೇರಿದ್ದಾ ಗಿದ್ದು, ಮುಂದಿನ ದಿನಗಳಲ್ಲಿ ಯಾರಾದರೂ ಇದನ್ನು ಒತ್ತುವರಿ ಮಾಡಲು ಯತ್ನಿಸಿದರೆ ಅವರ ವಿರುದ್ಧ ಕಠಿಣ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು ಎಂದು ಬೋರ್ಡ್‌ಗಳ ಮೂಲಕ ಸಾರ್ವಜನಿಕರಿಗೆ ಖಡಕ್ ಎಚ್ಚರಿಕೆ ನೀಡಲಾಗಿದೆ.

## ಶೈಕ್ಷಣಿಕ ಅಭಿವೃದ್ಧಿಗೆ ಶ್ರಮಿಸುತ್ತಾ ಭವಿಷ್ಯದ ಕನಸುಗಳನ್ನು ಕಂಡು ಉನ್ನತ ಮಟ್ಟಕ್ಕೆ ಏರಿ: ಶಿವಮೂರ್ತಿ ಸಲಹೆ



**ಬಳ್ಳಾರಿ ಜು ,18.** ಬಳ್ಳಾರಿ ಸೇವಾ ಸಮಿತಿಯಿಂದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ವಿಬಿಎಸ್ ಮಠ ಹಲಕುಂದಿ ಶಾಲೆಯ ಎಲ್ಲಾ ಮಕ್ಕಳಿಗೆ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಶಾಲೆಯ ಕಲಿಕೆಗೆ ಪೂರಕವಾಗುವ ಎಲ್ಲಾ ಸಾಮಗ್ರಿಗಳನ್ನು ನೀಡಿದ್ದು ಎಲ್ಲಾ ಮಕ್ಕಳಿಗೆ ಶಾಲಾ ಬ್ಯಾಗ್ ವಿತರಿಸುವ ಕಾರ್ಯಕ್ರಮಕ್ಕೆ ಆಗಮಿಸಿ ಶೈಕ್ಷಣಿಕ ಅಭಿವೃದ್ಧಿಗೆ ಶ್ರಮಿಸುವಂತೆ ಶಾಲೆಯ ಮಕ್ಕಳಿಗೆ ಭವಿಷ್ಯದ ಕನಸುಗಳನ್ನು ಕಾಣುವಂತೆ ಕೆಎಂ ಶಿವಮೂರ್ತಿ ಹ್ಯಾಲೀಸ್ ಬ್ಲೂ ಸ್ಟೀಲ್ ಕಂಪನಿ ಸಂಸ್ಥಾಪಕರು ಮಕ್ಕಳಿಗೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಬಳ್ಳಾರಿ ಸೇವ ಸಮಿತಿಯ ಕಾರ್ಯದರ್ಶಿ ಗಳಾದ ರಾಮಚಂದ್ರಪ್ಪ ಅವರು ತಾವು ಭವಿಷ್ಯದಲ್ಲಿ ಉತ್ತಮ ಪ್ರಜೆಗಳಾಗಿ ರೂಪಗೊಳ್ಳುವಂತೆ ಕರೆ ನೀಡಿದರು.

ಬಳ್ಳಾರಿ ಸೇವಾ ಸಮಿತಿಯ ಅಧ್ಯಕ್ಷ ಸುರೇಂದ್ರ ಬಪ್ನಾ ಅವರು ಮಕ್ಕಳಿಗೆ ಶಾಲಾ ಬ್ಯಾಗ್ ಅನ್ನು ವಿತರಿಸಿ ನೃತ್ಯ ಮಾಡಿದ ಎಲ್ಲಾ ಮಕ್ಕಳಿಗೂ ಹಣ ನೀಡುವ ಮೂಲಕ ಪ್ರೋತ್ಸಾಹ ನೀಡಿದರು.

ಹಾಗೆಯೇ ಸಮಿತಿಯ ಮತ್ತೋರ್ವ ಸದಸ್ಯರಾದ ಟಿ ಶ್ರೀನಿವಾಸ್ ಸರ್ ಅವರು ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಕ್ಕಳಿಗೆ ಬ್ಯಾಗ್ ವಿತರಿಸಿದರು.

ಈ ಕಾರ್ಯಕ್ರಮದಲ್ಲಿ ವೀರಬಸಪ್ಪ ಸಮಿತಿಯ ಸದಸ್ಯರು ಹಾಜರಾಗಿ ಮಕ್ಕಳಿಗೆ ಶುಭ ಹಾರೈಸಿದರು ಸದರಿ ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತ ಮಂಜುನಾಥ್ ಪಡೆಯವರು ಭಾಗವಹಿಸಿ ಮಕ್ಕಳಿಗೆ ಶುಭ ಹಾರೈಸಿದರು.

ಶಾಲೆಯ ಮುಖ್ಯ ಗುರುಗಳಾದ ಕೆಂಚಪ್ಪ ಕೆ ಅವರು ಹಿರಿಯ ಶಿಕ್ಷಕಿಯಾದ ಮೀನಾಕ್ಷಿ ಕಾಳೆ ಅವರು ಶಾಲೆಯ ಸಹ ಶಿಕ್ಷಕರದ ವಿಶಾಲಾಕ್ಷಿ ಎಸ್ ಕೆ ಜಯಲಕ್ಷ್ಮಿ ಕಾರ್ಯಕ್ರಮದಲ್ಲಿ ಹಾಜರಿದ್ದರು ಕಾರ್ಯಕ್ರಮವನ್ನು ನೆರವೇರಿಸಿದರು.

# ಸೇವಾನಿರತ ಶಿಕ್ಷಕರಿಗೆ ಟಿಇಟಿ ಕಡ್ಡಾಯ ರದ್ದುಪಡಿಸಲು ಆಗ್ರಹ

ಕಲಬುರಗಿ, ಜು. 18: ಸೇವಾನಿರತ ಶಿಕ್ಷಕರಿಗೆ ಶಿಕ್ಷಕರ ಅರ್ಹತಾ ಪರೀಕ್ಷೆ ಟಿಇಟಿ ಕಡ್ಡಾಯಗೊಳಿಸಿರುವುದನ್ನು ರದ್ದುಗೊಳಿಸಲು ಕೇಂದ್ರ ಸರ್ಕಾರದ ಮಟ್ಟದಲ್ಲಿ ಕಾನೂನು ರೂಪಿಸುವಂತೆ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂದ ಕಾರ್ಯಕರ್ತರು ಶನಿವಾರ ಒತ್ತಾಯಿಸಿದರು.

ಈ ಕುರಿತು ಸಂಸದ ರಾಧಾಕೃಷ್ಣ ದೊಡ್ಡಮನಿ ಅವರಿಗೆ ಮನವಿಪತ್ರ ಸಲ್ಲಿಸಿ, ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ ಹಾಗೂ ಟಿಇಟಿ ಮಾರ್ಗಸೂಚಿ ಜಾರಿಗೆ ಬರುವುದಕ್ಕೂ ಮುನ್ನ ಕಾನೂನುಬದ್ಧವಾಗಿ ನೇಮಕಗೊಂಡ ಶಿಕ್ಷಕರಿಗೆ ನಂತರ ಜಾರಿಯಾದ ಅರ್ಹತಾ ನಿಯಮಗಳನ್ನು ಹಿಂದಿನ



ಕಲಬುರಗಿಯಲ್ಲಿ ಸೇವಾನಿರತ ಶಿಕ್ಷಕರಿಗೆ ಅರ್ಹತಾ ಪರೀಕ್ಷೆ ಕಡ್ಡಾಯವನ್ನು ರದ್ದುಗೊಳಿಸುವಂತೆ ಕೇಂದ್ರ ಮಟ್ಟದಲ್ಲಿ ಕಾಯ್ದೆ ರೂಪಿಸುವಂತೆ ಅಗ್ರಹಿಸಿ ಶಿಕ್ಷಕರು ಸಂಸದ ರಾಧಾಕೃಷ್ಣ ದೊಡಮನಿ ಅವರಿಗೆ ಮನವಿ ಸಲ್ಲಿಸಿದರು.

ದಿನಾಂಕದಿಂದ ಅನ್ವಯಿಸಬಾರದು.

ಸೇವಾನಿರತ ಶಿಕ್ಷಕರ ಸೇವಾ ಹಕ್ಕು, ಉದ್ಯೋಗ ಭದ್ರತೆ, ವೇತನ, ಪಿಂಚಣಿ ಹಾಗೂ ಬಡ್ತಿ ಅವಕಾಶಗಳಿಗೆ ಯಾವುದೇ ಧಕ್ಕೆಯಾಗದಂತೆ ಕೇಂದ್ರ ಸರ್ಕಾರ ಸೂಕ್ತ ಕಾನೂನು ಹಾಗೂ ಆಡಳಿತಾತ್ಮಕ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಈ ವಿಷಯವನ್ನು ಸಂಸತ್ತಿನಲ್ಲಿ ಪ್ರಸ್ತಾಪಿಸಿ, ರಾಜ್ಯ ಸರ್ಕಾರಗಳು, ಶಿಕ್ಷಕರ ಸಂಟನೆಗಳು ಹಾಗೂ ಶಿಕ್ಷಣ ತಙ್ಞರೊಂದಿಗೆ ಸಮಾಲೋಚನೆ ನಡೆಸಿ ಸೇವಾನಿರತ ಶಿಕ್ಷಕರಿಗೆ ನ್ಯಾಯಸಮ್ಮತ ಮತ್ತು ಮಾನವೀಯ ಪರಿಹಾರ ದೊರಕಿಸಿಕೊಡಲು ಕೇಂದ್ರ ಸರ್ಕಾರದ ಗಮನ ಸೆಳೆಯಬೇಕು ಎಂದು ಕೋರಿದರು.




ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ಚುನಾವಣೆ ಘೋಷಿಸುವಂತೆ ರಾಜ್ಯ ಸರ್ಕಾರವನ್ನು ಒತ್ತಾಯಿಸಿ ನವ ನಿರ್ಮಾಣ ಪಕ್ಷದ ಸದಸ್ಯರು ಶನಿವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದರು.

## ಹಳ್ಳಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸದಂತೆ ಎಚ್ಚರಿಕೆ ವಹಿಸಿ: ಸಿಇಓ ರಿಷಿ ಆನಂದ ಅಧಿಕಾರಿಗಳಿಗೆ ಸೂಚನೆ



ವಿಜಯಪುರ, ಜು.18 –ಗ್ರಾಮೀಣ ಪ್ರದೇಶದ ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾ ಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಹೇಳಿದರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವಿವಿಧ ಯೋಜನೆಗಳು ಹಾಗೂ ಘಟಕಾಂಶಗಳ ಕುರಿತು ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ, ಕುಡಿಯುವ ನೀರಿನ ನಿರ್ವಹಣೆ: ಮುಂದಿನ 2-3 ತಿಂಗಳು ಮಳೆಯ ಅಭಾವವಿರುವ ಕಾರಣ ಟಾಸ್ಕ್ ಫೋರ್ಸ್ ಅಡಿ ಬಿಡುಗಡೆಯಾಗಿರುವ ಅನುದಾನವನ್ನು ಅವಶ್ಯವಿದ್ದಲ್ಲಿ ಮಾತ್ರ ಅನುದಾನವನ್ನು ವಿನಿಯೋಗಿಸಬೇಕು. ಜಿಲ್ಲೆಯಲ್ಲಿ ಬೋರ್ ವೆಲ್‌ಗಳನ್ನು ಕೊರೆಯಿಸುವುದನ್ನು ಕಡಿಮೆ ಮಾಡಿ ನೀರಿನ ಸಮಸ್ಯೆ ಇರುವ ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರನ್ನು ಪೂರೈಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ಎಲ್ಲ ತಾಲೂಕುಗಳ ತಾಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರತಿ ವಾರ ಕಡ್ಡಾಯವಾಗಿ ತಮ್ಮ ತಾಲೂಕು ವ್ಯಾಪ್ತಿಯ ಸಂಬಂಧಪಟ್ಟ ಎಲ್ಲ ಅಧಿಕಾರಿಗಳೊಂದಿಗೆ ಸಭೆಗಳನ್ನು ಏರ್ಪಡಿಸಬೇಕು. ಈ ಸಭೆಗಳಲ್ಲಿ ಚರ್ಚಿಸಿ, ಸಮಸ್ಯಾತ್ಮಕ ಗ್ರಾಮಗಳ ಪಟ್ಟಿಯನ್ನು ಸಿದ್ಧಪಡಿಸಿ ತುರ್ತಾಗಿ ಜಿಪಂಗೆ ವರದಿ ಸಲ್ಲಿಸಬೇಕು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಎಲ್ಲ ಸಹಾಯಕ ಅಭಿಯಂತರರು ಹಾಗೂ ಕಿರಿಯ ಅಭಿಯಂತರರು ಪ್ರತಿ ವಾರ 1 ಗ್ರಾಮವನ್ನು ಹರ್‌ಘರ್‌ಜಲ್ ಆಪ್‌ನಲ್ಲಿ ಪ್ರಮಾಣೀಕರಿಸಲು ಗುರಿ ನಿಗದಿಪಡಿಸಿದರು

## ಬೇಜವಾಬ್ದಾರಿಯಿಂದ ಕೆಲಸ ಮಾಡಿದರೆ ಕ್ರಮ: ಎಚ್.ಕೃಷ್ಣ



ಬೀದರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ರಜ್ಯ ಆಹಾರ ಆಯೋಗದ ಅಧ್ಯಕ್ಷ ಎಚ್. ಕೃಷ್ಣ ಅವರ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದರು. ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಪಂ ಸಿಇಓ ಡಾ.ಗಿರೀಶ ಬದೋಲೆ ಮುಂತಾದವರಿದ್ದರು.

ಬೀದರ್, ಜು. 18: ಈ ಹಿಂದೆ ಮಾಡಿದ ತಪ್ಪುಗಳು ಪುನರಾವರ್ತನೆ ಆಗಬಾರದು. ತಪ್ಪು ತಿದ್ದಿಕೊಂಡು, ಜವಾಬ್ದಾರಿ ಅರಿತು ಕೆಲಸ ಮಾಡಬೇಕು. ಬೇಜವಾಬ್ದಾರಿಯಿಂದ ಕೆಲಸ ಮಾಡಿದರೆ, ಅಂಥವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಎಚ್. ಕೃಷ್ಣ ಎಚ್ಚರಿಕೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾಮಟ್ಟದ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕೆ.ಎಫ್.ಸಿ.ಎಸ್.ಸಿ ಸಗಟು ಮಳಿಗೆಗೆ ಭೇಟಿ ನೀಡಿದಾಗ ನಿಯಮಾನುಸಾರ ವಿತರಿಸಬೇಕಾದ ಅಕ್ಕಿಯನ್ನು ಹಂಚದೆ, ಸುಮಾರು 565 ಕ್ವಿಂಟಲ್‌ನಷ್ಟು ಹೆಚ್ಚುವರಿ ಅಕ್ಕಿ ದಾಸ್ತಾನು ಉಳಿಸಿಕೊಂಡಿರುವುದು ಕಂಡು ಬಂದಿದೆ.

ಇನ್ನು, ಜೋಳದ ದಾಸ್ತಾನು ಪರೀಕ್ಷಿಸಿದಾಗ ಕಡತದಲ್ಲಿರುವುದಕ್ಕಿಂತ 30 ಕ್ವಿಂಟಲ್ ಕಡಿಮೆ ಇರುವುದು ಕಂಡುಬಂದಿದೆ. ಈ ಕೊರತೆ ದಾಖಲೆ ಸಮೇತ ದೃಢವಾಗಿದೆ. ನ್ಯಾಯಬೆಲೆ ಮಳಿಗೆಗಳನ್ನು ಪರಿಶೀಲಿಸಿದ್ದಾಗ ಅಲ್ಲಿಯೂ ಸಾಕಷ್ಟು ಅವ್ಯವಸ್ಥೆ ಇರುವುದು ಗೊತ್ತಾಗಿದೆ. ತಕ್ಷಣವೇ ಈ ಲೋಪದೋಷಗಳನ್ನು ಸರಿಪಡಿಸಿ ಕೊಳ್ಳಬೇಕೆಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ನಗರದ ನೌಬಾದ್ ಮತ್ತು ಕರೋಡಿಮಲ್ ಬಡಾವಣೆಯಲ್ಲಿರುವ ಬಾಲಕ ಮತ್ತು ಬಾಲಕಿಯರ ವಸತಿ ನಿಲಯಗಳು, ನೌಬಾದ್‌ನ ಶಾಲೆಯೊಂದರಲ್ಲಿ ಮಕ್ಕಳಿಗೆ ಸರಿಯಾದ ರೀತಿಯಲ್ಲಿ ಆಹಾರ, ಮೊಟ್ಟೆ ಹಾಗೂ ಬಾಳೆ ಹಣ್ಣು ವಿತರಿಸದಿರುವುದು ಕಂಡು ಬಂದಿದೆ. ಅಧಿಕಾರಿಗಳ ಈ ವರ್ತನೆ ಸರಿಯಾದುದಲ್ಲ. ಇದನ್ನು ಕೂಡಲೇ ಸರಿಪಡಿಸಬೇಕೆಂದು ಹೇಳಿದರು.

ನಗರದ ವಿವಿಧ ಪೆಟ್ರೋಲ್ ಬಂಕ್‌ಗಳಲ್ಲಿ ಮೂಲಭೂತ ಸೌಕರ್ಯ ಸರಿಯಾಗಿ ಕಲ್ಪಿಸಿಲ್ಲ. ಬ್ರಿಮ್ಸ್‌ನಲ್ಲೂ ಸಾಕಷ್ಟು ಸಮಸ್ಯೆಗಳಿವೆ. ಕೂಡಲೇ ಅವುಗಳನ್ನು ಬಗೆಹರಿಸಿ ಸಾರ್ವಜನಿಕರಿಗೆ ಉತ್ತಮ ಸೇವೆ ಕಲ್ಪಿಸಬೇಕೆಂದು ತಿಳಿಸಿದರು.

## ಬರಗಾಲವೆಂದು ವಲಸೆ ಹೋಗದಿರಿ, ಸ್ಥಳೀಯ ಉದ್ಯೋಗಾವಕಾಶ ಸದುಪಯೋಗ ಮಾಡಿಕೊಳ್ಳಿ

ಬೀದರ್, ಜು. 18: ಪ್ರಸ್ತುತ ಬರಗಾಲದ ಪರಿಸ್ಥಿತಿಯನ್ನು ಗಮನದಲ್ಲಿ ಇಟ್ಟುಕೊಂಡು ಗ್ರಾಮೀಣ ಭಾಗದ ಕೂಲಿಕಾರ್ಮಿಕರು ಉದ್ಯೋಗಕ್ಕಾಗಿ ನಗರ ಪ್ರದೇಶಗಳಿಗೆ ವಲಸೆ ಹೋಗುವ ಅವಶ್ಯಕತೆ ಇಲ್ಲ. ನಿಮ್ಮ ಗ್ರಾಮ ಪಂಚಾಯಿತಿಯಲ್ಲಿ ಜಾರಿಯಲ್ಲಿರುವ ವಿಬಿಜಿ ರಾಮ್ ಜಿ ಯೋಜನೆಯಡಿ ಸ್ಥಳೀಯ ಮಟ್ಟದಲ್ಲಿ ಉದ್ಯೋಗಾವಕಾಶಗಳನ್ನು ಕಲ್ಪಿಸಲಾಗಿದ್ದು, ಆಸಕ್ತರು ಪಂಚಾಯಿತಿ ಕಚೇರಿಯನ್ನು ಸಂಪರ್ಕಿಸಿ ಯೋಜನೆಯ ಸೌಲಭ್ಯವನ್ನು ಪಡೆಯಬಹುದು ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದ್ದಾರೆ.

ಕೇವಲ ಕೆಲಸ ನೀಡುವುದಷ್ಟೇ ಅಲ್ಲ, ಗ್ರಾಮೀಣ ಭಾಗದಲ್ಲಿ ಬಾಳಿಕೆ ಬರುವ ಮೂಲಸೌಕರ್ಯಗಳ ನಿರ್ಮಾಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಹಾಗೂ ತಮ್ಮ ಜೀವಿತ ಅವಧಿಯವರೆಗೆ 5 ಲಕ್ಷದ ವರೆಗೆ ವೈಯಕ್ತಿಕ ಕಾಮಗಾರಿ ಕೈಗೊಳ್ಳಬಹುದು. ಈಗಾಗಲೇ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ವಿಬಿಜಿ ರಾಮ್ ಜಿ ಯೋಜನೆಯ ಅನುಮೋದಿತ



ಚಾಲ್ತಿ ಕಾಮಗಾರಿಯಲ್ಲಿ ಕೂಲಿಕಾರರು ಕೆಲಸ ನಿರ್ವಹಿಸುತ್ತಿದ್ದಾರೆ ಎಂದು ಶುಕ್ರವಾರ ಪ್ರಕಟಣೆ ಮೂಲಕ ವಿಷಯ ಹಂಚಿಕೊಂಡಿದ್ದಾರೆ.

ವಿಬಿಜಿ ರಾಮ್ ಜಿ ಯೋಜನೆಯ ಅಡಿಯಲ್ಲಿ ಕೆಲವು ಅನುಮೋದಿತ ಕಾಮಗಾರಿಗಳಲ್ಲಿ ನಿಮ್ಮೂರಲ್ಲೇ ಕೆಲಸ ಮಾಡಬಹುದು. ಅವುಗಳಲ್ಲಿ ಕೆಲವು ಅನುಮೋದಿತ ಕಾಮಗಾರಿಗಳು ಈ ರೀತಿಯಲ್ಲಿವೆ: ವೈಯಕ್ತಿಕ ಕಾಮಗಾರಿಗಳೆಂದರೆ – ಜಾನುವಾರು ಶೆಡ್, ಎರೆಹುಳು ತೊಟ್ಟಿ ಘಟಕ, ತೋಟಗಾರಿಕೆ ಪ್ರದೇಶ ವಿಸ್ತರಣೆ, ತೆರೆದ ಬಾವಿ, ವೈಯಕ್ತಿಕ ಫಾರ್ಮ್ ಪಾಂಡ್ (ಕೃಷಿಹೊಂಡ) ಇತ್ಯಾದಿ. ಸಮುದಾಯ ಕಾಮಗಾರಿಗಳೆಂದರೆ – ಬರಗಾಲ ನಿಯಂತ್ರಣ ಕಾಮಗಾರಿಗಳು, ಮಣ್ಣಿನ ಚೆಕ್ ಡ್ಯಾಂ ನಿರ್ಮಾಣ, ಮುಖ್ಯ ಕಾಲುವೆ ನಿರ್ಮಾಣ, ಪ್ರವಾಹ ತಿರುವು ಚರಂಡಿ ನಿರ್ಮಾಣ, ಸಮುದಾಯ ಮೆಟ್ಟಿಲು ಬಾವಿ ಪುನಶ್ಚೇತನ, ಜಲಕೊಯ್ಲು ಹೊಂಡದ ನಿರ್ಮಾಣ, ವೈಯಕ್ತಿಕ ನೀರಾವರಿ ಬಾವಿ ನಿರ್ಮಾಣ, ಚರಂಡಿ ರಚನೆ ನಿರ್ಮಾಣ, ಸರ್ಕಾರಿ ಶಾಲೆಯ ಕಾಂಪೌಂಡ್ ಗೋಡೆ ನಿರ್ಮಾಣ, ದುರಸ್ತಿ ಮತ್ತು ನಿರ್ವಹಣೆ, ಸರ್ಕಾರಿ ಶಾಲೆಯ ಅಡುಗೆ ಕೋಣೆ ನಿರ್ಮಾಣ, ದುರಸ್ತಿ ಮತ್ತು ನಿರ್ವಹಣೆ, ಆಟದ ಮೈದಾನ ಅಭಿವೃದ್ಧಿ, ಸರ್ಕಾರಿ ಶಾಲೆಯ ಶೌಚಾಲಯ ನಿರ್ಮಾಣ, ಸಮುದಾಯ ಸ್ಮಶಾನ ನಿರ್ಮಾಣ ಹಾಗೂ ಇತರೆ ಅನುಮೋದಿತ ಕಾಮಗಾರಿಗಳಲ್ಲಿ ಕೆಲಸ ಮಾಡಿ ಯೋಜನೆಯ ಲಾಭ ಪಡೆಯಬಹುದು ಎಂದು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ನಿಮ್ಮ ಹತ್ತಿರದ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ. ಉಚಿತ ಸಹಾಯವಾಣಿ ಸಂಖ್ಯೆ: 8277506000 ಕರೆ ಮಾಡಿ ಮಾಹಿತಿ ಪಡೆಯಬಹುದು ಎಂದು ತಿಳಿಸಿದ್ದಾರೆ.

## ಯೋಜನೆಗಳು ಅರ್ಹರಿಗೆ ತಲುಪಿದಾಗ ಮಾತ್ರ ಸರ್ಕಾರದ ಉದ್ದೇಶ ಈಡೇರಿದಂತೆ: ಸಂಸದೆ ಪ್ರಭಾ ಮಲ್ಲಿಕಾರ್ಜುನ್

ದಾವಣಗೆರೆ,ಜು.18: ಎಸ್‌ಎಸ್ ಕೇರ್ ಟ್ರಸ್ಟ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಸ್ಪಂದನ ಮಾಜಿ ದೇವದಾಸಿಯರ ಸಮಗ್ರ ಆರೋಗ್ಯ ತಪಾಸಣೆ ಮತ್ತು ಆರೋಗ್ಯ ಜಾಗೃತಿ ಕಾರ್ಯಕ್ರಮ ಉದ್ಘಾಟನೆ

ದಾವಣಗೆರೆ. ಜು.18: ಎರಡು ಕೈಗಳು ಸೇರಿದಾಗ ಮಾತ್ರ ಚಪ್ಪಾಳೆ ಸಾಧ್ಯವಾಗುತ್ತದೆ. ಅದೇ ರೀತಿ ಸರ್ಕಾರ ಯೋಜನೆಗಳನ್ನು ರೂಪಿಸಿದಾಗ, ಅರ್ಹ ಫಲಾನುಭವಿಗಳು ಅವುಗಳ ಸದುಪಯೋಗ ಪಡೆದರೆ ಮಾತ್ರ ಸರ್ಕಾರದ ಉದ್ದೇಶ ಈಡೇರುತ್ತದೆ ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ ಹೇಳಿದರು.

ನಗರದ ಬಾಪೂಜಿ ಸಭಾಂಗಣದಲ್ಲಿ ಶನಿವಾರ ಎಸ್‌ಎಸ್ ಕೇರ್ ಟ್ರಸ್ಟ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಸ್ಪಂದನ ಮಾಜಿ ದೇವದಾಸಿಯರ ಸಮಗ್ರ ಆರೋಗ್ಯ ತಪಾಸಣೆ ಮತ್ತು ಆರೋಗ್ಯ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.ಸರ್ಕಾರದ ವಿವಿಧ ಯೋಜನೆ ಗಳನ್ನು ಬಳಸಿಕೊಂಡು ತಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವತ್ತ ಮಾಜಿ ದೇವದಾಸಿಯರು ಗಮನಹರಿಸಬೇಕು. ತಮ್ಮ ಸಮಸ್ಯೆಗಳ ಬಗ್ಗೆ ಅರಿವು ಹೊಂದಿ, ಅವುಗಳನ್ನು ಪರಿಹರಿಸಿಕೊಳ್ಳುವ ಪ್ರಯತ್ನ ಮಾಡಬೇಕು ಎಂದು ಹೇಳಿದರು. ಜಿಲ್ಲೆಯ ಮಾಜಿ ದೇವದಾಸಿಯೊಬ್ಬರ ಪುತ್ರಿ ಸರ್ಕಾರಿ ಉದ್ಯೋಗದಲ್ಲಿರುವುದು ಹೆಮ್ಮೆಯ ಸಂಗತಿ. ಅದು ಇತರ ಕುಟುಂಬಗಳಿಗೂ ಮಾದರಿಯಾಗಬೇಕು. ಎಲ್ಲ ಮಾಜಿ ದೇವದಾಸಿಯರ ಕುಟುಂಬಗಳು ತಮ್ಮ ಮಕ್ಕಳಿಗೆ ಉನ್ನತ ಶಿಕ್ಷಣ ಕಲಿಸಬೇಕು. ಅವರು ಉತ್ತಮ ಶಿಕ್ಷಣ ಪಡೆದು ಸರ್ಕಾರಿ ಸೇವೆ ಹಾಗೂ ಉನ್ನತ ಹುದ್ದೆಗಳನ್ನು ಅಲಂಕರಿಸಿದಾಗ ಕುಟುಂಬಗಳಷ್ಟೇ ಅಲ್ಲ, ಸಮುದಾಯವೂ ಅಭಿವೃದ್ಧಿಯಾಗುತ್ತದೆ. ಶಿಕ್ಷಣದ ಜೊತೆಗೆ ಕೌಶಲ್ಯ ತರಬೇತಿಯೂ ಇಂದಿನ ಅಗತ್ಯವಾಗಿದೆ ಎಂದು ತಿಳಿಸಿದರು.

ಮಾಜಿ ದೇವದಾಸಿ ಮಹಿಳೆಯರ ಶೇ.100ರಷ್ಟು ಆರೋಗ್ಯ ತಪಾಸಣೆ ಆಗಬೇಕು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಈ ನಿಟ್ಟಿನಲ್ಲಿ ವಿಶೇಷ ಗಮನಹರಿಸಬೇಕು. ಎಲ್ಲ ಮಾಜಿ ದೇವದಾಸಿಯರ ಪಟ್ಟಿಯನ್ನು ಸಿದ್ಧಪಡಿಸಿ, ಅಧಿಕಾರಿಗಳ ನಡುವೆ ಜವಾಬ್ದಾರಿ ಹಂಚಿಕೆ ಮಾಡಿ, ಆಗಸ್ಟ್ 30ರೊಳಗೆ ಪ್ರತಿಯೊಬ್ಬರ ಆರೋಗ್ಯ ತಪಾಸಣೆ ಪೂರ್ಣಗೊಳಿಸಬೇಕು ಎಂದು ಸೂಚಿಸಿದರು.ಆರೋಗ್ಯ ತಪಾಸಣೆಯೊಂದಿಗೆ ಪ್ರತಿಯೊಬ್ಬರ ಸಾಮಾಜಿಕ ಹಾಗೂ ಆರ್ಥಿಕ ಪರಿಸ್ಥಿತಿಯನ್ನು ದಾಖಲಿಸಿ, ಅವರ ಸಮಸ್ಯೆಗಳ ಪಟ್ಟಿಯನ್ನೂ ಸಿದ್ಧಪಡಿಸಬೇಕು. ಮಾಜಿ ದೇವದಾಸಿಯರ ಕುಟುಂಬಗಳನ್ನು ಆರ್ಥಿಕ, ಶೈಕ್ಷಣಿಕ ಹಾಗೂ ಸಾಮಾಜಿಕವಾಗಿ ಸ್ವಾವಲಂಬಿಗಳನ್ನಾಗಿಸಲು ಸಂಬಂಧಿಸಿದ ಅಧಿಕಾರಿಗಳು ಕೈಜೋಡಿಸಬೇಕು ಎಂದು ಹೇಳಿದರು.ಮಾಜಿ ದೇವದಾಸಿಯರು ನಿವೇಶನ ಹೊಂದಿದ್ದರೆ ಮನೆ ನಿರ್ಮಾಣಕ್ಕೆ ಸರ್ಕಾರ 2ರಿಂದ 3 ಲಕ್ಷದವರೆಗೆ ಸಹಾಯಧನ ನೀಡುತ್ತದೆ. ಪಿಂಚಣಿ, ಗೃಹಲಕ್ಷ್ಮಿ ಯೋಜನೆಯಡಿ ಆರ್ಥಿಕ ನೆರವು ದೊರೆಯುತ್ತಿದೆ. ಮಕ್ಕಳ ವಿದ್ಯಾಭ್ಯಾಸಕ್ಕೂ ಸರ್ಕಾರ ವಿವಿಧ ಯೋಜನೆಗಳ ಮೂಲಕ ನೆರವು ನೀಡುತ್ತಿದೆ. ಸ್ವಸಹಾಯ ಸಂಘಗಳ ಮೂಲಕ ಸ್ವಯಂ ಉದ್ಯೋಗ ಕೈಗೊಳ್ಳುವವರಿಗೆ 45 ಸಾವಿರದವರೆಗೆ ಸಹಾಯಧನ ನೀಡಲಾಗುತ್ತಿದೆ. ದೇವದಾಸಿ ಮಹಿಳೆಯರ ಮಕ್ಕಳನ್ನು ವಿವಾಹವಾಗುವವರಿಗೆ ಪ್ರೋತ್ಸಾಹ ಧನವಾಗಿ ಗಂಡು ಮಗುವಿಗೆ 3 ಲಕ್ಷ ಹಾಗೂ ಹೆಣ್ಣು ಮಗುವಿಗೆ 5 ಲಕ್ಷ ನೀಡಲಾಗುತ್ತದೆ. ಈ ಎಲ್ಲ ಸೌಲಭ್ಯಗಳನ್ನು ಅರ್ಹರು ಸದುಪ ಯೋಗಪಡಿಸಿಕೊಳ್ಳಬೇಕು ಎಂದು ತಿಳಿಸಿದರು.ಎಸ್‌ಎಸ್ ಕೇರ್ ಟ್ರಸ್ಟ್ ವತಿಯಿಂದ ಬಡ ಹಾಗೂ ಮಧ್ಯಮ ವರ್ಗದ ಜನರಿಗೆ ಉಚಿತ ಡಯಾಲಿಸಿಸ್, ಆರೋಗ್ಯ ತಪಾಸಣೆ, ಆರೋಗ್ಯ ಜಾಗೃತಿ ಕಾರ್ಯಕ್ರಮಗಳು, ಮಕ್ಕಳಿಗೆ ಕೌಶಲ್ಯ ತರಬೇತಿ ಸೇರಿದಂತೆ ಹಲವು ಸೇವೆಗಳನ್ನು ನೀಡಲಾಗುತ್ತಿದೆ. ಮಹಿಳೆಯರಿಗೆ ಸ್ತನ ಕ್ಯಾನ್ಸರ್ ತಪಾಸಣೆ ಸೇರಿದಂತೆ ವಿವಿಧ ಆರೋಗ್ಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.



ಮುಗುಳ್ನಗೆ ಕಾರ್ಯಕ್ರಮದಡಿ ಸರ್ಕಾರಿ ಶಾಲಾ ಮಕ್ಕಳಿಗೆ ಉಚಿತ ದಂತ ಚಿಕಿತ್ಸೆ ನೀಡಲಾಗುತ್ತಿದೆ.ನೀಟ್, ಸಿಇಟಿ, ಐಎಎಸ್ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ ನೀಡಲಾಗುತ್ತಿದ್ದು, ಎಸ್‌ಎಸ್ ಜನಕಲ್ಯಾಣ ಟ್ರಸ್ಟ್ ಮೂಲಕ ಎಸ್‌ಎಸ್‌ಎಲ್ಸಿ, ಪಿಯುಸಿ ಹಾಗೂ ಪಿಎಚ್ಡಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ. ಶಾಲೆ ಅಥವಾ ಕಾಲೇಜಿನ ಪ್ರಾಂಶುಪಾಲರಿಂದ ಶಿಫಾರಸು ಪತ್ರ ತಂದರೆ, ಕೋರ್ಸ್ ಶುಲ್ಕದ ಆಧಾರದ ಮೇಲೆ ವಿದ್ಯಾರ್ಥಿ ವೇತನ ನೀಡಲಾಗುವುದು. ಅರ್ಹ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

## ಜಿಲ್ಲೆಯ ಅಭಿವೃದ್ಧಿಗೆ ಶ್ರಮಿಸಿ, ಲೋಕಾಯುಕ್ತ ನ್ಯಾ.ಬಿ.ಎಸ್.ಪಾಟೀಲ್

ರಾಯಚೂರು, ಜು. 1: ಜಿಲ್ಲೆಯಲ್ಲಿ ಕುಡಿಯುವ ನೀರು, ಘನತ್ಯಾಜ ನಿರ್ವಹಣೆ, ಕೆರೆಗಳ ಸಂರಕ್ಷಣೆ ಸೇರಿದಂತೆ ಜಿಲ್ಲೆಯ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಜಿಲ್ಲೆಯ ಅಧಿಕಾರಿಗಳು ಶ್ರಮಿಸಬೇಕೆಂದು ಕರ್ನಾಟಕ ಲೋಕಾಯುಕ್ತರಾದ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್ ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ರಾಯಚೂರು ನಗರದ ವಿವಿಧ ಕಚೇರಿಗಳಿಗೆ ಸಂಚರಿಸಿದ ಲೋಕಾಯುಕ್ತರು ಅನಂತರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಅವರು ಮಾತನಾಡಿದರು.

ಸಾರ್ವಜನಿಕರಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಾಲಕಾಲಕ್ಕೆ ಒದಗಿಸಲು ಸ್ವಂತ ಸುಪ್ರೀಂ ಕೋರ್ಟ್ನ ನಿರ್ದೇಶನವಿದ್ದು, ಸಂಬಂಧಿಸಿದ ಅಧಿಕಾರಿಗಳು ನಗರ ಹಾಗೂ ಗ್ರಾಮೀಣ ಭಾಗದಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳು ಒದಗಿಸುವ ಮೂಲಕ ಜನರಿಗೆ ವಿವಿಧ ಸೌಲಭ್ಯಗಳನ್ನು ನೀಡುವ ವಾತಾವರಣವನ್ನು ನಿರ್ಮಾಣ ಮಾಡಲು ಅಧಿಕಾರಿಗಳು



ಶ್ರಮಿಸಬೇಕು. ಜನರಿಗೆ ಸರ್ಕಾರದ ವಿವಿಧ ಸೌಲಭ್ಯಗಳನ್ನು ಕಾಲಕಾಲಕ್ಕೆ ಒದಗಿಸಬೇಕೆಂದರು.

ಜಿಲ್ಲೆಯಲ್ಲಿ ಮರಳುಗಾರಿಕೆ, ಅರಣ್ಯ ಸಂರಕ್ಷಣೆ ಹಾಗೂ ಗ್ರಾಮೀಣ ಭಾಗದ ಅಂಗಡಿ ಹಾಗೂ ಪಾನ್ ಬೀಡಾ ಅಂಗಡಿಗಳಲ್ಲಿ ಮದ್ಯ ಮಾರಾಟದ ಕುರಿತು ನಿಗಾ ನಿರ್ವಹಿಸಬೇಕು. ಅಕ್ರಮ ಮದ್ಯ ಮಾರಾಟದ ಮೇಲೆ ಸಂಬಂಧಿಸಿದ ಅಧಿಕಾರಿಗಳು ಕೂಡಲೇ ಕ್ರಮ ವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಕರ್ನಾಟಕ ಲೋಕಾಯುಕ್ತರು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು ಈ ಹಿಂದೆ ಸರ್ಕಾರದಿಂದ ಮಹತ್ವ ಯೋಜನೆ ಕೈಗೊಳ್ಳಲಾಗಿದೆ. ಮಳೆ ಬರದೆ ಇರುವುದರಿಂದ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು. ಆರ್.ಓ ಘಟಕಕ್ಕೆ ಕೋಟ್ಯಂತರ ರೂ.ಗಳನ್ನು ಖರ್ಚು ಮಾಡಲಾಗಿದೆ.


ಪ್ರಸ್ತುತ ಶೇ.50ರಷ್ಟು ಆರ್.ಓ ಪ್ಲಾಂಟ್‌ಗಳು ಸರಿಯಾಗಿ ನಿರ್ವಹಣೆ ಇಲ್ಲದೆ ಹಾಳಾಗಿವೆ. ಅವುಗಳನ್ನು ಸರಿಪಡಿಸಬೇಕು. ರಾಯಚೂರು ಜಿಲ್ಲೆಯ 811 ಹಳ್ಳಿಗಳ ಪೈಕಿ ಸುಮಾರು 700 ಹಳ್ಳಿಗಳಲ್ಲಿ ಆರ್.ಓ ಪ್ಲಾಂಟ್ ನೀಡಲಾಗಿದೆ. ದೇವದುರ್ಗ ಹಾಗೂ ಮಾನ್ವಿ ತಾಲ್ಲೂಕಿನ ಹಳ್ಳಿಗಳಲ್ಲಿ ಜನರಿಗೆ ಶುದ್ಧ ನೀರು ಸಿಗದ ಕಾರಣ ಆರೋಗ್ಯದ ಸಮಸ್ಯೆ ಎದುರಾದ ಕುರಿತು ಲೋಕಾಯುಕ್ತರಿಂದ ಸ್ವಯಂ ಪ್ರಕರಣಗಳು ದಾಖಲಿಸಲಾಗಿದೆ ಎಂದರು.

ಜಿಲ್ಲೆಯಲ್ಲಿ 319 ಕೆರೆಗಳಿದ್ದು, ಎಲ್ಲಾ ಕೆರೆಗಳ ಮೇಲೆ ಸಾರ್ವಜನಿಕ ಹಿತಶಕ್ತಿ ಪ್ರಕರಣದಡಿ ಪ್ರಕರಣ ದಾಖಲು ಮಾಡಿಕೊಳ್ಳಲಾಗಿದೆ. ಎರಡು ಕೆರೆಗಳನ್ನು ಹೊರತುಪಡಿಸಿ ಎಲ್ಲ ಕೆರೆಗಳು ಸಮೀಕ್ಷೆ ಮಾಡಲಾಗಿದೆ. ಕೆರೆಯ ಅಭಿವೃದ್ಧಿ ಕುರಿತು ಯೋಜನೆಗಳನ್ನು ರೂಪಿಸ ಬೇಕು. ಕೆರೆಗಳನ್ನು ಅಭಿವೃದ್ಧಿ ಪಡಿಸಿ ಸಾರ್ವಜನಿಕರ ಉಪಯೋಗಕ್ಕೆ ನೀಡಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಲೋಕಾಯುಕ್ತರು ಸೂಚಿಸಿದರು.

ನಗರದ ಸ್ವಚ್ಛತೆ ಕುರಿತು ಪ್ರತಿಯೊಬ್ಬ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಬೇಕು. ಸ್ವಚ್ಛತೆಗೆ ಪ್ರಥಮ ಆದ್ಯತೆ ನೀಡಬೇಕು. ಮನೆಯ ಸ್ವಚ್ಛತೆಯಂತೆಯೇ, ನಗರ ಸ್ವಚ್ಛತೆಗೂ ಆದ್ಯತೆಯ ಮೇಲೆ ಪ್ರಾಮುಖ್ಯತೆ ನೀಡಲು ಅಧಿಕಾರಿಗಳು ಸೇರಿದಂತೆ ಪ್ರತಿಯೊಬ್ಬ ನಾಗರಿಕರು ಈ ಕಾರ್ಯಕ್ಕೆ ಕೈ ಜೋಡಿಸಬೇಕು ಎಂದರು.

## ಈ ಸಾಧನೆ ಯುವ ಕ್ರೀಡಾಪಟುಗಳಿಗೆ ಸ್ಫೂರ್ತಿ ತುಂಬಲಿ: ಮಾಜಿ ಶಾಸಕ ಸೋಮಶೇಖರರೆಡ್ಡಿ

ಬಳ್ಳಾರಿ ಜು18. ಏಷಿಯನ್ ಅಂಡರ್–23 ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ 4X100 ಮೀಟರ್ ರಿಲೇ ಸ್ಪರ್ಧೆಯಲ್ಲಿ ಭಾರತಕ್ಕೆ ಮೊಟ್ಟಮೊದಲ ಬಾರಿಗೆ ಬೆಳ್ಳಿ ಪದಕ ತಂದು ದೇಶದ ಕೀರ್ತಿಯನ್ನು ವಿಶ್ವದ ವೇದಿಕೆಯಲ್ಲಿ ಎತ್ತಿಹಿಡಿದ ಬಳ್ಳಾರಿಯ ಹೆಮ್ಮೆಯ ಪುತ್ರಿ ಕುಮಾರಿ ಸುದೀಕ್ಷಾ ಅವರನ್ನು ಶನಿವಾರ ಬಳ್ಳಾರಿಯ ಸತ್ಯನಾರಾಯಣಪೇಟೆಯ ನಿಜಲಿಂಗಪ್ಪ ಕಾಲೋನಿಯಲ್ಲಿರುವ ಅವರ ನಿವಾಸಕ್ಕೆ ಮಾಜಿ ಶಾಸಕ ಸೋಮಶೇಖರ ರೆಡ್ಡಿ ಭೇಟಿನೀಡಿ ಆತ್ಮೀಯವಾಗಿ ಸನ್ಮಾನಿಸಿ ಅಭಿನಂದಿಸಿದರು.ಇಡೀ ಕರ್ನಾಟಕ ಹಾಗೂ ಭಾರತದ ಕೀರ್ತಿಯನ್ನು ಹೆಚ್ಚಿಸಿರುವ ಸುದೀಕ್ಷ



ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು. ಅವರ ಈ ಸಾಧನೆ ಯುವ ಕ್ರೀಡಾಪಟುಗಳಿಗೆ ಸ್ಫೂರ್ತಿದಾಯಕ ವಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದ ಸಾಧನೆಗಳನ್ನು ಮಾಡಿ ಭಾರತದ ತ್ರಿವರ್ಣ ಧ್ವಜವನ್ನು ಇನ್ನಷ್ಟು ಎತ್ತರದಲ್ಲಿ ಹಾರಿಸುವಂತಾಗಲಿ ಎಂದರು.

## ವಿದ್ಯಾರ್ಥಿನಿ ಎನ್. ಸಾಯಿಶ್ರಾವ್ಯಗೆ ಶುಭ ಹಾರೈಸಿದ ಮಾಜಿ ಶಾಸಕ ಸೋಮಶೇಖರರೆಡ್ಡಿ

ಬಳ್ಳಾರಿ ಜು18. ಬಳ್ಳಾರಿ ನಗರದ ನಾರಾಯಣ ಕಾಲೇಜಿನ ವಿದ್ಯಾರ್ಥಿನಿ ಎನ್. ಸಾಯಿ ಶ್ರಾವ್ಯ ಅವರು NEET-2026 ಪರೀಕ್ಷೆಯಲ್ಲಿ 687/720 ಅಂಕಗಳನ್ನು ಗಳಿಸಿ ಅಖಿಲ ಭಾರತ ಮಟ್ಟದಲ್ಲಿ 150ನೇ ರ‍್ಯಾಂಕ್ ಹಾಗೂ ರಾಜ್ಯದಲ್ಲೂ ಅತ್ಯುತ್ತಮ ಸಾಧನೆ ಮಾಡಿದ್ದಾರೆ.



ಅವರ ಈ ಅಪೂರ್ವ ಸಾಧನೆ ಬಳ್ಳಾರಿ ಜಿಲ್ಲೆಯ ಹೆಮ್ಮೆ. ಅವರ ಪರಿಶ್ರಮ, ಶಿಸ್ತು ಹಾಗೂ ಪೋಷಕರ ಮತ್ತು ಶಿಕ್ಷಕರ ಮಾರ್ಗದರ್ಶನಕ್ಕೆ ಅಭಿನಂದನೆಗಳು.

ಮುಂದಿನ ವಿದ್ಯಾಭ್ಯಾಸ ಮತ್ತು ವೈದ್ಯಕೀಯ ಕ್ಷೇತ್ರದಲ್ಲಿ ಇನ್ನಷ್ಟು ಉನ್ನತ ಸಾಧನೆಗಳನ್ನು ಮಾಡಲೆಂದು ಮಾಜಿ ಶಾಸಕ ಗಾಲಿ ಸೋಮಶೇಖರರೆಡ್ಡಿ ಶುಭಹಾರೈಸಿದ್ದಾರೆ.

## ಶಾಲೆ ಎದುರೇ ನಾಡಪಿಸ್ತೂಲ್ ಮಾರಾಟ: ಇಬ್ಬರ ಬಂಧನ 5 ಪಿಸ್ತೂಲ್, ಜೀವಂತ ಮದ್ದುಗುಂಡು, ತಲವಾರ್ ಜಪ್ತಿ

ಬೀದರ್, ಜು. 18: ಮಹಾರಾಷ್ಟ್ರದ ನಾಂದೇಡ್‌ನಲ್ಲಿ ಖರೀದಿಸಿದ್ದ ಅಕ್ರಮ ನಾಡ ಪಿಸ್ತೂಲು, ಜೀವಂತ ಮದ್ದು ಗುಂಡು, ತಲವಾರ ಸೇರಿ ಇನ್ನಿತರೆ ಆಯುಧಗಳನ್ನು ಹೆಚ್ಚಿನ ಬೆಲೆಗೆ ಮಾರಾಟ ಮಾಡಲು ಯತ್ನಿಸುತ್ತಿದ್ದ ಇಬ್ಬರನ್ನು ಬೀದರ್ ಪೊಲೀಸರು ಬಂಧಿಸಿದ್ದಾರೆ.

3.50 ಲಕ್ಷ ಮೌಲ್ಯದ 5 ನಾಡ ಪಿಸ್ತೂಲ್, 2.60 ಲಕ್ಷದ 26 ಜೀವಂತ ಮದ್ದು ಗುಂಡು, 10 ಎಂಟಿ ಕೇಸ್‌ಗಳು, 13 ಸಾವಿರದ 5 ತಲವಾರ್‌ಗಳು ಹಾಗೂ ಕೃತ್ಯಕ್ಕೆ ಬಳಸಿರುವ 50 ಸಾವಿರದ 01 ಬೈಕ್ ಸೇರಿ ಒಟ್ಟಾರೆ 6.73 ಲಕ್ಷ ಮೌಲ್ಯದ ಮುದ್ದೆ ಮಾಲನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಎಸ್‌ಪಿ ಪ್ರದೀಪ ಗುಂಟಿ ತಿಳಿಸಿದರು.

ಸುದ್ದಿಗಾರರೊಂದಿಗೆ ಎಸ್‌ಪಿ ಪ್ರದೀಪ ಗುಂಟಿ ಅವರು ಈ ಕುರಿತು ಮಾಹಿತಿ ನೀಡಿದ್ದು, ಬೀದರ್‌ನ ಅಮನಜೋತ್ ಸಿಂಗ್ ರಂಜೀತ ಸಿಂಗ್ (21) ಹಾಗೂ ವೆಂಕಟೇಶ್ ತುಕಾರಾಮ್ (21) ಬಂಧಿತರು. ಇವರು ಈ ನಾಡ ಪಿಸ್ತೂಲುಗಳು, ತಲವಾರ್‌ಗಳು ಹಾಗೂ ಮದ್ದುಗುಂಡುಗಳನ್ನು ನಾಂದೇಡ್‌ನ ಕುಖ್ಯಾತ ಅಕ್ರಮ ಆಯುಧ ಮಾರಾಟಗಾರರಾದ ಬಲಬೀರ್ ಸಿಂಗ್ ಪ್ರತಾಪ ಸಿಂಗ್ (23),



ನವಜೋತ ಸಿಂಗ್ ಇಂದೇರ ಸಿಂಗ್ (24) ಬಳಿ ಕಡಿಮೆ ಬೆಲೆಗೆ ಖರೀದಿಸಿ, ಬೀದರ್‌ನಲ್ಲಿ ಹೆಚ್ಚಿನ ಬೆಲೆಗೆ ಮಾರಾಟಕ್ಕೆ ತಂದಿರುವುದಾಗಿ ಬಾಯಿ ಬಿಟ್ಟಿದ್ದಾರೆ. ಬೀದರ್‌ನಲ್ಲಿ ಓರ್ವ ವ್ಯಾಪಾರಿಗೆ ಈ ಆಯುಧ ಮಾರಾಟಕ್ಕೆ ತಂದಿದ್ದರು. ಈ ವ್ಯಾಪಾರಿಯನ್ನು ವಿಚಾರಣೆಗೆ ಒಳಪಡಿಸಲಾಗುವುದು ಎಂದರು.

## ಕಳೆದ ವಾರ ಒಳಹರಿವು, ಈ ವಾರ ತುಂಗಭದ್ರಾ ಬರಿದೋ ಬರಿದು

ರಾಯಚೂರು, ಜು.18: ರಾಯಚೂರು, ಕೊಪ್ಪಳ, ವಿಜಯನಗರ ಮತ್ತು ಬಳ್ಳಾರಿ ಜಿಲ್ಲೆಗಳ ಜೀವನಾಡಿಯಾಗಿರುವ ತುಂಗಭದ್ರಾ ಜಲಾಶಯದ ಒಳಹರಿವು ಈಗ ಸ್ಥಗಿತಗೊಂಡಿದೆ.

ಕಳೆದ ವಾರ ಶಿವಮೊಗ್ಗ ಮತ್ತು ಚಿಕ್ಕಮಗಳೂರು ತುಂಗಭದ್ರಾ ಜಲಾನಯನ ಪ್ರದೇಶದಲ್ಲಿ ಮಳೆ ಸುರಿದಿದ್ದರಿಮದ ಜಲಾಶಯಜಕ್ಕೆ ನೀರು ಹರಿದು ಬಂದಿತ್ತು. ಒಂದು ವಾರದ ವರೆಗೆ 45 ಸಾವಿರ ಕ್ಯೂಸೆಕ್ಸ್ ನೀರು ಹರಿದು ಬರುತ್ತಿತ್ತು. ಆದರೆ ಈ ವಾರ ಜಲಾನಯನ ಪ್ರದೇಶ ಮತ್ತು ಈ ಜಿಲ್ಲೆಗಳಲ್ಲಿ ಮಳೆ ಸಂಪೂರ್ಣ ಇಲ್ಲದಿರುವುದರಿಂದ ಜಲಾಶಯಕ್ಕೆ ನಿರುಹರಿದು ಬರುವುದು ನಿಂತು ಬಹೋಗಿದ್ದರೆ ಮತ್ತೊಂದೆಡೆ ತುಂಗಭದ್ರಾ ನದಿಯಲ್ಲಿ ನೀರಿಲ್ಲದೇ ಬಂಡೆಗಲ್ಲುಗಳು ತೇಲಿ ನದಿ ಪಾತ್ರ ಭಣಗುಟ್ಟುತ್ತಿದೆ.

ಪ್ರಸಕ್ತ ವರ್ಷ ಸಮರ್ಪಕವಾಗಿ ಮಳೆ ಸುರಿಯದೆ, ತುಂಗಭದ್ರಾ ಜಲಾಶಯದಲ್ಲಿ ಸಾಕಷ್ಟು ಪ್ರಮಾಣದಲ್ಲಿ ನೀರು ಸಂಗ್ರಹವಾಗದ ಹಿನ್ನೆಲೆ ಜಿಲ್ಲೆಯಲ್ಲಿ ಹರಿಯುವ ತುಂಗಭದ್ರಾ ನದಿಯಲ್ಲಿ ನೀರಿಲ್ಲದೆ ಒಡಲು ಬರಿದಾಗಿದೆ. ನದಿಯಲ್ಲಿ ನೀರಿದ್ದರೆ, ಮೇಯಲು ಹೋಗುವ ಜಾನುವಾರುಗಳಿಗೆ, ಪ್ರಾಣಿ, ಪಕ್ಷಿಸಂಕುಲಕ್ಕೆ ಕುಡಿಯುವ ನೀರಿನ ಆಸರೆಯಾಗಿತ್ತು.

ಅಲ್ಲದೆ ಅಸಂಖ್ಯಾತ ಜಲಚರಗಳಿಗೆ ಆವಾಸಸ್ಥಾನ(ನೆಲೆ) ವಾಗಿತ್ತು. ಜತೆಗೆ ಕಂಪ್ಲಿಸೇತುವೆ ಕೆಳ ಭಾಗದಿಂದ ಸಿರುಗುಪ್ಪದ



ಮಣ್ಣೂರು, ಸೂಗೂರು ಮುಂದಿನ ಭಾಗದವರೆಗೂ ನದಿಯಲ್ಲಿ ಮೀನು ಹಿಡಿದು ಮಾರಾಟ ಮಾಡಿ ಬರುವ ಹಣದಲ್ಲಿ ಮೀನುಗಾರರು ಜೀವನ ನಡೆಸುತ್ತಿದ್ದರು.

**ನೀರಿಲ್ಲದೆ ನದಿ ಖಾಲಿ:** ಕಳೆದ ವಾರದಿಂದ ನದಿಯಲ್ಲಿ ನೀರಿಲ್ಲದೆ ಖಾಲಿಯಾಗಿದೆ. ಮೇಯಲು ಹೋಗುವ ಜಾನುವಾರುಗಳಿಗೆ ಕುಡಿಯಲು ನೀರಿಲ್ಲದಂತಾಗಿದೆ. ನದಿಯಲ್ಲಿನ ಕಂದಕ(ಗುಳಿ), ಮಡುವುಗಳಲ್ಲಿಸ್ವಲ್ಪ ನೀರಿದೆ. ಆದರೆ ಹಲವು ದಿನಗಳಿಂದ ನೀರು ನಿಂತಿರುವುದರಿಂದ ಕೆಟ್ಟ ವಾಸನೆ ಬರುತ್ತಿದೆ. ಜಲಚರಗಳಿಗೂ ಅಡಚಣೆಯಾಗಿದೆ. ಈ ಭಾಗದಲ್ಲಿ ನದಿ ಬತ್ತಿರುವುದರಿಂದ ಕುಡಿಯುವ ನೀರಿನ ಪೂರೈಕೆಯಲ್ಲಿ ವ್ಯತ್ಯಯವಾಗಿದೆ. ಕೊಳವೆ ಬಾವಿಯಲ್ಲಿ ಅಂತರ್ಜಲದ ಮಟ್ಟ ಕಡಿಮೆಯಾಗಿದೆ ಎಂದು ಗ್ರಾಮಸ್ಥರು ಆರೋಪಿಸುತ್ತಾರೆ.

**ಸಂಕಷ್ಟದಲ್ಲಿ ಮೀನುಗಾರರು:** ನದಿಯಲ್ಲಿ ನೀರಿಲ್ಲದೆ ಮೀನುಗಳ ಸಾವನ್ನಪ್ಪುತ್ತಿವೆ. ಕಳೆದ 15 ದಿನಗಳಿಂದ ನದಿಯಲ್ಲಿ ನೀರಿನ ಹರಿವು ಕಡಿಮೆಯಾಗಿದ್ದು, ಹಲವು ದಿನಗಳಿಂದ ಮೀನು ಬೇಟೆಗೆ ಹೋಗಿಲ್ಲ. ದುಡಿಮೆಯಿಲ್ಲದಂತಾಗಿದ್ದು ಜೀವನ ನಿರ್ವಹಣೆ ಕಷ್ಟಕರವಾಗಿದೆ ಎಂದು ಗ್ರಾಮದ ಮೀನುಗಾರರರಾದ ಟಿ.ಜಡೆಪ್ಪ, ಎಂ.ಯಲ್ಲಪ್ಪ, ನಾಗರಾಜ ಅಲವತ್ತುಕೊಳ್ಳುತ್ತಾರೆ.

ಜಲಾಶಯದ ನೀರು ನಂಬಿ ಬೆಳೆ ಬೆಳೆಯಬೇಡಿ ಎಂದು ಹೇಳುವ ಸಿಎಂ, ಕುಡಿಯುವ ನೀರಿನ ಬಗ್ಗೆ ತಾತ್ಸಾರ ಮನೋಭಾವ ತೋರಿದ್ದಾರೆ.ನದಿಯಲ್ಲಿ ನೀರಿಲ್ಲದಿದ್ದರಿಂದ ಮೀನುಗಳು ಸಾವನ್ನಪ್ಪುತ್ತಿವೆ. ಜಲಚರಗಳಿಗೆ ಅಡಚಣೆಯಾಗಿದ್ದು, ಮೇಯಲು ಹೋಗುವ ದನಕರುಗಳಿಗೆ ಕುಡಿಯುವ ನೀರಿನ ತೊಂದರೆಯಾಗಿದೆ. ಮೀನುಗಾರರ ಬದುಕು ಸಂಕಷ್ಟದಲ್ಲಿದೆ. ರೈತರು ಭತ್ತ ಸಸಿ ನಾಟಿ ಮಾಡಿದ್ದು, ಮಳೆ ಸುರಿಯದೆ ನದಿಯಲ್ಲಿ ನೀರಿಲ್ಲ. ಕೊಳವೆ ಬಾವಿಯಲ್ಲಿ ಅಂತರ್ಜಲ ಮಟ್ಟ ಕಡಿಮೆಯಾಗಿ ಭತ್ತದ ಗದ್ದೆ ಒಣಗುತ್ತಿವೆ. ಹಾಗಾಗಿ ನದಿಗೆ ಜಲಾಶಯದಿಂದ ನೀರು ಹರಿಸಬೇಕು, ಎಂದು ಒತ್ತಾಯಿಸಿದರು.

# ಅಮೆರಿಕ 7ನೇ ರಾತ್ರಿಯ ದಾಳಿ ಪೂರ್ಣಗೊಳಿಸುತ್ತಿದ್ದಂತೆ ಪೂರ್ಣ ಪ್ರಮಾಣದ ದಾಳಿಯ ಎಚ್ಚರಿಕೆ ನೀಡಿದ ಇರಾನ್

ವಾಷಿಂಗ್ಟನ್/ ಟೆಹ್ರಾನ್, ಜುಲೈ 18: ಅಮೆರಿಕದ ದಾಳಿಗಳು ಮುಂದುವರಿದರೆ "ಪೂರ್ಣ ಪ್ರಮಾಣದ ದಾಳಿ" ನಡೆಸುವ ಸಾಧ್ಯತೆ ಇದೆ ಎಂದು ಇರಾನ್ ಶನಿವಾರ ಅಮೆರಿಕಕ್ಕೆ ಎಚ್ಚರಿಕೆ ನೀಡಿದೆ. ವಾಷಿಂಗ್ಟನ್ ಮತ್ತು ಟೆಹ್ರಾನ್ ನಡುವಿನ ಉದ್ವಿಗ್ನತೆ ಮಧ್ಯಪ್ರಾಚ್ಯದಾದ್ಯಂತ ಹೆಚ್ಚಾಗುತ್ತಿದ್ದಂತೆ, ಕಣ್ಗಾವಲು ಸೌಲಭ್ಯಗಳು, ಮಿಲಿಟರಿ ಲಾಜಿಸ್ಟಿಕ್ಸ್ ತಾಣಗಳು, ಭೂಗತ ಶಸ್ತ್ರಾಸ್ತ್ರಗಳ ಸಂಗ್ರಹ ಮತ್ತು ಕಡಲ ಸಾಮರ್ಥ್ಯಗಳನ್ನು ಗುರಿಯಾಗಿಸಿಕೊಂಡು ಇರಾನ್ ವಿರುದ್ಧ ಸತತ ಏಳನೇ ರಾತ್ರಿಯ ದಾಳಿಯನ್ನು ಪೂರ್ಣಗೊಳಿಸಿರುವುದಾಗಿ ಯುಎಸ್ ಮಿಲಿಟರಿ ಹೇಳುತ್ತಿದ್ದಂತೆ ಈ ಎಚ್ಚರಿಕೆ ಬಂದಿದೆ. ಇರಾನ್ನ ಮಿಲಿಟರಿ ಸಾಮರ್ಥ್ಯಗಳನ್ನು ಮತ್ತಷ್ಟು ದುರ್ಬಲಗೊಳಿಸುವ ಪ್ರಯತ್ನಗಳ ಭಾಗವಾಗಿ ಶುಕ್ರವಾರದ ಕಾರ್ಯಾಚರಣೆಯಲ್ಲಿ ಯುದ್ಧ ವಿಮಾನಗಳು, ಡ್ರೋನ್‌ಗಳು ಮತ್ತು ನೌಕಾ ಸ್ವತ್ತುಗಳು ಸೇರಿವೆ ಎಂದು ಅಮೆರಿಕ ಸೆಂಟ್ರಲ್ ಕಮಾಂಡ್ ಹೇಳಿದೆ. ಇರಾನ್ ಈ ಪ್ರದೇಶದಲ್ಲಿನ ಅಮೆರಿಕದ ಮಿತ್ರರಾಷ್ಟ್ರಗಳ ವಿರುದ್ಧ ದಾಳಿಗಳನ್ನು ಮುಂದುವರಿಸುತ್ತಿದ್ದಂತೆ ಇತ್ತೀಚಿನ ದಾಳಿಗಳು ಬಂದಿವೆ, ಇದು ಹಲವಾರು ಗಲ್ಫ್ ರಾಷ್ಟ್ರಗಳು ಭದ್ರತಾ ಎಚ್ಚರಿಕೆಗಳನ್ನು ನೀಡಲು ಪ್ರೇರೇಪಿಸಿತು. "ಅಮೆರಿಕ ಪಡೆಗಳು ಕಣ್ಗಾವಲು ತಾಣಗಳು, ಮಿಲಿಟರಿ ಲಾಜಿಸ್ಟಿಕ್ಸ್ ಮೂಲಸೌಕರ್ಯ, ಭೂಗತ ಶಸ್ತ್ರಾಸ್ತ್ರಗಳ ಸಂಗ್ರಹ ಮತ್ತು ಕಡಲ ಸಾಮರ್ಥ್ಯಗಳು ಸೇರಿದಂತೆ ಇರಾನಿನ ಮಿಲಿಟರಿ ಗುರಿಗಳ ವಿರುದ್ಧ ದಾಳಿಗಳನ್ನು ನಡೆಸಿದವು" ಎಂದು CENTCOM ಹೇಳಿದೆ. ಇರಾನ್ನ ರಾಜ್ಯ ಮಾಧ್ಯಮವು ಪರ್ಷಿಯನ್ ಕೊಲ್ಲಿ ಮತ್ತು ಹಾರ್ಮುಜ್ ಜಲಸಂಧಿಯ ಬಳಿಯ ಪ್ರದೇಶಗಳನ್ನು, ಬಂದರ್ ಅಬ್ಬಾಸ್ ಬಂದರು ನಗರ ಮತ್ತು ಹತ್ತಿರದ ಕೆಶ್ಮ್ ಮತ್ತು ಲಾರಕ್ ದ್ವೀಪಗಳನ್ನು ಒಳಗೊಂಡಂತೆ ಹೊಡೆದುರುಳಿಸಿದೆ ಎಂದು ವರದಿ ಮಾಡಿದೆ. ಬಂದರ್ ಅಬ್ಬಾಸ್ ಅನ್ನು ಹಾಜಿಯಾಬಾದ್‌ಗೆ ಸಂಪರ್ಕಿಸುವ ಹೆದ್ದಾರಿಯಲ್ಲಿರುವ ಸೇತುವೆಗಳು ಮತ್ತು ಸುರಂಗವನ್ನು ಸಹ ಗುರಿಯಾಗಿರಿಸಲಾಗಿದೆ ಎಂದು ವರದಿಗಳು ತಿಳಿಸಿವೆ. ಏತನ್ಮಧ್ಯೆ, ಅಮೆರಿಕದ ದಾಳಿಗಳು ಮುಂದುವರಿದರೆ ಟೆಹ್ರಾನ್ ವ್ಯಾಪಕ ಪ್ರತಿಕ್ರಿಯೆಯನ್ನು ನೀಡಬಹುದು ಎಂದು ಇರಾನ್ ಮಿಲಿಟರಿ ಸಲಹೆಗಾರ ಮೊಹ್ಸೆನ್ ರೆಝಾಯಿ ವಾಷಿಂಗನ್‌ಗೆ ಎಚ್ಚರಿಕೆ ನೀಡಿದ್ದಾರೆ. "ಇನ್ನೂ ಎರಡು ಅಥವಾ ಮೂರು ದಿನಗಳವರೆಗೆ ಅಮೆರಿಕದ ದಾಳಿಗಳು ಮುಂದುವರಿದರೆ, ನಾವು ಪೂರ್ಣ ಪ್ರಮಾಣದ ಆಕ್ರಮಣಕಾರಿ ಕಾರ್ಯಾಚರಣೆಗಳ ಹಂತವನ್ನು ಪ್ರವೇಶಿಸುತ್ತೇವೆ" ಎಂದು ರೆಝಾಯಿ ಅವರನ್ನು ಇರಾನ್‌ನ ರಾಜ್ಯ ಪ್ರಸಾರಕ ಐಆರ್‌ಐಬಿ ಉಲ್ಲೇಖಿಸಿದೆ. "ಇರಾನ್‌ನ ಆಕ್ರಮಣಕಾರಿ ಪಡೆಗಳ ವಿರುದ್ಧ ಯಾವುದೇ ರಾಜಕೀಯ ಗಡಿ ಸುರಕ್ಷಿತವಾಗಿರುವುದಿಲ್ಲ" ಎಂದು ಅವರು ಹೇಳಿದರು ಮತ್ತು ನಾಗರಿಕ ಮೂಲಸೌಕರ್ಯದ ಮೇಲಿನ ದಾಳಿ ಎಂದು ಅಧಿಕಾರಿಗಳು ವಿವರಿಸಿದ್ದಕ್ಕಾಗಿ ಇರಾನ್ ಆರ್ಥಿಕ ಪರಿಹಾರವನ್ನು ಪಡೆಯುತ್ತದೆ ಎಂದು ಹೇಳಿದರು – ಇದನ್ನು ಅಮೆರಿಕ ತಿರಸ್ಕರಿಸಿದೆ. ಹಲವಾರು ಯುಎಸ್ ಪಾಲುದಾರರು ರಾತ್ರಿಯ ಎಚ್ಚರಿಕೆಗಳನ್ನು ಮತ್ತು ಡ್ರೋನ್ ದಾಳಿಗೆ ಯತ್ನಿಸಿದ್ದಾರೆ ಎಂದು ವರದಿ ಮಾಡಿದ್ದಾರೆ. ಬಹ್ರೇನ್ನ ಮಿಲಿಟರಿ ಶನಿವಾರ ಮುಂಜಾನೆ ತನ್ನ ವಾಯು ರಕ್ಷಣಾ ವ್ಯವಸ್ಥೆಗಳು ಅನೇಕ ಇರಾನಿನ ದಾಳಿಗಳನ್ನು ತಡೆದಿವೆ ಎಂದು ಹೇಳಿದೆ. ಕ್ಷಿಪಣಿ ಮತ್ತು ಡ್ರೋನ್ ಬೆದರಿಕೆಗಳಿಗೆ ತನ್ನ ವಾಯು ರಕ್ಷಣಾ ವ್ಯವಸ್ಥೆಗಳು ಪ್ರತಿಕ್ರಿಯಿಸುತ್ತಿದ್ದಂತೆ 12 ಗಂಟೆಗಳ ಅವಧಿಯಲ್ಲಿ ಅನೇಕ ಎಚ್ಚರಿಕೆಗಳನ್ನು ನೀಡಿರುವುದಾಗಿ ಕುವೈತ್ ಹೇಳಿದೆ. ದೇಶವು ತನ್ನ ವಾಯುಪ್ರದೇಶವನ್ನು ತಾತ್ಕಾಲಿಕವಾಗಿ ಮುಚ್ಚಿದ ನಂತರ ಶನಿವಾರದ ಹೆಚ್ಚಿನ ವಿಮಾನಗಳನ್ನು ಮರು ನಿಗದಿಪಡಿಸುವುದಾಗಿ ಕುವೈತ್ ಏರ್‌ವೇಸ್ ಹೇಳಿದೆ. ರಾಜ್ಯ ಮಾಧ್ಯಮಗಳ ಪ್ರಕಾರ, ತನ್ನ ವಾಯು ರಕ್ಷಣಾ ವ್ಯವಸ್ಥೆಗಳು 10 ಇರಾನಿನ ಕ್ಷಿಪಣಿಗಳನ್ನು ತಡೆದಿವೆ ಎಂದು ಜೋರ್ಡಾನ್ ಹೇಳಿದೆ. ಬೆದರಿಕೆ ಹಾದುಹೋಗಿದೆ ಎಂದು ಘೋಷಿಸುವ ಮೊದಲು ಸೌದಿ ಅರೇಬಿಯಾ ಎರಡು ಸ್ಥಳಗಳಲ್ಲಿ ಸಂಕ್ಷಿಪ್ತವಾಗಿ ಎಚ್ಚರಿಕೆಗಳನ್ನು ನೀಡಿತು. ಇರಾನ್‌ನ ಸರ್ಕಾರಿ ಮಾಧ್ಯಮವು ತನ್ನ ಪಡೆಗಳು ಬಹ್ರೇನ್ ಮತ್ತು ಕುವೈತ್ನಲ್ಲಿರುವ ಅಮೆರಿಕದ ನೆಲೆಗಳು ಮತ್ತು ಸೌಲಭ್ಯಗಳನ್ನು ಗುರಿಯಾಗಿಸಿಕೊಂಡಿವೆ ಎಂದು ಹೇಳಿಕೊಂಡಿದೆ, ಆದರೆ ಆ ಹಕ್ಕುಗಳನ್ನು ಸ್ವತಂತ್ರವಾಗಿ ಪರಿಶೀಲಿಸಲು ಸಾಧ್ಯವಾಗಲಿಲ್ಲ. ಅಮೆರಿಕ ಮತ್ತು ಇರಾನ್ ದಾಳಿಗಳನ್ನು ವಿನಿಮಯ ಮಾಡಿಕೊಳ್ಳುತ್ತಲೇ ಇರುವುದರಿಂದ, ಹಲವಾರು ಅರಬ್ ಸರ್ಕಾರಗಳು ಇರಾನ್ನ ದಾಳಿಯನ್ನು ಖಂಡಿಸಿ ಹೊಸ ರಾಜತಾಂತ್ರಿಕತೆಗೆ ಕರೆ ನೀಡಿವೆ. ಇತ್ತೀಚಿನ ಉಲ್ಬಣವು ಯುಎಸ್–ಇರಾನ್ ಕದನ ವಿರಾಮವನ್ನು ಕಾಯ್ದುಕೊಳ್ಳುವ ಪ್ರಯತ್ನಗಳಲ್ಲಿನ ಕುಸಿತದ ನಂತರ, ಎರಡೂ ಕಡೆಯವರು ಮಿಲಿಟರಿ ಕಾರ್ಯಾಚರಣೆಗಳನ್ನು ಮುಂದುವರೆಸಿದ್ದಾರೆ ಮತ್ತು ಜೂನ್ 17 ರಂದು ದೇಶಗಳ ನಡುವೆ ಮರುಪಡೆಯಲಾದ ಒಪ್ಪಂದದ ಷರತ್ತುಗಳನ್ನು ವಾಷಿಂಗ್ಟನ್ ಉಲ್ಲಂಘಿಸಿದೆ ಎಂದು ಟೆಹ್ರಾನ್ ಆರೋಪಿಸಿದೆ, ಇದರಿಂದಾಗಿ ಎರಡೂ ಕಡೆಯವರು ಮತ್ತಷ್ಟು ದಾಳಿಯ ಬೆದರಿಕೆಗಳನ್ನು ಎದುರಿಸುತ್ತಿದ್ದಾರೆ.



"ಅಮೆರಿಕದ ದಾಳಿಗಳು ಇನ್ನೂ ಎರಡು ಅಥವಾ ಮೂರು ದಿನಗಳವರೆಗೆ ಮುಂದುವರಿದರೆ, ನಾವು ಪೂರ್ಣ ಪ್ರಮಾಣದ ಆಕ್ರಮಣಕಾರಿ ಕಾರ್ಯಾಚರಣೆಗಳ ಹಂತವನ್ನು ಪ್ರವೇಶಿಸುತ್ತೇವೆ" ಎಂದು ಇರಾನಿನ ಮಿಲಿಟರಿ ಸಲಹೆಗಾರ ಮೊಹ್ಸೆನ್ ರೆಝೈ ಎಚ್ಚರಿಸಿದ್ದಾರೆ.

## ಒಪ್ಪಂದದ ನಿಯಮ ಉಲ್ಲಂಘಿಸಿದ ಆರೋಪದ ಮೇಲೆ ಇರಾನ್ ಅಮೆರಿಕ ಜೊತೆಗಿನ ಶಾಂತಿ ಒಪ್ಪಂದ ಸ್ಥಗಿತ

**ಟೆಹ್ರಾನ್, ಜುಲೈ 18:** ಅಮೆರಿಕ ಜೊತೆಗಿನ ಮಧ್ಯಂತರ ಶಾಂತಿ ಒಪ್ಪಂದದಡಿಯಲ್ಲಿ ತನ್ನ ಬದ್ಧತೆಗಳನ್ನು ಸ್ಥಗಿತಗೊಳಿಸಿರುವುದಾಗಿ ಇರಾನ್ ಇಂದು ಹೇಳಿದೆ, ಎರಡೂ ದೇಶಗಳು ಮಿಲಿಟರಿ ಮತ್ತು ಮೂಲಸೌಕರ್ಯ ಗುರಿಗಳ ಮೇಲೆ ದಾಳಿಗಳನ್ನು ವಿನಿಮಯ ಮಾಡಿಕೊಳ್ಳುತ್ತಲೇ ಇರುವುದರಿಂದ ವಾಷಿಂಗ್ಟನ್ ಒಪ್ಪಂದದ ನಿಯಮಗಳನ್ನು ಉಲ್ಲಂಘಿಸಿದೆ ಎಂದು ಆರೋಪಿಸಿದೆ. ಸುಮಾರು ಒಂದು ತಿಂಗಳ ಹಿಂದೆ ಸಹಿ ಹಾಕಿದ ಒಪ್ಪಂದದ ಅಡಿಯಲ್ಲಿ ಅಮೆರಿಕ ತನ್ನ ಬಾಧ್ಯತೆಗಳನ್ನು ಉಲ್ಲಂಘಿಸಿದೆ ಮತ್ತು ಆದ್ದರಿಂದ ಟೆಹ್ರಾನ್ ತನ್ನ ಬದ್ಧತೆಗಳನ್ನು "ಇನ್ನು ಮುಂದೆ ಕಾರ್ಯಗತಗೊಳಿಸುತ್ತಿಲ್ಲ" ಎಂದು ಇರಾನ್ನ ಉಪ ವಿದೇಶಾಂಗ ಸಚಿವ ಕಜೆಮ್ ಘರಿಬಬಾದಿ ಇರಾನ್ ರಾಜ್ಯ ದೂರದರ್ಶನಕ್ಕೆ ತಿಳಿಸಿದರು. ಕಳೆದ ವಾರ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಒಪ್ಪಂದವು ಪರಿಣಾಮಕಾರಿಯಾಗಿ ಸತ್ತಿದೆ ಎಂದು ಘೋಷಿಸಿದ್ದರೂ ಸಹ ಈ ಘೋಷಣೆ



ಹೊರಬಿದ್ದಿದೆ. ಆದಾಗ್ಯೂ, ಪಶ್ಚಿಮ ಏಷ್ಯಾದಾದ್ಯಂತ ಅಮೆರಿಕದ ಮಿತ್ರರಾಷ್ಟ್ರಗಳು ಮತ್ತು ಸ್ಥಾಪನೆಗಳ ಮೇಲೆ ದಾಳಿಗಳನ್ನು ಮುಂದುವರೆಸಿದರೂ ಮತ್ತು ಹಾರ್ಮುಜ್ ಜಲಸಂಧಿಯಲ್ಲಿ ವಾಣಿಜ್ಯ ಹಡಗು ಸಾಗಣೆಯನ್ನು ಗುರಿಯಾಗಿಸಿಕೊಂಡಿದ್ದರೂ ಸಹ, 14 ಅಂಶಗಳ ತಿಳುವಳಿಕೆ ಪತ್ರಕ್ಕೆ ಮರಳುವ ಇಚ್ಛೆಯನ್ನು ಇರಾನ್ ಸೂಚಿಸುತ್ತಲೇ ಇತ್ತು. ಪಾಕಿಸ್ತಾನಕ್ಕೆ ಇರಾನ್ನ ರಾಯಭಾರಿ ರೆಜಾ ಅಮಿರಿ ಮೊಘದಮ್ ಅವರು ಘರಿಬಬಾದಿಯವರ ಹೇಳಿಕೆಗಳನ್ನು ಪ್ರತಿಧ್ವನಿಸಿದರು. "ಯುದ್ಧಭೂಮಿಯಲ್ಲಿ ಸಾಧ್ಯವಾಗದ್ದನ್ನು ಪಡೆಯಲು ಅಮೆರಿಕವು ಒಪ್ಪಂದವನ್ನು ತನ್ನ ನಿಯಮಗಳಿಗೆ ವಿರುದ್ಧವಾಗಿ ಅರ್ಥೈಸಿಕೊಂಡಿತು ಮತ್ತು ಹಾರ್ಮುಜ್ ಜಲಸಂಧಿಯ ಕೆಲವು ಭಾಗಗಳ ಮೇಲೆ ಹಿಡಿತ ಸಾಧಿಸಿತು" ಎಂದು ಮೊಘದಮ್ ಬರೆದಿದ್ದಾರೆ. "ಇರಾನ್ನ ಕಡೆಯವರು ಒಪ್ಪಂದವನ್ನು ಸ್ಪಷ್ಟವಾಗಿ ಉಲ್ಲಂಘಿಸಿದ ಈ ಅನಿಯಂತ್ರಿತ ವ್ಯಾಖ್ಯಾನವನ್ನು ಸ್ವೀಕರಿಸುವುದಿಲ್ಲ ಎಂಬುದು ಸ್ಪಷ್ಟವಾಗಿತ್ತು." ಇರಾನ್ ವಿರುದ್ಧ ಮಿಲಿಟರಿ ಕ್ರಮ ಕೈಗೊಳ್ಳುವ ಮೂಲಕ ವಾಷಿಂಗ್ಟನ್ ಒಪ್ಪಂದವನ್ನು ಕೈಬಿಟ್ಟಿದೆ ಎಂದು ಅವರು ಆರೋಪಿಸಿದರು. "ಈಗ, ಅಮೆರಿಕ ಒಪ್ಪಂದದ ನಿಯಮ ಮತ್ತು ಅಂತರರಾಷ್ಟ್ರೀಯ ತತ್ವಗಳಿಗೆ ವಿರುದ್ಧವಾಗಿ ಯುದ್ಧವನ್ನು ಪ್ರಾರಂಭಿಸಿದೆ, ಮೂಲಸೌಕರ್ಯಗಳನ್ನು ನಾಶಪಡಿಸಿದೆ" ಎಂದು ಅವರು ಬರೆದಿದ್ದಾರೆ. "ಈ ಆಕ್ರಮಣಕಾರಿ ಮತ್ತು ಅಜಾಗರೂಕ ಕೃತ್ಯವನ್ನು ಅಂತರರಾಷ್ಟ್ರೀಯ ಸಮುದಾಯವು ಬಲವಾಗಿ ಖಂಡಿಸುತ್ತದೆ ಎಂದು ನಿರೀಕ್ಷಿಸಲಾಗಿದೆ."

## ಹಾರ್ಮುಜ್ ಜಲಸಂಧಿಯಲ್ಲಿ ಸಾಗಣೆ ಕನಿಷ್ಠ ಮಟ್ಟಕ್ಕೆ ಇಳಿಕೆ ಬ್ರೆಂಟ್ ಕಚ್ಚಾತೈಲ ಬ್ಯಾರಲ್‌ಗೆ 88 ಡಾಲರ್‌ಗೆ ಏರಿಕೆ

**ಲಂಡನ್, ಜುಲೈ 18:** ಅಂತರರಾಷ್ಟ್ರೀಯ ತೈಲ ಬೆಲೆ ಮಾನದಂಡವಾದ ಬ್ರೆಂಟ್ ಕಚ್ಚಾ ತೈಲ ಶುಕ್ರವಾರ ಮಧ್ಯಾಹ್ನ ಬ್ಯಾರಲ್‌ಗೆ 88 ಡಾಲರ್ ಗಿಂತ ಹೆಚ್ಚಾಯಿತು, ಗುರುವಾರದ ಮುಕ್ತಾಯದ ಬೆಲೆಗಿಂತ 4 ಡಾಲರ್ ಹೆಚ್ಚಾಗಿದೆ ಮತ್ತು ಒಂದು ತಿಂಗಳಲ್ಲಿ ಅದರ ಅತ್ಯುನ್ನತ ಮಟ್ಟವಾಗಿದೆ. ಜೂನ್ ಮಧ್ಯದಲ್ಲಿ ಇರಾನ್ ಮತ್ತು ಯುಎಸ್ ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಿದ ನಂತರ ತೈಲ ಬೆಲೆಗಳು ತೀವ್ರವಾಗಿ ಕುಸಿದವು, ಜುಲೈ 1 ರಂದು ಬ್ರೆಂಟ್ ಬ್ಯಾರಲ್‌ಗೆ $71 ಕ್ಕೆ ಇಳಿಯಿತು. ಆದಾಗ್ಯೂ, ಒಪ್ಪಂದದ ಕುಸಿತ ಮತ್ತು ಇರಾನ್ ಮೇಲೆ ಯುಎಸ್ ದಾಳಿಗಳು ಪುನರಾರಂಭವಾದ ನಂತರ ಬೆಲೆಗಳು ಮತ್ತೆ ಸ್ಥಿರವಾಗಿ ಏರಿವೆ. "ನಿಮಗೆ ತಿಳಿದಿರುವಂತೆ, ಈಗ ತೈಲದ ಬೆಲೆ ಬ್ಯಾರೆಲ್‌ಗೆ 80 ಡಾಲರ್, ಬಹುಶಃ ಸ್ವಲ್ಪ ಕಡಿಮೆ. ನಾನು ಇಲ್ಲಿಗೆ ಬರುವ ಮೊದಲು, ಅದು ಹಾಗೆಯೇ ಇತ್ತು" ಎಂದು ಶ್ವೇತಭವನದ ಪತ್ರಿಕಾ ಕಾರ್ಯದರ್ಶಿ ಕ್ಯಾರೋಲಿನ್ ಲೀವಿಟ್ ಗುರುವಾರ ಹೇಳಿದರು. "ಈ ಸಂಘರ್ಷದ ಉತ್ತುಂಗದಿಂದ ಅನಿಲ ಬೆಲೆಗಳು ಗ್ಯಾಲನ್‌ಗೆ 60 ಸೆಂಟ್‌ಗಳಷ್ಟು ಕಡಿಮೆಯಾಗಿದೆ, ಮತ್ತು ಅಧ್ಯಕ್ಷರು ಆರಂಭದಿಂದಲೂ ಅಮೆರಿಕಾದ ಜನರೊಂದಿಗೆ ಪ್ರಾಮಾಣಿಕರಾಗಿದ್ದರು. "ತೈಲ ಮಾರುಕಟ್ಟೆಯಲ್ಲಿ ತಾತ್ಕಾಲಿಕ ಅಡಚಣೆಗಳು ಇರಬಹುದು. ಆದರೆ ತೈಲ ಬೆಲೆಯಲ್ಲಿ ಭಾರಿ ಏರಿಕೆ ಇರುತ್ತದೆ.

ಇತ್ತೀಚಿನ ಏರಿಕೆಯ ಹೊರತಾಗಿಯೂ, ಬ್ರೆಂಟ್ ಕಚ್ಚಾತೈಲವು ಮೇ 5 ರಂದು ದಾಖಲಾದ ಬ್ಯಾರಲ್‌ಗೆ 114 ಡಾಲರ್ ಇತ್ತೀಚಿನ ಗರಿಷ್ಠ ಮಟ್ಟಕ್ಕಿಂತ ಕೆಳಗಿದೆ. ವಾಷಿಂಗ್ಟನ್ ಮತ್ತು ಇರಾನ್ ನಡುವಿನ ಹೋರಾಟ ತೀವ್ರಗೊಂಡಂತೆ ಹಾರ್ಮುಜ್ ಜಲಸಂಧಿಯ ಮೂಲಕ ಸಾಗಣೆ ಸಂಚಾರ ಮೂರು ವಾರಗಳಲ್ಲಿ ಅತ್ಯಂತ ಕಡಿಮೆ ಮಟ್ಟಕ್ಕೆ ಇಳಿದಿದ್ದರಿಂದ ಇದು ಬಂದಿದೆ. ಕಡಲ ಟ್ರ್ಯಾಕಿಂಗ್ ಸಂಸ್ಥೆ ಕೆಪ್ಲರ್ ಪ್ರಕಾರ, ಗುರುವಾರ ಕೇವಲ ಎಂಟು ಹಡಗುಗಳು ಮಾತ್ರ ಕಾರ್ಯತಂತ್ರದ ಜಲಮಾರ್ಗವನ್ನು ಸಾಗಿಸಿದವು.

ಆ ಹಡಗುಗಳಲ್ಲಿ ಏಳು ಹಡಗುಗಳು ಒಮಾನಿ ಕರಾವಳಿಯಲ್ಲಿ ಯುಎಸ್ ಬೆಂಬಲಿತ ಮಾರ್ಗಕ್ಕಿಂತ ಹೆಚ್ಚಾಗಿ ಜಲಸಂಧಿಯ ಮೂಲಕ ಇರಾನಿನ ಹಡಗು ಮಾರ್ಗವನ್ನು ಬಳಸಿದವು, ಇದು ಟೆಹ್ರಾನ್ನ ಸೂಚನೆಗಳನ್ನು ಪಾಲಿಸಲು ವಿಫಲವಾದರೆ ಇರಾನಿನ ಕ್ಷಿಪಣಿಗಳು ಅಥವಾ ಡ್ರೋನ್‌ಗಳಿಂದ ಗುರಿಯಾಗುವ ಅಪಾಯದ ಬಗ್ಗೆ ಸಿಬ್ಬಂದಿಗಳಲ್ಲಿ ಹೆಚ್ಚುತ್ತಿರುವ ಕಳವಳವನ್ನು ಸೂಚಿಸುತ್ತದೆ. ಬುಧವಾರ ಹದಿನೈದು ಹಡಗುಗಳು




ಜಲಸಂಧಿಯ ಮೂಲಕ ಹಾದುಹೋದವು, ಆದರೆ ಅವುಗಳಲ್ಲಿ ಒಂದು ಟ್ಯಾಂಕರ್ M/T ಬೆಲ್ಮಾ ಇರಾನಿನ ಗುಂಡಿನ ದಾಳಿಗೆ ಒಳಗಾಯಿತು, ಇದು ಅನೇಕ ನಾವಿಕರನ್ನು ಪ್ರೇರೇಪಿಸಿತು. ಈ ಮಾರ್ಗವನ್ನು ಸಂಪೂರ್ಣವಾಗಿ ತಪ್ಪಿಸಲು ಅಥವಾ ಇಸ್ಲಾಮಿಕ್ ಗಣರಾಜ್ಯದ ಪ್ರಸ್ತಾವಿತ ಉತ್ತರ ಮಾರ್ಗವನ್ನು ಬಳಸಲು ಅವರು ಪ್ರಯತ್ನಿಸಿದರು.

ಈ ಅವಧಿಯಲ್ಲಿ ಯಾವುದೇ ನೆರಳು ನೌಕಾಪಡೆಯ ಹಡಗುಗಳು ಹಾರ್ಮುಜ್ ಜಲಸಂಧಿಯನ್ನು ದಾಟಿಲ್ಲ ಎಂದು ಕೆಪ್ಲರ್ ವರದಿ ಮಾಡಿದ್ದಾರೆ. ನೆರಳು ನೌಕಾಪಡೆಯ ಹಡಗುಗಳು ಸಾಮಾನ್ಯವಾಗಿ ತಮ್ಮ ಸರಕುಗಳ ಮೂಲ ಮತ್ತು ಗಮ್ಯಸ್ಥಾನವನ್ನು ಮರೆಮಾಡುತ್ತವೆ, ಆಗಾಗ್ಗೆ ಕಾರ್ಯಾಚರಣೆಯ ಸಮಸ್ಯೆಗಳಿಗೆ ಹೆಚ್ಚು ಗುರಿಯಾಗುವ ಹಳೆಯ ಹಡಗುಗಳನ್ನು ನಿರ್ವಹಿಸುತ್ತವೆ.

## ಕುವೈತ್‌ನಲ್ಲಿ ಉಪ್ಪುನೀರಿನ ಘಟಕಕ್ಕೆ ಹಾನಿಯಾದ ನಂತರ ಇರಾನಿನ ಕ್ಷಿಪಣಿ ಡ್ರೋನ್ ತಡೆ, ಉದ್ವಿಗ್ನ ಪರಿಸ್ಥಿತಿ

**ಕುವೈತ್ ನಗರ, ಜುಲೈ 18:** ನೀರಿನ ಉಪ್ಪುನೀರಿನ ಘಟಕಕ್ಕೆ ಡಿಸಾಲ್ಯೀಕರಣ ಘಟಕಕ್ಕೆ ಡಿಸಾಲ್ಯೀಕರಣದ ಮೇಲೆ ದಾಳಿ ನಡೆಸಿದ ನಂತರ ಕುವೈತ್ ಇಂದು ಇರಾನಿನ ಕ್ಷಿಪಣಿಗಳು ಮತ್ತು ಡ್ರೋನ್‌ಗಳನ್ನು ತಡೆಹಿಡಿದಿದೆ ಎಂದು ಹೇಳಿದೆ, ಇದು ಎರಡು ದಿನಗಳಲ್ಲಿ ಗಲ್ಫ್ ರಾಷ್ಟ್ರದ ಮೇಲೆ ಎರಡನೇ ದಾಳಿಗೆ ಕಾರಣವಾಯಿತು, ಇದು ಸುಮಾರು 90 ಪ್ರತಿಶತ ಕುಡಿಯುವ ನೀರಿಗೆ ಡಿಸಾಲ್ಯೀಕರಣವನ್ನು ಅವಲಂಬಿಸಿದೆ. ಇರಾನಿನ ದಾಳಿಯಿಂದ ಉಂಟಾದ ಎರಡು ಇತರ ಬೆಂಕಿಯನ್ನು ನಂದಿಸುವಾಗ ಹಲವಾರು ಅಗ್ನಿಶಾಮಕ ದಳ ಮತ್ತು ಸ್ಥಾವರದ ಕೆಲಸಗಾರ ಗಾಯಗೊಂಡಿದ್ದಾರೆ ಎಂದು ಕುವೈತ್ ಅಗ್ನಿಶಾಮಕ ದಳ ತಿಳಿಸಿದೆ. ಕುವೈತ್ ತೈಲ ಘಟಕದ ಮೇಲೆ ದಾಳಿಯನ್ನು ಸಹ ವರದಿ ಮಾಡಿದೆ, ಇದರಿಂದಾಗಿ ದೇಶದ ವಿದೇಶಾಂಗ ಸಚಿವಾಲಯವು ಇರಾನ್ ನಾಗರಿಕ ತಾಣಗಳು ಮತ್ತು ನಿರ್ಣಾಯಕ ಮೂಲಸೌಕರ್ಯವನ್ನು ಉದ್ದೇಶಪೂರ್ವಕವಾಗಿ ಗುರಿಯಾಗಿಸಿಕೊಂಡಿದೆ ಎಂದು ಆರೋಪಿಸಿದೆ. "ಈ ಪ್ರಮುಖ ಸೌಲಭ್ಯಗಳನ್ನು ಪದೇ ಪದೇ ಗುರಿಯಾಗಿಸಿಕೊಳ್ಳುವುದು ನಾಗರಿಕ ತಾಣಗಳು ಮತ್ತು ಪ್ರಮುಖ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡು ವ್ಯವಸ್ಥಿತ ಪ್ರತಿಕೂಲ ವಿಧಾನವನ್ನು ಬಹಿರಂಗಪಡಿಸುತ್ತದೆ, ಅದು ನಾಗರಿಕರ ಜೀವ ಮತ್ತು ಸುರಕ್ಷತೆಗೆ ಅಪಾಯವನ್ನುಂಟುಮಾಡುತ್ತದೆ" ಎಂದು ಸಚಿವಾಲಯ ತಿಳಿಸಿದೆ. ಕ್ಷಿಪಣಿ ಬೆದರಿಕೆಯಿಂದಾಗಿ ಕುವೈತ್ ಇಂದು ಬೆಳಿಗ್ಗೆ ತನ್ನ ವಾಯುಪ್ರದೇಶವನ್ನು ತಾತ್ಕಾಲಿಕವಾಗಿ ಮುಚ್ಚಿತು, ಆದರೆ ಕುವೈತ್ ಏರ್‌ವೇಸ್ ರಾಜಧಾನಿಗೆ ಮತ್ತು ಅಲ್ಲಿಂದ ಹೆಚ್ಚಿನ ವಿಮಾನಗಳನ್ನು ಮರು ನಿಗದಿಪಡಿಸುತ್ತಿದೆ



ಎಂದು ಹೇಳಿದೆ. ಅದೇ ರೀತಿ, ಇರಾಕ್ ಕೂಡ ಇರ್ಬಿಲ್ ನಗರದ ಮೇಲೆ ದಾಳಿ ಮಾಡುವ ಡ್ರೋನ್ಗಳನ್ನು ಹೊಡೆದುರುಳಿಸಿರುವುದಾಗಿ ವರದಿ ಮಾಡಿದೆ, ಆದರೆ ಜೋರ್ಡಾನ್ನ ಸರ್ಕಾರಿ ಸ್ವಾಮ್ಯದ ಪೆಟ್ರಾ ಸುದ್ದಿ ಸಂಸ್ಥೆ ದೇಶದ ವಾಯು ರಕ್ಷಣಾ ವ್ಯವಸ್ಥೆಗಳು ಇರಾನಿನ ಕ್ಷಿಪಣಿಗಳನ್ನು ತಡೆಹಿಡಿದಿವೆ ಎಂದು ವರದಿ ಮಾಡಿದೆ, ಬಹ್ರೇನ್ ಸರ್ಕಾರವು ಅದೇ ರೀತಿ ಇರಾನಿನ ಕ್ಷಿಪಣಿಗಳು ತನ್ನ ವಾಯುಪ್ರದೇಶದ ಮೇಲೆ ಹಾರುತ್ತಿರುವಾಗ ರಾಜ್ಯದಾದ್ಯಂತ ವಾಯುದಾಳಿ ಸೈರನ್ಗಳು ಹಲವಾರು ಬಾರಿ ಮೊಳಗಿದವು ಎಂದು ಹೇಳಿದೆ.

## ರೋಹಿತ್ ಶರ್ಮಾ ನಿವೃತ್ತಿ ಊಹಾಪೋಹ ತಳ್ಳಿಹಾಕಿದ ಬಿಸಿಸಿಐ ಕಾರ್ಯದರ್ಶಿ ಸೈಕಿಯಾ

**ನವದೆಹಲಿ, ಜುಲೈ 18:** ಲಾರ್ಡ್ಸ್‌ನಲ್ಲಿ ಭಾನುವಾರ ನಡೆಯಲಿರುವ ಇಂಗ್ಲೆಂಡ್



ವಿರುದ್ಧದ ಮೂರನೇ ಏಕದಿನ ಪಂದ್ಯ ರೋಹಿತ್ ಶರ್ಮಾ ಅವರ ಕೊನೆಯ ಅಂತರರಾಷ್ಟ್ರೀಯ ಪಂದ್ಯವಾಗಲಿದೆ ಎಂಬ ಊಹಾಪೋಹಗಳನ್ನು ಬಿಸಿಸಿಐ ತಳ್ಳಿಹಾಕಿದೆ, ಹಿರಿಯ ಆರಂಭಿಕ ಆಟಗಾರ ನಿವೃತ್ತಿ ಹೊಂದುವ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ ಎಂದು ಮಂಡಳಿಯ ಕಾರ್ಯದರ್ಶಿ ದೇವಜಿತ್ ಸೈಕಿಯಾ ಹೇಳಿದ್ದಾರೆ. "ರೋಹಿತ್ ಶರ್ಮಾ ಅವರ ಭವಿಷ್ಯದ ಬಗ್ಗೆ ಮಾಧ್ಯಮಗಳಲ್ಲಿ ಸಾಕಷ್ಟು ಊಹಾಪೋಹಗಳು ನಡೆಯುತ್ತಿವೆ.

ಭಾನುವಾರ ಲಾರ್ಡ್ಸ್‌ನಲ್ಲಿ ರೋಹಿತ್ ತಮ್ಮ ಕೊನೆಯ ಪಂದ್ಯವನ್ನು ಆಡಲಿದ್ದಾರೆ ಎಂಬ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ ಎಂದು ನಾನು ದೃಢವಾಗಿ ಹೇಳಲು ಬಯಸುತ್ತೇನೆ" ಎಂದು ಸೈಕಿಯಾ ಮಾಧ್ಯಮಗಳಿಗೆ ನೀಡಿದ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ರೋಹಿತ್ ಅವರ ದೀರ್ಘಕಾಲೀನ ಭವಿಷ್ಯದ ಬಗ್ಗೆ ಸೈಕಿಯಾ ಯಾವುದೇ ಪ್ರತಿಕ್ರಿಯೆ ನೀಡದಿದ್ದರೂ, 39 ವರ್ಷದ ಆಟಗಾರ ಭಾರತದ ಏಕದಿನ ಯೋಜನೆಗಳ ಭಾಗವಾಗಿದ್ದಾರೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಇಂಗ್ಲೆಂಡ್ ವಿರುದ್ಧದ ಮೊದಲ ಎರಡು ಏಕದಿನ ಪಂದ್ಯಗಳಲ್ಲಿ ಅವರ ಹೋರಾಟದ ನಂತರ ಮತ್ತು ಭಾರತವು 2027 ರ ಏಕದಿನ ವಿಶ್ವಕಪ್ ಕಡೆಗೆ ಕ್ರಮೇಣವಾಗಿ ಸಾಗುತ್ತಿರುವುದರಿಂದ ರೋಹಿತ್ ಅವರ ಭವಿಷ್ಯದ ಬಗ್ಗೆ ವರದಿಗಳು ಮತ್ತು ಊಹಾಪೋಹಗಳು ಹೆಚ್ಚಾದ ನಂತರ ಈ ಹೇಳಿಕೆ ಬಂದಿದೆ.

## ಜಿಸಿಸಿ ಸದಸ್ಯ ರಾಷ್ಟ್ರಗಳ ಮೇಲಿನ ಇರಾನ್ ದಾಳಿಯನ್ನು ಯುದ್ಧ ಅಪರಾಧಗಳು ಎಂದು ಖಂಡಿಸಿದ ಗಲ್ಫ್ ಮಂಡಳಿ

**ರಿಯಾದ್, ಜುಲೈ 18:** ಗಲ್ಫ್ ಸಹಕಾರ ಮಂಡಳಿ (ಜಿಸಿಸಿ) ಪ್ರಧಾನ ಕಾರ್ಯದರ್ಶಿ ಜಾಸೆಮ್ ಮೊಹಮ್ಮದ್ ಅಲ್ಬುದೈವಿ ಅವರು ಸದಸ್ಯ ರಾಷ್ಟ್ರಗಳ ಮೇಲಿನ ಇರಾನ್ ದಾಳಿಯನ್ನು ಖಂಡಿಸಿದ್ದಾರೆ, ದಾಳಿಯನ್ನು "ಯುದ್ಧ ಅಪರಾಧಗಳು" ಎಂದು ಕರೆದಿದ್ದಾರೆ ಮತ್ತು ಟೆಹ್ರಾನ್ ನಾಗರಿಕ ಮೂಲಸೌಕರ್ಯವನ್ನು ಉದ್ದೇಶಪೂರ್ವಕವಾಗಿ ಗುರಿಯಾಗಿಸಿಕೊಂಡಿದೆ ಎಂದು ಆರೋಪಿಸಿದ್ದಾರೆ. ಶನಿವಾರ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ, ಅಲ್ಬುದೈವಿ ಇರಾನ್ನ ಕ್ರಮಗಳು "ಅತ್ಯಂತ ಅಪಾಯಕಾರಿ ಉಲ್ಬಣ" ವನ್ನು ಪ್ರತಿನಿಧಿಸುತ್ತವೆ ಮತ್ತು ಅಂತರರಾಷ್ಟ್ರೀಯ ಕಾನೂನು ಮತ್ತು ವಿಶ್ವಸಂಸ್ಥೆಯ (ಯುಎನ್) ಚಾರ್ಟರ್ ಅನ್ನು ಉಲ್ಲಂಘಿಸಿವೆ ಎಂದು ಹೇಳಿದ್ದಾರೆ. "ಇರಾನ್‌ನ ಕ್ರಮಗಳು ಅತ್ಯಂತ ಅಪಾಯಕಾರಿ ಉಲ್ಬಣ, ಅಂತರರಾಷ್ಟ್ರೀಯ ಕಾನೂನು ಮತ್ತು ವಿಶ್ವಸಂಸ್ಥೆಯ (ಯುಎನ್) ಚಾಟರ್‌ನ ಗಂಭೀರ ಉಲ್ಲಂಘನೆಯಾಗಿದೆ, ಜೊತೆಗೆ ಅಂತರರಾಷ್ಟ್ರೀಯ ಹೊಣೆಗಾರಿಕೆ ಮತ್ತು ವಿಚಾರಣೆಯ ಅಗತ್ಯವಿರುವ ಯುದ್ಧ ಅಪರಾಧಗಳಾಗಿವೆ, ಇದು ಎಲ್ಲಾ ಅಂತರರಾಷ್ಟ್ರೀಯ ನಿಯಮಗಳು ಮತ್ತು ಸಂಪ್ರದಾಯಗಳ ಉಲ್ಲಂಘನೆಯಾಗಿದೆ ಮತ್ತು ಪ್ರಾದೇಶಿಕ ಭದ್ರತೆ ಮತ್ತು ಸ್ಥಿರತೆಯನ್ನು ಅಸ್ಥಿರಗೊಳಿಸುವ ನಿರಂತರ ದೃಢಸಂಕಲ್ಪವಾಗಿದೆ" ಎಂದು ಅವರು ಹೇಳಿದರು. ಗಲ್ಫ್ ಸಹಕಾರ ಮಂಡಳಿಯು ಬಹ್ರೇನ್, ಕುವೈತ್, ಓಮನ್, ಕತಾರ್, ಸೌದಿ ಅರೇಬಿಯಾ ಮತ್ತು ಯುಎಇಗಳನ್ನು ಒಳಗೊಂಡಿದೆ, ಇವೆಲ್ಲವೂ ಅಮೆರಿಕದ ಪ್ರಮುಖ ಮಿತ್ರರಾಷ್ಟ್ರಗಳಾಗಿವೆ. ಯುಎಸ್ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಹಲವಾರು ವಾರಗಳ ಹಿಂದೆ ಬಣದ ಸಭೆಯಲ್ಲಿ ಭಾಗವಹಿಸಿದ್ದರು. ಯುದ್ಧದ ಸಮಯದಲ್ಲಿ, ಟೆಹ್ರಾನ್ ಎಲ್ಲಾ ಆರು ಉಅಅ ಸದಸ್ಯ ರಾಷ್ಟ್ರಗಳ ವಿರುದ್ಧ ಅನೇಕ ದಾಳಿಗಳನ್ನು ನಡೆಸಿತು, ಅಮೆರಿಕ–ಇಸ್ರೇಲ್ ಜಂಟಿ ದಾಳಿಗೆ ಪ್ರತೀಕಾರವಾಗಿ ನಾಗರಿಕ ಮೂಲಸೌಕರ್ಯ ಮತ್ತು ಗಖ ಮಿಲಿಟರಿ ತಾಣಗಳನ್ನು ಗುರಿಯಾಗಿಸಿಕೊಂಡಿತು. ಇರಾನಿನ ಕ್ಷಿಪಣಿಗಳು ಮತ್ತು ಡ್ರೋನ್‌ಗಳು ಪ್ರಮುಖ ಮೂಲಸೌಕರ್ಯ ಮತ್ತು



ಗಖ ಮಿಲಿಟರಿ ಸ್ಥಾಪನೆಗಳನ್ನು ಗುರಿಯಾಗಿಸಿಕೊಂಡು ರಾತ್ರೋರಾತ್ರಿ ಕುವೈತ್ ವಿಶೇಷವಾಗಿ ಭಾರೀ ದಾಳಿಗೆ ಒಳಗಾಯಿತು. ರಾತ್ರೋರಾತ್ರಿ ದಾಳಿಗೊಳಗಾದ ಬಹ್ರೇನ್, ಕುವೈತ್ ಮತ್ತು ಜೋರ್ಡಾನ್‌ಗೆ ಅಲ್ಬುದೈವಿ ಒಗ್ಗಟ್ಟನ್ನು ವ್ಯಕ್ತಪಡಿಸಿದರು ಮತ್ತು "ಕುವೈತ್ ರಾಜ್ಯದಲ್ಲಿ ಗಾಯಗೊಂಡ ವ್ಯಕ್ತಿಗಳಿಗೆ ಶೀಘ್ರ ಚೇತರಿಕೆ" ಹಾರೈಸಿದರು.

## ರಾಜ್ಯ ಫುಟ್ಬಾಲ್ ಸಂಸ್ಥೆ– ಕ್ರೀಡಾ ಇಲಾಖೆ ಸಂಯುಕ್ತಾಶ್ರಯಲ್ಲಿ ಫಿಫಾ ವಿಶ್ವಕಪ್ ಫೈನಲ್ ಪಂದ್ಯದ ನೇರ ಪ್ರಸಾರದ ವೀಕ್ಷಣೆಗೆ ವ್ಯವಸ್ಥೆ

**ಬೆಂಗಳೂರು, ಜು.18:** ರಾಜ್ಯ ಫುಟ್ಬಾಲ್ ಸಂಸ್ಥೆ ಹಾಗೂ ಕರ್ನಾಟಕ ಸರ್ಕಾರದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಸಾರ್ವಜನಿಕರಿಗಾಗಿ 2026ರ ಫಿಫಾ ವಿಶ್ವಕಪ್ ಫೈನಲ್ ಪಂದ್ಯದ ನೇರ ಪ್ರಸಾರದ ವೀಕ್ಷಣೆಗೆ ವ್ಯವಸ್ಥೆ ಮಾಡಲಾಗಿದೆ.

ಈ ಕಾರ್ಯಕ್ರಮದಲ್ಲಿ ಫುಟ್ಬಾಲ್ ಅಭಿಮಾನಿಗಳು, ಕ್ರೀಡಾಪಟುಗಳು, ಗಣ್ಯರು ಹಾಗೂ ಸಾರ್ವಜನಿಕರೊಂದಿಗೆ ವಿಶ್ವಕಪ್ ಫೈನಲ್ ಪಂದ್ಯದ ನೇರ ಪ್ರಸಾರವನ್ನು ಖುದ್ದು ಮುಖ್ಯಮಂತ್ರಿಗಳು ವೀಕ್ಷಿಸಲಿದ್ದಾರೆ. ಸೋಮವಾರ ಮಧ್ಯರಾತ್ರಿ 12.30 ಗಂಟೆಯಿಂದ ಬೆಂಗಳೂರಿನ ಎನ್‌ಜಿವಿ, ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ಅರ್ಜೆಂಟಿನಾ ಮತ್ತು ಸ್ಪೇನ್ ತಂಡಗಳ ನಡುವಿನ ಫಿಫಾ ವಿಶ್ವಕಪ್ ಫೈನಲ್ ಪಂದ್ಯದ ನೇರ ಪ್ರಸಾರ ನಡೆಯಲಿದೆ.

ಈ ಐತಿಹಾಸಿಕ ಕ್ರೀಡಾ ಸಂಭ್ರಮದಲ್ಲಿ ಮುದ್ರಣ, ದೃಶ್ಯ ಹಾಗೂ ಡಿಜಿಟಲ್ ಮಾಧ್ಯಮ ಪ್ರತಿನಿಧಿಗಳು ಭಾಗವಹಿಸುವಂತೆ ಕರ್ನಾಟಕ ರಾಜ್ಯ ಫುಟ್ಬಾಲ್ ಸಂಸ್ಥೆಯ ಗೌರವ ಪ್ರಧಾನ ಕಾರ್ಯದರ್ಶಿ ಎಂ. ಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಕೇಂದ್ರ ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವಿಯಾ ಮತ್ತು ಭಾರತೀಯ ಬ್ಯಾಡ್ಮಿಂಟನ್ ಸಂಘದ (ಬಿಎಐ) ಅಧ್ಯಕ್ಷ ಹಿಮಂತ ಬಿಸ್ವಾ ಶರ್ಮಾ ಅವರು ಬಿಡಬ್ಲ್ಯೂಎಫ್ ವಿಶ್ವ ಚಾಂಪಿಯನ್‌ಶಿಪ್‌ಗಳ ಮ್ಯಾಸ್ಕಾಟ್ "ಪೀಕೊ" ಅನ್ನು ನವದೆಹಲಿಯಲ್ಲಿ ಶನಿವಾರ ಅಧಿಕೃತವಾಗಿ ಅನಾವರಣಗೊಳಿಸಿದರು.

## ದುಬಾರಿಯಾದ ಫಿಫಾ ಫೈನಲ್ ಟಿಕೆಟ್; ಪ್ರತಿ ಟಿಕೆಟ್ ಬೆಲೆ 11,327 ಡಾಲರ್‌ಗಳು

**ನವದೆಹಲಿ, ಜು. 18:** ಇದೇ ಸೋಮವಾರ ತಡರಾತ್ರಿ ಆರಂಭವಾಗಲಿರುವ ಫಿಫಾ ವಿಶ್ವಕಪ್ 2026ರ ಬಹುನಿರೀಕ್ಷಿತ ಫೈನಲ್ ಪಂದ್ಯಕ್ಕೆ ಫುಟ್ಬಾಲ್ ಪ್ರೇಮಿಗಳ ಕ್ರೇಜ್ ದುಪ್ಪಟ್ಟಾಗಿದೆ. ಸ್ಪೇನ್ ಮತ್ತು ಅರ್ಜೆಂಟೀನಾ ತಂಡಗಳು ಅಂತಿಮ ಹಣಾಹಣಿಯಲ್ಲಿ ಮುಖಾಮುಖಿಯಾಗಲಿದ್ದು, ಎರಡನೇ ಬಾರಿ ಫಿಫಾ ಟ್ರೋಫಿಗೆ ಮುತ್ತಿಡಲು ಲಿಯೋನಲ್ ಮೆಸ್ಸಿ ಪಡೆ ತುದಿಗಾಲಿನಲ್ಲಿದೆ. ಈ ಮಧ್ಯೆ, ಫೈನಲ್ ಮ್ಯಾಚ್ನ ಟಿಕೆಟ್ ಬೆಲೆ ಕೇಳಿ ನೆಟ್ಟಿಗರು ಹುಬ್ಬೇರಿಸಿದ್ದಾರೆ. ಮೆಸ್ಸಿ ನೆರಳಿನಲ್ಲಿ ಕಣಕ್ಕಿಳಿಯಲಿರುವ ಅರ್ಜೆಂಟೀನಾ ಮತ್ತು ಯುವ ಸ್ಪೇನ್ ತಂಡದ ನಡುವೆ ಫೈನಲ್ ಜಿದ್ದಾಜಿದ್ದಿ ಮೂಡಿದ್ದು, ಟಿಕೆಟ್ಗಳು ಎಂದಿನಂತೆ ಗಗನಕ್ಕೇರಿವೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಗಮಿಸಲಿರುವ ಫೈನಲ್ ಪಂದ್ಯಕ್ಕೆ ವಿಶ್ವಾದ್ಯಂತ ಭಾರೀ ಡಿಮಾಂಡ್ ಆಗಿದೆ. ಜು.20ರಂದು ಅಮೆರಿಕದ ನ್ಯೂಜೆರ್ಸಿಯ ಮೆಟ್‌ಲೈಫ್ ಸ್ಟೇಡಿಯಂನಲ್ಲಿ ಪಂದ್ಯ ನಡೆಯಲಿದ್ದು, ಪಂದ್ಯವು ಭಾರತೀಯ ಕಾಲಮಾನ ಮಧ್ಯರಾತ್ರಿ 12:30ಕ್ಕೆ ಶುರುವಾಗಲಿದೆ.

ಟಿಕೆಟ್ ಸೇಲ್ಸ್ ವೇದಿಕೆಯಾದ ಟಿಕ್ಪಿಕ್ ಬಹಿರಂಗಪಡಿಸಿದ ವಿವರಗಳ ಪ್ರಕಾರ, ಫಿಫಾ ವಿಶ್ವಕಪ್ ಫೈನಲ್ ಪಂದ್ಯಕ್ಕಾಗಿ ಅಭಿಮಾನಿಗಳು ಹಣದ ಹೊಳೆಯನ್ನೇ ಹರಿಸುತ್ತಿದ್ದಾರೆ. ಪ್ರತಿ ಟಿಕೆಟ್‌ಗೆ ಸರಾಸರಿ 11,327 ಯುಎಸ್ ಡಾಲರ್ಗಳನ್ನು (ಭಾರತೀಯ ಕರೆನ್ಸಿಯಲ್ಲಿ 11 ಲಕ್ಷ ರೂ.) ಕೊಟ್ಟು ಟಿಕೆಟ್ ಖರೀದಿ ಮಾಡುತ್ತಿದ್ದಾರೆ ಎಂದು ವರದಿಯಾಗಿದೆ. ಇದು ಅಮೆರಿಕಾದ ಕ್ರೀಡಾ ಇತಿಹಾಸದಲ್ಲಿ ಇದುವರೆಗೆ ಯಾವುದೇ ಕ್ರೀಡೆಗೂ ಈ ಮಟ್ಟಿಗಿನ ಗರಿಷ್ಠ ಸರಾಸರಿ ಟಿಕೆಟ್ ದರ ಸಿಕ್ಕಿರಲಿಲ್ಲ ಎಂದು ಟಿಕ್ಪಿಕ್ ಹೇಳಿದೆ. ವಾಸ್ತವವಾಗಿ, ಈ ಫಿಫಾ ಫೈನಲ್ ಸೂಪರ್ ಬೌಲ್ LVIII ನ ಟಿಕೆಟ್ ಬೆಲೆಗಳು 9,411 ಡಾಲರ್ (ಸುಮಾರು 9 ಲಕ್ಷ ರೂ.) ಗೆ ಮಾರಾಟವಾಗುತ್ತಿದೆ. ದುಬಾರಿ



ಅಥವಾ ಅತಿ ಹೆಚ್ಚು ಎಂದರೆ 11 ಲಕ್ಷ ರೂ. ಆಗಿದೆ. ಅದೇ ಕಡಿಮೆ ದರಕ್ಕೆ ಲಭ್ಯವಿರುವ ಟಿಕೆಟ್ 6,943 ಡಾಲರ್ (ಅಂದಾಜು 6.7 ಲಕ್ಷ ರೂ.) ಎಂದು ದಾಖಲಾಗಿದೆ. ಮೆಸ್ಸಿ ಮತ್ತು ಸ್ಪೇನ್ ತಂಡದಲ್ಲಿ ಯಾರಿಗೆ 2026ರ ವಿಶ್ವಕಪ್ ಕಿರೀಟ ಮುಡಿಗೇರಲಿದೆ ಎಂಬ ಕುತೂಹಲ ಸದ್ಯ ಟಿಕೆಟ್ ಬೇಡಿಕೆಗೆ ಸಖತ್ ಡಿಮಾಂಡ್ ತಂದುಕೊಟ್ಟಿದೆ ಎಂಬುದರಲ್ಲಿ ಅನುಮಾನವೇ ಇಲ್ಲ.